ಲಿಖಿತ ಮೂಲಕ
ಉತ್ತರಿಸುವ ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೩೬

**ಪಟ್ಟಿ – ೦೪**

# ಕರ್ನಾಟಕ ವಿಧಾನ ಪರಿಷತ್ತು

**ನೂರ ನಲವತ್ತೆರಡನೆಯ ಅಧಿವೇಶನ**

**ಗುರುವಾರ, ದಿನಾಂಕ : ೧೦ನೇ ಡಿಸೆಂಬರ್, ೨೦೨೦**

---

## ಸಮೂಹ – IV

೧. ಮುಖ್ಯಮಂತ್ರಿಗಳು.

೨. ಗೃಹ ಸಚಿವರು.

೩. ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು.

೪. ಜಲಸಂಪನ್ಮೂಲ ಸಚಿವರು.

೫. ಅಬಕಾರಿ ಸಚಿವರು.

---

## ಬೀದರ್ ಜಿಲ್ಲೆಯ ಪ್ರವಾಸೋದ್ಯಮದಲ್ಲಿ ರೂ.೨೭೦.೦೦ ಲಕ್ಷಗಳ ಅನುದಾನ ಕುರಿತು

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೬೬ (೪೯೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ನಗರದ ವ್ಯಾಪ್ತಿಯಲ್ಲಿ ಬರುವ ಶಿಕಾರಗ ಮತ್ತು ಕರೇಜ್ ಪುನರುತ್ಥಾನ, ಕರೇಜ್‌ದಲ್ಲಿ ಹೂಳು ತೆಗೆಯುವುದು, ಸುತ್ತುಗೋಡೆ, ನೀರು ಶುದ್ಧೀಕರಣ, ಉದ್ಯಾನವನ ಹಾಗೂ ಪ್ರವಾಸಿಗರಿಗೆ ಮೂಲಭೂತ ಸೌಕರ್ಯ ಅಭಿವೃದ್ಧಿ ಕಾಮಗಾರಿಯನ್ನು ರೂ. ೨೭೦.೦೦ ಲಕ್ಷಗಳಲ್ಲಿ ಕೈಗೊಳ್ಳಲು ಅನುಮೋದನೆ ನೀಡಲಾಗಿದೆಯೇ ;

(ಆ) ಇದಕ್ಕಾಗಿ ಎರಡು ಬಾರಿ ಟೆಂಡರ್ ಕರೆಯಲಾಗಿದ್ದು, ಎರಡು ಟೆಂಡರ್‌ಗಳಲ್ಲಿಯೂ ಅರ್ಹ ಗುತ್ತಿಗೆದಾರರು ಆಯ್ಕೆಯಾಗಿರುವುದಿಲ್ಲವೇ ; ಸದರಿ ಕಾಮಗಾರಿಯನ್ನು ಪ್ರಾರಂಭಿಸದಿರುವುದರಿಂದ ಅವುಗಳನ್ನು ರದ್ದುಪಡಿಸಲು ಆದೇಶಿಸಿರುವುದು ನಿಜವೇ ; ಹಾಗಿದ್ದಲ್ಲಿ, ಮಂಜೂರಾದ ರೂ. ೨.೭೦ ಕೋಟಿ ಹಣವನ್ನು ಯಾವ ಕಾಮಗಾರಿಗೆ ಉಪಯೋಗಿಸಲ್ಪಟ್ಟಿದೆ ; (ಸಮಗ್ರ ಮಾಹಿತಿ ಒದಗಿಸುವುದು)

(ಇ) ಬೀದರ್, ಕಲಬುರಗಿ ಹಾಗೂ ವಿಜಯಪುರದಲ್ಲಿರುವ ಸ್ಮಾರಕ ಮತ್ತು ಕೋಟೆಗಳನ್ನು ಒಳಗೊಂಡಂತೆ ಕೇಂದ್ರ ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಮಂತ್ರಾಲಯದಿಂದ ಯುನೆಸ್ಕೋ ಅಂಗ ಸಂಸ್ಥೆಗೆ ಸಲ್ಲಿಸಲಾದ ಸೈಟ್ ಮ್ಯಾನೇಜ್‌ಮೆಂಟ್ ಮತ್ತು ಡೋಸಿಯರ್ ಯಾವ ಹಂತಕ್ಕೆ ಬಂದಿದೆ ; (ಪ್ರತಿಯನ್ನು ಒದಗಿಸುವುದು)

(ಈ) ೨೦೧೫-೨೦೧೬ನೇ ಸಾಲಿನಲ್ಲಿ ಕೇಂದ್ರದ HRIDAY (ಹೆರಿಟೇಜ ಸಿಟಿ ಡೆವಲಪ್ಮೆಂಟ್ ಅಂಡ್ ಆಗುಮೆಂಟೇಷನ್ ಯೋಜನೆ) ಅಡಿಯಲ್ಲಿ ಸಲ್ಲಿಸಲಾದ ಪ್ರಸ್ತಾವನೆಯ ಬಗ್ಗೆ ಸರ್ಕಾರ ಯಾವ ಕ್ರಮಕೈಗೊಂಡಿದೆ ; (ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)

(ಉ) ಬೀದರ್‌ನ ಗೋರನಳ್ಳಿ ಗ್ರಾಮ ನೌಬಾದನಲ್ಲಿರುವ ಕೆರೆಗಳ ಅತಿಕ್ರಮಣ ಬಗ್ಗೆ ಸರ್ಕಾರಕ್ಕೆ ಮಾಹಿತಿ ಇದೆಯೇ ; ಈ ಕೆರೆಗಳಿಗೆ ನೀರು ಪೂರೈಸುವ ಹಳ್ಳಗಳ (ಫಸ್ಟ್ ಆರ್ಡರ್ ಸ್ಟ್ರೀಮ್ಸ್) ಮಾಹಿತಿ ಇದೆಯೇ ; ಇದ್ದಲ್ಲಿ, ಈ ಕೆರೆಗಳ ಸಂರಕ್ಷಣೆಗಾಗಿ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ? (ಮಾಹಿತಿ ಒದಗಿಸುವುದು)

## ಬೀದರ್ ಜಿಲ್ಲೆಯಲ್ಲಿ ಸಣ್ಣ ಕೈಗಾರಿಕೆ ಅಭಿವೃದ್ಧಿ ಕುರಿತು

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೬೭ (೪೯೫) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯಲ್ಲಿ ಸಣ್ಣ ಕೈಗಾರಿಕಾ ಅಭಿವೃದ್ಧಿಗಾಗಿ ಸರ್ಕಾರ ರಚಿಸಿದ ನಿಯಮಗಳಿಂದ ಎಷ್ಟು ಪ್ರತಿಶತ ಲಾಭವಾಗಿದೆ ;

(ಆ) ಸದರಿ ನಿಯಮದಿಂದ ಜಿಲ್ಲೆಯಲ್ಲಿ ಎಷ್ಟು ಉದ್ಯೋಗಗಳು ಲಭಿಸಿವೆ ;

(ಇ) ಸಣ್ಣ ಕೈಗಾರಿಕೆಗಳು ಬೃಹತ್ ಪ್ರಮಾಣದಲ್ಲಿ ಜಿಲ್ಲೆಗೆ ಬಾರದಿದ್ದಕ್ಕೆ ಕಾರಣವೇನು ; ಈ ಕುರಿತು ಸರ್ಕಾರ ಯಾವ ಯಾವ ನೀತಿ ಅನುಸರಿಸುತ್ತಿದೆ ?

## ಬೀದರ್ ಜಿಲ್ಲೆಯ ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗಕ್ಕೆ ನಿವೇಶನ ಕುರಿತು

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೬೮ (೪೯೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ನಗರದ ಗೋರನಳ್ಳಿ ಸರ್ವೆ ನಂ. ೨೭ ಮತ್ತು ೨೮ರಲ್ಲಿ ೨ ಎಕರೆ ಜಮೀನನ್ನು ನಗರ ಸಭೆಯಿಂದ ಹಸ್ತಾಂತರಿಸಲು ಕ್ರಮ ವಹಿಸಲಾಗಿದೆಯೇ ; ಸದರಿ ಜಮೀನನ್ನು ಯಾವಾಗ ಹಸ್ತಾಂತರ ಮಾಡಲಾಗುವುದು ;

(ಆ) ೨೦೧೭–೨೦೧೮ ಮತ್ತು ೨೦೧೯–೨೦೨೦ನೇ ಸಾಲಿನಲ್ಲಿ ೧೦೨ ಮತ್ತು ೫೧೫ ಮನೆಗಳನ್ನು ಯಾವ ತಾಲ್ಲೂಕುಗಳಲ್ಲಿ ಹಂಚಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಮನೆಗಳ/ನಿವೇಶನ ಹಂಚುವ ಯೋಜನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಯಾವಾಗ ಹಂಚಿಕೆ ಮಾಡಲಾಗುವುದು ?

## ಸ್ವದೇಶ ಯೋಜನೆ ಕುರಿತು

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೬೯ (೪೯೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯು ಸ್ವದೇಶ ಯೋಜನೆಯಡಿಯಲ್ಲಿ ೨೦೧೬ರಲ್ಲಿ ಟೂರಿಸಂ ಸರ್ಕ್ಯೂಟ್ ಬೀದರ್, ಬಸವಕಲ್ಯಾಣ, ಕಲಬುರಗಿ, ವಿಜಯಪುರ, ಬಾದಾಮಿ, ಐಹೊಳೆ, ಪಟ್ಟದಕಲ್ಲು ಇವುಗಳ

ಮಧ್ಯೆ ರಾಯಲ್ ಡೆಕ್ಕನ್ ಟೂರಿಸಂ ಸರ್ಕ್ಯೂಟ್ ಅಭಿವೃದ್ಧಿಗೋಸ್ಕರ ಅನುಮೋದನೆಗಾಗಿ ೨೦೧೭-೧೮ನೇ ಸಾಲಿನಲ್ಲಿ ಕೇಂದ್ರ ಸರ್ಕಾರಕ್ಕೆ ಸಲ್ಲಿಸಿದ್ದು ನಿಜವೇ ;

(ಆ) ಕೇಂದ್ರ ಸರ್ಕಾರ ಕೆಲವೊಂದು ಮಾಹಿತಿಯನ್ನು ಕೋರಿದ್ದು, ಕೇಂದ್ರ ಸರ್ಕಾರಕ್ಕೆ ಮಾಹಿತಿಯನ್ನು ಸಲ್ಲಿಸಲಾಗಿದೆಯೇ ; ಸಲ್ಲಿಸಿದ್ದಲ್ಲಿ, ಮಂಜೂರಾತಿಯು ಯಾವ ಹಂತದಲ್ಲಿದೆ ? (ವಿವರ ನೀಡುವುದು)

## ರಾಜ್ಯದಲ್ಲಿ ಳಜಿ ವಿನಾಯಿತಿ ಪಡೆದ ಸಂಸ್ಥೆಗಳ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-**

೨೭೦ (೪೦೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಳಜಿ ವಿನಾಯಿತಿ ಪಡೆದ ಸಂಸ್ಥೆಗಳು ಯಾವುವು ; (ಪಟ್ಟಿ ನೀಡುವುದು)

(ಆ) ಕಳೆದ ೦೩ ವರ್ಷಗಳಲ್ಲಿ ಕಿಯೋನಿಕ್ಸ್ ಸಂಸ್ಥೆಯ ಮೂಲಕ ಸರ್ಕಾರದ ಯಾವ ಯಾವ ಇಲಾಖೆಗಳಿಗೆ ಎಷ್ಟು ಮೊತ್ತದ ವಸ್ತುಗಳನ್ನು ಸರಬರಾಜು ಮಾಡಲಾಗಿದೆ ; (ಇಲಾಖಾವಾರು ವಿವರ ನೀಡುವುದು)

(ಇ) ಕಿಯೋನಿಕ್ಸ್ ಮೂಲಕ ಸರಬರಾಜು ಮಾಡಿರುವ/ಖರೀದಿ ಮಾಡಿರುವ ವಸ್ತುಗಳು ಯಾವುವು ; (ವಿವರ ನೀಡುವುದು)

(ಈ) ಕಿಯೊನಿಕ್ಸ್ ಮೂಲಕ ಕಳೆದ ೦೩ ವರ್ಷಗಳಲ್ಲಿ ಖರೀದಿ ಮಾಡಿದ ಹಾಗೂ ಸರಬರಾಜು ಮಾಡಿದ ಕಂಪ್ಯೂಟರ್‌ಗಳೆಷ್ಟು; ಅವುಗಳ ಕಾನ್ಫಿಗರೇಷನ್ ಏನು ; (ಪ್ರತಿಯೊಂದು ವಸ್ತುಗಳ ಖರೀದಿ ಹಾಗೂ ಸರಬರಾಜುವಾರು ಪೂರ್ಣ ವಿವರ ನೀಡುವುದು)

(ಉ) ಕಳೆದ ೦೩ ವರ್ಷಗಳಲ್ಲಿ ಕ್ರೈಸ್ ಸಂಸ್ಥೆಗೆ ಸರಬರಾಜು ಮಾಡಲಾದ ವಸ್ತುಗಳ ಬೆಲೆ ಎಷ್ಟು? (ಸಂಪೂರ್ಣ ವಿವರ ನೀಡುವುದು)

## ಬಯಲು ಸೀಮೆ ಅಭಿವೃದ್ಧಿ ಪ್ರಾಧಿಕಾರದ ಅನುದಾನ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-**

೨೭೧ (೪೦೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೦೩ ವರ್ಷಗಳಿಂದ ಬಯಲುಸೀಮೆ ಪ್ರಾಧಿಕಾರಕ್ಕೆ ವಿಶೇಷ ಸಾಮಾನ್ಯ ಯೋಜನೆಯಡಿ ಅಥವಾ ಬಂಡವಾಳ ವೆಚ್ಚ ಯೋಜನೆಯಡಿ ಒದಗಿಸಿರುವ ಅನುದಾನ ಎಷ್ಟು ;

(ಆ) ಶಾಸಕರ ಶಿಫಾರಸ್ಸಿನ ಮೇರೆಗೆ ತೆಗೆದುಕೊಂಡ ಪ್ರತಿಯೊಂದು ಕಾಮಗಾರಿಗಳು ಯಾವುವು ; ಸದರಿ ಕಾಮಗಾರಿಗಳಿಗೆ ಒದಗಿಸಿದ ಅನುದಾನದ ಮೊತ್ತ ಹಾಗೂ ಬಿಡುಗಡೆಯಾದ ಅನುದಾನದ ಮೊತ್ತ ಎಷ್ಟು ; (ಸಂಪೂರ್ಣ ವಿವರವನ್ನು ಒದಗಿಸುವುದು)

(ಇ) ಬಯಲುಸೀಮೆ ಅಭಿವೃದ್ಧಿ ಪ್ರಾಧಿಕಾರದಿಂದ ಅನುದಾನ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ ; ಸಲ್ಲಿಕೆಯಾಗಿದ್ದಲ್ಲಿ, ಅನುಮೋದನೆ ಪಡೆದು ಅನುದಾನ ಒದಗಿಸುವುದು ಯಾವಾಗ ;

(ಈ) ಶಾಸಕರ ಕೋರಿಕೆಯ ಪ್ರಸ್ತಾವನೆಗಳ ಪಟ್ಟಿಯನ್ನು ಒದಗಿಸುವುದು;

(ಉ) ಇನ್ನಿತರೆ ಯಾವುದಾದರೂ ಯೋಜನೆಗಳ ಮೂಲಕ ಅನುದಾನವನ್ನು ನೀಡಲಾಗಿದೆಯೇ ? (ಸಂಪೂರ್ಣ ಮಾಹಿತಿ ನೀಡುವುದು)

# ಆರ್ಥಿಕ ಇಲಾಖೆಯ ಮಿತವ್ಯಯದ ಆದೇಶವನ್ನು ಹಿಂಪಡೆಯುವ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-**

೨೭೨ (೪೦೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅನುದಾನಿತ ಪ್ರಾಥಮಿಕ, ಪ್ರೌಢ ಶಾಲೆ ಹಾಗೂ ಪದವಿ ಪೂರ್ವ ಹಾಗೂ ಪದವಿ ಕಾಲೇಜುಗಳಲ್ಲಿ ಖಾಲಿ ಹುದ್ದೆ ಭರ್ತಿ ಮಾಡುವ ಕುರಿತಂತೆ ಆರ್ಥಿಕ ಇಲಾಖೆಯು ಆರ್ಥಿಕ ಮಿತವ್ಯಯದ ಆದೇಶ ಹೊರಡಿಸಿ ಹುದ್ದೆ ಭರ್ತಿ ಮಾಡುವುದನ್ನು ತಡೆಹಿಡಿಯಲಾಗಿದೆಯೇ ; ಹಾಗಿದ್ದಲ್ಲಿ, ಎಂದಿನಿಂದ ತಡೆಹಿಡಿಯಲಾಗಿದೆ ; (ಆದೇಶದ ಪ್ರತಿ ಒದಗಿಸುವುದು)

(ಆ) ಈಗಾಗಲೇ ಆರ್ಥಿಕ ಇಲಾಖೆಯು ಅನುಮತಿ ನೀಡಿರುವ ಹುದ್ದೆಗಳಿಗೆ ಅನುದಾನ ಒದಗಿಸಲು ಸರ್ಕಾರಕ್ಕಿರುವ ತೊಂದರೆ ಏನು ;

(ಇ) ಈ ಆದೇಶದಿಂದ ಅನುದಾನಿತ ವ್ಯವಸ್ಥೆಯ ಎಲ್ಲ ನೌಕರರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ಆರ್ಥಿಕ ಮಿತವ್ಯಯದ ಆದೇಶವನ್ನು ಹಿಂಪಡೆಯುವಂತೆ ಶಾಸಕರ ಒತ್ತಡಗಳು ಮುಖ್ಯಮಂತ್ರಿಗಳಿಗೆ ಬಂದಿವೆಯೇ ; (ಪ್ರತಿಯೊಂದು ಪತ್ರದ ವಿವರ ಹಾಗೂ ಪ್ರಸ್ತಾವನೆಗಳ ವಿವರವನ್ನು ಒದಗಿಸುವುದು)

(ಉ) ಮುಖ್ಯಮಂತ್ರಿಗಳ ಷರಾ ಸಹಿತ ಕಡತವು ಯಾವ ಹಂತದಲ್ಲಿದೆ ;

(ಊ) ಆರ್ಥಿಕ ಇಲಾಖೆಯು ಅನುಮತಿ ನೀಡಿ ಹುದ್ದೆ ಭರ್ತಿ ಮಾಡಲು ಸಹ ಅನುಮತಿ ನೀಡಿರುವ ಕಡತಗಳಿಗೆ ವೇತನ ಒದಗಿಸಲು ಸರ್ಕಾರ ಆರ್ಥಿಕ ಇಲಾಖೆ ಮುಂದಾಗುವುದೇ ; ಆರ್ಥಿಕ ಮಿತವ್ಯಯದ ಆದೇಶವನ್ನು ಯಾವಾಗ ಹಿಂಪಡೆಯಲಾಗುವುದು ?

## ಕೆರೆಗಳ ಒತ್ತುವರಿ ಕುರಿತು

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೭೩ (೪೯೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಕೆರೆಗಳಾವುವು ; (ಅವುಗಳ ವಿಸ್ತೀರ್ಣ, ಕ್ಯಾಚ್‌ಮೆಂಟ್ ಪ್ರದೇಶ ಮುಂತಾದ ವಿವರಗಳನ್ನು ಸರ್ವೆ ನಂಬರ್, ವಾರ್ಡ್‌ವಾರು, ಮತ ಕ್ಷೇತ್ರವಾರು ವಿವರ ನೀಡುವುದು)

(ಆ) ಪಾಲಿಕೆಯ ಕೆರೆಗಳು ಒತ್ತುವರಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕೆರೆಗಳು ಎಷ್ಟು ಒತ್ತುವರಿಯಾಗಿವೆ ; ಒತ್ತುವರಿ ಮಾಡಿರುವವರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಯಾರು ಯಾವ ಸರ್ವೆ ನಂಬರುಗಳಲ್ಲಿ ಎಷ್ಟು ಕ್ಷೇತ್ರವನ್ನು ಒತ್ತುವರಿ ಮಾಡಿದ್ದಾರೆ ; (ವಾರ್ಡ್‌ವಾರು, ಮತಕ್ಷೇತ್ರವಾರು ಸಂಪೂರ್ಣ ವಿವರಗಳನ್ನು ನೀಡುವುದು)

(ಇ) ಕೆರೆಗಳ ಒತ್ತುವರಿಯನ್ನು ತೆರವುಗೊಳಿಸಿ ನಿಗದಿತ ವಿಸ್ತೀರ್ಣದಂತೆ ತಡೆಗೋಡೆಗಳನ್ನು ಹಾಕಿ ಸಂರಕ್ಷಣೆ ಮಾಡಿ ಅಭಿವೃದ್ಧಿಪಡಿಸುವ

ಉದ್ದೇಶ ಸರ್ಕಾರಕ್ಕಿದೆಯೇ ; ಹಾಗಿದ್ದಲ್ಲಿ, ಸರ್ಕಾರದಿಂದ ಯಾವಾಗ ಕ್ರಮ ಕೈಗೊಳ್ಳಲಾಗುವುದು ;

(ಈ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ವಿವಿಧ ಮೂಲಗಳಿಂದ ಸಂಗ್ರಹವಾಗಬೇಕಾದ/ ಸಂಗ್ರಹವಾಗುವ ಪ್ರತಿ ತಿಂಗಳ ಆದಾಯವೆಷ್ಟು ? (ವಿವರ ನೀಡುವುದು)

## ಕಸ ವಿಲೇವಾರಿ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೭೪ (೪೬೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕಸವನ್ನು ವಿಲೇವಾರಿ ಮಾಡಲು ಯಾವಾಗ ಗುತ್ತಿಗೆಯನ್ನು ನೀಡಲಾಗಿದೆ ; ಗುತ್ತಿಗೆಯ ಅವಧಿ ಮುಗಿದಿದೆಯೇ ; ಅದೇ ಗುತ್ತಿಗೆದಾರರನ್ನು ಮುಂದುವರೆಸಲು ನಿಯಮಗಳಲ್ಲಿ ಅವಕಾಶವಿದೆಯೇ ; ಇಲ್ಲವಾದಲ್ಲಿ, ನಿಯಮ ಉಲ್ಲಂಘಿಸಿರುವ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಆ) ದಿನಾಂಕ : ೦೧.೦೧.೨೦೧೮ ರಿಂದ ೩೦.೧೧.೨೦೨೦ ರವರೆಗೆ ಕಸ ಸಂಗ್ರಹಣಾ ಕೇಂದ್ರಕ್ಕೆ ಪ್ರತಿ ದಿನ ಯಾವ ವಾಹನದಲ್ಲಿ ಎಷ್ಟು ಟನ್ ಕಸ ಬಂದಿರುತ್ತದೆ ತೂಕವನ್ನು ಪರಿಶೀಲಿಸಲಾಗಿದೆಯೇ ; ದಿನಾಂಕ, ಪ್ರತಿ ವಾಹನದ ತೂಕದ ರಶೀದಿ ವಿವರ, ವಾಹನದ ಮಾದರಿ, ವಾಹನಗಳ ಸಂಖ್ಯೆ, ತೂಕ ಪರಿಶೀಲಿಸಿದ ಸಿಬ್ಬಂದಿಯ ಹೆಸರು, ದಿನಾಂಕವಾರು ಸಂಪೂರ್ಣ ವಿವರ ನೀಡುವುದು ;

(ಇ) ಕಸ ಸಂಗ್ರಹಣಾ ಕೇಂದ್ರದಲ್ಲಿರುವ ವೇ–ಬ್ರಿಡ್ಜ್‌ನ ನಿರ್ವಹಣೆಯನ್ನು ಪಾಲಿಕೆ ನಿರ್ವಹಿಸುವುದೇ ಅಥವಾ ಗುತ್ತಿಗೆದಾರರು ನಿರ್ವಹಿಸುತ್ತಾರೆಯೇ ; ಇದು ಪ್ರತಿ ವರ್ಷ ತೂಕ ಮತ್ತು ಅಳತೆ ಇಲಾಖೆಯ ತಪಾಸಣೆಗೆ ಒಳಪಟ್ಟಿದೆಯೇ ; (ವಿವರಗಳನ್ನು ಒದಗಿಸುವುದು)

(ಈ) ಕಸ ಸಂಗ್ರಹಣೆ ಹಾಗೂ ವಿಲೇವಾರಿ ಸರಿಯಾದ ರೀತಿಯಲ್ಲಿ ನಡೆಯದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡಿರುವ ಕ್ರಮಗಳಾವುವು ?

## ಚಿಕ್ಕಬಳ್ಳಿ ಕೆರೆಯ ಪಿಕಪ್ ನಾಲೆಯ ಅಭಿವೃದ್ಧಿ ಕಾಮಗಾರಿಯ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೭೫ (೪೬೪) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆ, ಕೆರೆಗೋಡು ಹೋಬಳಿ ಚಿಕ್ಕಬಳ್ಳಿ ಕೆರೆಯ ಪಿಕಪ್ ನಾಲೆಯ ಅಭಿವೃದ್ಧಿ ಕಾಮಗಾರಿ ಅಂದಾಜಿನಲ್ಲಿ ಗೂಳೂರು ಬೆಟ್ಟದ ಬಳಿ ೧೫೦ ಮೀಟರ್ ಉದ್ದದ ಮೇಲ್ಗಾಲುವೆಯನ್ನು ನಿರ್ಮಿಸುವ ಸಂಬಂಧ ಸಮೀಕ್ಷಾ ಕಾರ್ಯಕೈಗೊಂಡು ವಿನ್ಯಾಸ ಹಾಗೂ ಸಾಧ್ಯಾಸಾಧ್ಯತೆ ಬಗ್ಗೆ ಪರಿಶೀಲನೆಯನ್ನು ಯಾವಾಗ ನಡೆಸಲಾಗಿದೆ; ಸಮೀಕ್ಷಾ ಕಾರ್ಯ ಹಾಗೂ ಸಾಧ್ಯಾಸಾಧ್ಯತೆಯ ವರದಿಯ ಅಂಶಗಳೇನು ;

(ಆ) ಸದರಿ ಕಾಮಗಾರಿಯನ್ನು ಟೆಂಡರ್ ಪಡೆದ ಗುತ್ತಿಗೆದಾರರು ಒಪ್ಪಂದ ಮಾಡಿಕೊಳ್ಳಲು ನಿರಾಕರಿಸುತ್ತಿರುವುದಕ್ಕೆ ಕಾರಣಗಳೇನು; ಮರು ಟೆಂಡರ್ ಕರೆಯಲಾಗಿದೆಯೇ ; ಮರು ಟೆಂಡರ್ ಕರೆಯದಿರಲು ಕಾರಣಗಳೇನು ;

(ಇ) ಕಾವೇರಿ ನೀರಾವರಿ ನಿಗಮದ ಮಂಡಳಿಯ ೭೦ನೇ ಸಭೆಯಲ್ಲಿ ಈ ಕಾಮಗಾರಿಯನ್ನು ಕೈಬಿಟ್ಟಿರುವುದು ನಿಜವೇ; ಹಾಗಿದ್ದಲ್ಲಿ, ಕಾರಣಗಳೇನು ;

(ಈ) ಸದರಿ ಕಾಮಗಾರಿಯಿಂದ ರೈತರಿಗೆ/ಸಾರ್ವಜನಿಕರಿಗೆ ತುಂಬಾ ಉಪಯೋಗವಾಗಲಿದ್ದು, ಈ ಕಾಮಗಾರಿಯನ್ನು ಮತ್ತೆ ಕೈಗೆತ್ತಿಕೊಳ್ಳಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; ಈ ಕುರಿತು ಸರ್ಕಾರದ ನಿಲುವೇನು ?

## ರೈತರ ಕೃಷಿ ಭೂಮಿಗೆ ಕೊಳವೆ ಬಾವಿಯಿಂದ ನೀರು ಹರಿಸಲು ವಿದ್ಯುತ್ ಸಂಪರ್ಕ ನೀಡುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೭೬ (೪೬೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆ ನಾಗಮಂಗಲ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ರೈತರ ಕೃಷಿ ಭೂಮಿಗೆ ಕೊಳವೆ ಬಾವಿಯಿಂದ ನೀರು ಹರಿಸುವ ಸಂಬಂಧ ವಿದ್ಯುತ್ ಸಂಪರ್ಕ (ಟಿ.ಸಿ) ನೀಡಲು ಯಾವ ಹೊಸ ಯೋಜನೆ ಹಮ್ಮಿಕೊಳ್ಳಲಾಗಿದೆ; ಯೋಜನೆಗೆ ಸಂಬಂಧಿಸಿದ ಸುತ್ತೋಲೆ ಒದಗಿಸುವುದು ;

(ಆ) ನಾಗಮಂಗಲ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಈ ಯೋಜನೆ ನಿರ್ವಹಿಸುತ್ತಿರುವ ಗುತ್ತಿಗೆದಾರರು ಯಾರ್‍ಯಾರು; ಅಂದಾಜು ಮೊತ್ತವೆಷ್ಟು ; (ಸಂಪೂರ್ಣ ವಿವರ ನೀಡುವುದು)

(ಇ) ರೈತರ ಕೃಷಿ ಭೂಮಿಯ ಪಂಪ್‌ಸೆಟ್‌ಗೆ ಸಂಪರ್ಕ ಕಲ್ಪಿಸುವ ಟ್ರಾನ್ಸ್‌ಫಾರ್ಮರ್ (ಟಿ.ಸಿ) ದುರಸ್ಥಿಯಾದರೆ ಅದನ್ನು ಎಷ್ಟು ದಿನಗಳಲ್ಲಿ ಬದಲಾವಣೆ ಮಾಡಿ ಹೊಸ/ರಿಪೇರಿ ಮಾಡಲಾದ

ಟಿ.ಸಿ.ಗಳನ್ನು ಅಳವಡಿಸಲಾಗುತ್ತದೆ ; (ಅಳವಡಿಸಲು ಇರುವ ಕಾಲಾವಕಾಶ ಎಷ್ಟು ; ಈ ಬಗೆಗಿನ ಸರ್ಕಾರದ ಸುತ್ತೋಲೆಯನ್ನು ನೀಡುವುದು)

(ಈ) ನಾಗಮಂಗಲ ತಾಲ್ಲೂಕು ಹೊಣಕೆರೆ ಹೋಬಳಿ ಕಿರಿಯ ಅಭಿಯಂತರರು ದುರಸ್ಥಿಯಲ್ಲಿರುವ ಟಿ.ಸಿ. ಬದಲಾವಣೆ ಮಾಡಲು ರೈತರಿಂದ ಹಣ ಕೇಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇವರ ವಿರುದ್ಧ ಯಾವ ಕ್ರಮಕೈಗೊಳ್ಳಲಾಗಿದೆ ?

## ಒಂದೇ ಕಾಮಗಾರಿಗೆ ಎರಡು ಬಾರಿ ಬಿಲ್ಲು ಸಲ್ಲಿಸಿರುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೭೭ (೪೬೬) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆ, ನಾಗಮಂಗಲ ತಾಲ್ಲೂಕು ನಂ-೭ ಹೇಮಾವತಿ ನಾಲಾ ವಿಭಾಗ ವ್ಯಾಪ್ತಿಯಲ್ಲಿ ನಾಲಾ ವ್ಯಾಪ್ತಿಗೆ ಒಳಪಟ್ಟ ಗ್ರಾಮಗಳ ಪರಿಮಿತಿಯಲ್ಲಿ ರಸ್ತೆ ಅಭಿವೃದ್ಧಿಪಡಿಸುವ ಕಾಮಗಾರಿಗಳಲ್ಲಿ ಲೆಕ್ಕೇಗೌಡನ ಕೊಪ್ಪಲು-ದೊಂದೆಮಾದಹಳ್ಳಿ ಗ್ರಾಮದವರೆಗೆ, ಶಿಕಾರಿಪುರ- ಪಡುವಲಪಟ್ಟಣ ರಸ್ತೆ ಕಾಮಗಾರಿ ಮತ್ತು ತುಪ್ಪದಮಡು-ಅಂಕುಶಪುರ ರಸ್ತೆ ಒಂದೇ ಕಾಮಗಾರಿಯನ್ನು ಹೆಚ್.ಎಲ್.ಬಿ.ಸಿ. ನಂ-೭ ಮತ್ತು ಕಾಡಾ ಯೋಜನೆ ತುಮಕೂರು ವಿಭಾಗದ ಇಲಾಖೆ ವತಿಯಿಂದ ನಿರ್ವಹಿಸಿ ಒಂದೇ ಕಾಮಗಾರಿಗೆ ಎರಡು ಬಿಲ್ಲು ಪಡೆದಿರುವುದು ಸರ್ಕಾರದ ಗಮನಕ್ಕೆ

ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ/ಇಲಾಖೆ ಸಂಬಂಧಪಟ್ಟ ಇಲಾಖೆ ಇಂಜಿನಿಯರ್ ಮತ್ತು ಗುತ್ತಿಗೆದಾರರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಆ) ೨೦೧೮-೧೯ ರಿಂದ ೨೦೨೦-೨೧ನೇ ಸಾಲಿನವರೆಗೆ ನಾಗಮಂಗಲ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಹೇಮಾವತಿ ನಾಲಾ ವಿಭಾಗ ಮತ್ತು ಕಾಡಾ ಯೋಜನೆ ತುಮಕೂರು ವಿಭಾಗದ ಇಲಾಖಾ ವತಿಯಿಂದ ನಿರ್ವಹಿಸಿರುವ ಕಾಮಗಾರಿಗಳಾವುವು ; ಸದರಿ ಕಾಮಗಾರಿಗಳ ಗುಣಮಟ್ಟ ಪರಿಶೀಲನೆ ಮಾಡಿದ ಏಜೆನ್ಸಿ/ಸಂಸ್ಥೆ ಯಾವುದು ? (ಪರಿಶೀಲನಾ ವರದಿ ಪ್ರತಿ ನೀಡುವುದು)

## N.R.B.C 15,16,17,18 ನಾಲೆಗಳಿಗೆ ನೀರು ಬಾರದಿರುವ ಕುರಿತು

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೭೮ (೨೩೫) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಎನ್.ಆರ್.ಬಿ.ಸಿ ನಂ.೧೫,೧೬,೧೭ ಮತ್ತು ೧೮ ನೇ ಡಿಸ್ಟ್ರಿಬ್ಯೂಟರ್‌ಲ್ಲಿ ಸುಮಾರು ೨೦ ಸಾವಿರ ಹೆಕ್ಟೇರ್ ಪ್ರದೇಶದ ನಾಲೆಗಳ ಮುಖಾಂತರ ನೀರು ಬಾರದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು ;

(ಇ) ಯಾವಾಗ ನಾಲೆಗಳ ಮುಖಾಂತರ ನೀರು ಹರಿಸಲು ಕ್ರಮಗಳನ್ನು ಕೈಗೊಳ್ಳಲಾಗುವುದು ?

# ಸ್ಟೈಪೆಂಡರಿ ನೌಕರರ ಅರ್ಹ ಸೇವೆಯನ್ನು ಪಿಂಚಣಿಗೆ ಪರಿಗಣಿಸುವ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೨೭೯ (೪೭೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೧೯೭೮ರಲ್ಲಿ ನಿರುದ್ಯೋಗಿ ಪದವೀಧರರನ್ನು ಸ್ಟೈಪೆಂಡರಿ ಮೂಲಕ ವಿವಿಧ ಇಲಾಖೆಗಳಲ್ಲಿ ನೇಮಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ೧೯೮೮ರಲ್ಲಿ ಸ್ಟೈಪೆಂಡರಿ ಪದವೀಧರರಿಗೆ ಶೇ.೫೦ರಷ್ಟು ಮೀಸಲಾತಿ ನೀಡಲು ತೀರ್ಮಾನಿಸಿ ಇಲಾಖೆಗೆ ನೇಮಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸ್ಟೈಪೆಂಡರಿ ಪದವೀಧರರು ಸುಮಾರು ೧೨,೧೩ ವರ್ಷಗಳು ಮಿತಿ ವೇತನ ಪದವೀಧರರಾಗಿ ಸೇವೆ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಈ) ಸ್ಟೈಪೆಂಡರಿ ಪದವೀಧರರು ಹಾಗೂ ದಿನಗೂಲಿ ನೌಕರರ ಅರ್ಹ ಸೇವೆಯನ್ನು ನಿವೃತ್ತಿ ಪಿಂಚಣಿಗೆ ಪರಿಗಣಿಸುವ ಸಂಬಂಧ ಮಾನ್ಯ ಕೆ.ಎ.ಟಿ. ನ್ಯಾಯಾಲಯದಲ್ಲಿ ದಿನಾಂಕ : ೨೪.೧೦.೨೦೨೦ರಲ್ಲಿ ತೀರ್ಪು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಈ ತೀರ್ಪಿನಲ್ಲಿ ನಿವೃತ್ತಿ ನೌಕರರ ಅರ್ಹ ಸೇವೆಯನ್ನು ಸೇವಾ ಪಿಂಚಣಿಗೆ ಪರಿಗಣಿಸಲು ತಿಳಿಸಲಾಗಿದೆಯೇ; (ವಿವರ ಒದಗಿಸುವುದು)

(ಊ) ಮಿತಿ ವೇತನದಲ್ಲಿ ನಿರ್ವಹಿಸಿರುವ ಸೇವೆಯನ್ನು ಪರಿಗಣಿಸಿ ಪಿಂಚಣಿ ಸೌಲಭ್ಯ ನೀಡುವಂತೆ ಆದೇಶದಲ್ಲಿ ತಿಳಿಸಿದ್ದರೂ ಸಹ ಸರ್ಕಾರದಿಂದ ಯಾವುದೇ ಕ್ರಮ ಕೈಗೊಳ್ಳದಿರಲು ಕಾರಣವೇನು ;

(ಋ) ಪ್ರಸ್ತುತ ಯಾವ ರೀತಿ ಅರ್ಹ ಸೇವೆಯನ್ನು ಪರಿಗಣಿಸಲಾಗಿದೆ; (ವಿವರ ಒದಗಿಸುವುದು)

(ಎ) ಮಾನ್ಯ ಕೆ.ಎ.ಟಿ ನ್ಯಾಯಾಲಯದ ತೀರ್ಪಿನಂತೆ ಯಾವ ಕಾಲಮಿತಿಯೊಳಗೆ ಈ ನಿವೃತ್ತಿ ನೌಕರರಿಗೆ ನ್ಯಾಯ ದೊರಕಿಸಲಾಗುವುದು ?

## ಕೆರೆಗಳ ಅಭಿವೃದ್ಧಿ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೨೮೦ (೪೭೧) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಿಕ್ಕಮಗಳೂರು ತಾಲ್ಲೂಕಿನಲ್ಲಿರುವ ಒಟ್ಟು ಕೆರೆಗಳೆಷ್ಟು; ಸದರಿ ಕೆರೆಗಳ ಅಭಿವೃದ್ಧಿಗೆ ಬಿಡುಗಡೆಗೊಂಡಿರುವ ಅನುದಾನವೆಷ್ಟು ;

(ಆ) ಚಿಕ್ಕಮಗಳೂರು ತಾಲ್ಲೂಕಿನಲ್ಲಿರುವ ಕೋಟೆಕೆರೆ, ಬಸವನಹಳ್ಳಿ ಕೆರೆಗೆ ಇತ್ತೀಚೆಗೆ ಬಿಡುಗಡೆಯಾದ ಅನುದಾನ ಎಷ್ಟು ; ಯಾವ ಯಾವ ಇಲಾಖೆಯಿಂದ ಎಷ್ಟು ಅನುದಾನ ಬಿಡುಗಡೆಯಾಗಿದೆ ;

(ಇ) ಕೆರೆಗಳ ಅಭಿವೃದ್ಧಿಗೆ ಅನುದಾನ ಬಿಡುಗಡೆ ಮಾಡುವಂತೆ ಶಿಫಾರಸ್ಸು ಪತ್ರಗಳೇನಾದರೂ ಬಂದಿವೆಯೇ ; ಹಾಗಿದ್ದಲ್ಲಿ, ಶಿಫಾರಸ್ಸು ಪತ್ರಗಳನ್ನು ನೀಡಿರುವವರ್ಯಾರು ? (ಮಾಹಿತಿ ನೀಡುವುದು)

## ಚಿಕ್ಕಮಗಳೂರಿನಲ್ಲಿ ಕೈಗೊಂಡ ಅಭಿವೃದ್ಧಿ ಕಾರ್ಯಗಳು

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೨೮೧ (೪೬೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಒಂದು ವರ್ಷದಲ್ಲಿ ಚಿಕ್ಕಮಗಳೂರು ಜಿಲ್ಲೆಯಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ಕೈಗೊಂಡ ಅಭಿವೃದ್ಧಿ ಕಾರ್ಯಗಳು ಯಾವುವು ;

(ಆ) ಸದರಿ ಅಭಿವೃದ್ಧಿ ಕಾಮಗಾರಿಗಳಿಗೆ ಬಿಡುಗಡೆಗೊಂಡ ಅನುದಾನವೆಷ್ಟು ; ಈ ಕಾಮಗಾರಿಗಳ ಟೆಂಡರ್ ಪ್ರಕ್ರಿಯೆ ಯಾವ ಹಂತದಲ್ಲಿ ನಡೆಯುತ್ತದೆ ;

(ಇ) ಟೆಂಡರ್ ಕರೆದಿದ್ದಲ್ಲಿ, ಕಾಮಗಾರಿ ಪ್ರಾರಂಭವಾಗಿದೆಯೇ; ಕಾಮಗಾರಿ ಪೂರೈಸಲು ತೆಗೆದುಕೊಂಡಿರುವ ಕಾಲಮಿತಿ ಎಷ್ಟು ?

## ಮಲೆನಾಡು ಅಭಿವೃದ್ಧಿ ಪ್ರಾಧಿಕಾರ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೨೮೨ (೪೬೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ಮಲೆನಾಡು ಅಭಿವೃದ್ಧಿ ಪ್ರಾಧಿಕಾರಕ್ಕೆ ಬಿಡುಗಡೆಯಾಗಿರುವ ಅನುದಾನದ ವಿವರ ನೀಡುವುದು ;

(ಆ) ಮಲೆನಾಡು ಭಾಗದ ಎಲ್ಲಾ ವಿಧಾನ ಸಭೆ ಹಾಗೂ ವಿಧಾನ ಪರಿಷತ್ ಸದಸ್ಯರುಗಳನ್ನು ಪ್ರಾಧಿಕಾರದ ಸದಸ್ಯರನ್ನಾಗಿಸಿಕೊಳ್ಳಲಾಗಿದೆಯೇ ;

(ಇ) ಪ್ರಾಧಿಕಾರದ ಸದಸ್ಯರನ್ನಾಗಿ ನೇಮಿಸಿಕೊಳ್ಳುವಲ್ಲಿ ಕೆಲವು ಸದಸ್ಯರುಗಳ ಹೆಸರು ಬಿಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಯಾವ ಕ್ರಮ ತೆಗೆದುಕೊಳ್ಳಲಾಗಿದೆ; ಹಾಗೂ ಯಾವ ಕಾಲಮಿತಿಯೊಳಗೆ ಅವರುಗಳನ್ನು ಸೇರಿಸಿಕೊಳ್ಳಲಾಗುವುದು ?

## ಕರ್ನಾಟಕ ಪ್ರವಾಸೋದ್ಯಮ ನೀತಿ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೨೮೩ (೪೬೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರವಾಸೋದ್ಯಮ ಇಲಾಖೆಯಿಂದ ಕರ್ನಾಟಕ ಪ್ರವಾಸೋದ್ಯಮ ನೀತಿ ೨೦೨೦-೨೫ ಜಾರಿಗೆ ತಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ಪ್ರವಾಸೋದ್ಯಮ ನೀತಿಗೆ ಸಕ್ಷಮ ಪ್ರಾಧಿಕಾರದಿಂದ ಪ್ರತ್ಯೇಕ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆಯೇ ; ಅಥವಾ ಯಾವ ಕಾಲಮಿತಿಯೊಳಗೆ ಹೊರಡಿಸಲಾಗುವುದು ;

(ಇ) ಚಿಕ್ಕಮಗಳೂರು ಜಿಲ್ಲೆಯ ಭದ್ರಾ ನದಿಯಲ್ಲಿ ಜಲ ಸಾಹಸ ಮತ್ತು ಭೂ ಸಾಹಸ (ಕ್ರೀಡಾ ಚಟುವಟಿಕೆಗಳನ್ನು) ಉತ್ತೇಜಿಸಲು ಸರ್ಕಾರದಿಂದ ಕೈಗೊಂಡ ಕ್ರಮ ಏನು ; (ವಿವರ ನೀಡುವುದು)

(ಈ) ಜಲ ಸಾಹಸ ಮತ್ತು ಭೂ ಸಾಹಸ (ಕ್ರೀಡಾ ಚಟುವಟಿಕೆ) ನಡೆಸಲು ಪರವಾನಗಿ ನೀಡಲಾಗಿದೆಯೇ ; ಈ ಬಗ್ಗೆ ಸರ್ಕಾರದ ನಿಲುವೇನು ?

## ಗಡಿ ತಾಲ್ಲೂಕುಗಳಲ್ಲಿ ಭಾಷೆ ಮತ್ತು ಸಂಸ್ಕೃತಿ ಅಭಿವೃದ್ಧಿ ಬಗ್ಗೆ

**ಶ್ರೀ ಚಿದಾನಂದ್ ಎಂ ಗೌಡ (ಪದವೀಧರರ ಕ್ಷೇತ್ರ) :–**

೨೮೪ (೪೪೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು, ಕೋಲಾರ, ಚಿಕ್ಕಬಳ್ಳಾಪುರ, ಚಿತ್ರದುರ್ಗ ಮತ್ತು ದಾವಣಗೆರೆ ಜಿಲ್ಲೆಗಳಲ್ಲಿರುವ ಗಡಿ ತಾಲ್ಲೂಕುಗಳ ಸಂಖ್ಯೆ ಎಷ್ಟು; (ಮಾಹಿತಿ ನೀಡುವುದು)

(ಆ) ಗಡಿ ತಾಲ್ಲೂಕುಗಳಲ್ಲಿ ಭಾಷೆ ಮತ್ತು ಸಂಸ್ಕೃತಿಯ ಬೆಳವಣಿಗೆಗೆ ಸರ್ಕಾರ ಕೈಗೊಂಡಿರುವ ಕಾರ್ಯಕ್ರಮಗಳೇನು ; (ಮಾಹಿತಿ ನೀಡುವುದು)

(ಇ) ಗಡಿ ತಾಲ್ಲೂಕುಗಳಲ್ಲಿ ಭಾಷೆ ಮತ್ತು ಸಂಸ್ಕೃತಿ ಅಭಿವೃದ್ಧಿಗೆ ಸರ್ಕಾರ ಯಾವುದಾದರೂ ಹೊಸ ಯೋಜನೆಗಳನ್ನು ರೂಪಿಸಲು ಚಿಂತನೆ ನಡೆಸಿದೆಯೇ ? (ಮಾಹಿತಿ ನೀಡುವುದು)

## ಪ್ರವಾಸೋದ್ಯಮ ಇಲಾಖೆಯಲ್ಲಿ ಪದವೀಧರರಿಗೆ ಯೋಜನೆಗಳು

**ಶ್ರೀ ಚಿದಾನಂದ್ ಎಂ ಗೌಡ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು):–**

೨೮೫ (೪೪೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು, ಕೋಲಾರ, ಚಿಕ್ಕಬಳ್ಳಾಪುರ, ಚಿತ್ರದುರ್ಗ ಮತ್ತು ದಾವಣಗೆರೆ ಜಿಲ್ಲೆಗಳಲ್ಲಿ ಪ್ರವಾಸೋದ್ಯಮ ಇಲಾಖೆ ಗುರುತಿಸಲ್ಪಟ್ಟಿರುವ ಪ್ರವಾಸಿ ತಾಣಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಪ್ರವಾಸೋದ್ಯಮ ಇಲಾಖೆ ಗುರುತಿಸಿರುವ ಪ್ರವಾಸಿ ತಾಣಗಳಲ್ಲಿ ಕೈಗೊಳ್ಳುವ ಯೋಜನೆಗಳು ಯಾವುವು; (ವಿವರಣೆ ನೀಡುವುದು)

(ಇ) ಹೊಸದಾಗಿ ಪ್ರವಾಸಿ ತಾಣಗಳನ್ನು ಗುರುತಿಸಿ ಅವುಗಳನ್ನು ಅಭಿವೃದ್ಧಿಪಡಿಸುವ ಯೋಜನೆ ಸರ್ಕಾರದ ಮುಂದಿದೆಯೇ ;

(ಈ) ಪ್ರವಾಸೋದ್ಯಮ ಇಲಾಖೆ, ಪ್ರವಾಸೋದ್ಯಮದ ಬೆಳವಣಿಗೆಯಲ್ಲಿ ನಿರುದ್ಯೋಗಿ ಪದವೀಧರ ಯುವಕರು ಸಕ್ರಿಯವಾಗಿ ಪಾಲ್ಗೊಳ್ಳುವಂತಾಗಲು ಯೋಜನೆಗಳನ್ನು ರೂಪಿಸಿದೆಯೇ ?

## ಭದ್ರಾ ಮೇಲ್ದಂಡೆ ಯೋಜನೆ ಕುರಿತು

**ಶ್ರೀ ಚಿದಾನಂದ್ ಎಂ ಗೌಡ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) :–**

೨೮೬ (೪೪೬) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಭದ್ರಾ ಮೇಲ್ದಂಡೆ ಯೋಜನೆ ಪ್ರಾರಂಭವಾದ ವರ್ಷ ಯಾವುದು ; ಇದರ ವ್ಯಾಪ್ತಿಗೆ ಒಳಪಡುವ ಪ್ರದೇಶಗಳಾವುವು ;

(ಆ) ಇಲ್ಲಿಯವರೆಗೆ ಭದ್ರಾ ಮೇಲ್ದಂಡೆ ಯೋಜನೆ ಅನುಷ್ಠಾನಕ್ಕೆ ಸರ್ಕಾರ ಮಾಡಿರುವ ಖರ್ಚು ಎಷ್ಟು ; (ಮಾಹಿತಿ ನೀಡುವುದು)

(ಇ) ಭದ್ರಾ ಮೇಲ್ದಂಡೆ ಯೋಜನೆ ಜಾರಿಯಲ್ಲಿ ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗೂ ವಿಳಂಬಕ್ಕೆ ನಿರ್ದಿಷ್ಟ ಕಾರಣಗಳೇನು ; (ಮಾಹಿತಿ ನೀಡುವುದು)

(ಈ) ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ? (ಮಾಹಿತಿ ನೀಡುವುದು)

## ಮಾರಿಕಣಿವೆ ಅಣೆಕಟ್ಟಿನ ನೀರಾವರಿ ಯೋಜನೆ ಬಗ್ಗೆ

**ಶ್ರೀ ಚಿದಾನಂದ್ ಎಂ ಗೌಡ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) :-**

೨೮೭ (೪೪೭) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಿತ್ರದುರ್ಗ ಜಿಲ್ಲೆ ಹಿರಿಯೂರು ತಾಲ್ಲೂಕಿನಲ್ಲಿರುವ ಮಾರಿ ಕಣಿವೆ ಅಣೆಕಟ್ಟಿನಿಂದ ನೀರಾವರಿ ಯೋಜನೆಗಳ ವ್ಯಾಪ್ತಿಗೆ ಒಳಪಟ್ಟ ಪ್ರದೇಶಗಳಾವುವು ;

(ಆ) ಮಾರಿ ಕಣಿವೆ ಅಣೆಕಟ್ಟಿನಿಂದ ಬೃಹತ್ ಕಾಲುವೆಗಳು ಮತ್ತು ಸಣ್ಣ ಕಾಲುವೆಗಳ ಮೂಲಕ ಎಷ್ಟು ಹೆಕ್ಟೇರ್ ಪ್ರದೇಶಕ್ಕೆ ನೀರನ್ನು ಪೂರೈಸಲಾಗುವುದು ;

(ಇ) ಕಿರು ಕಾಲುವೆಗಳ ಮೂಲಕ ಪೂರೈಸುವ ನೀರು ಕೊನೆಯ ಹಂತದ ರೈತನಿಗೆ ನಿರ್ದಿಷ್ಟವಾಗಿ ತಲುಪುತ್ತಿದೆಯೇ ? (ಮಾಹಿತಿ ನೀಡುವುದು)

## ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳಲ್ಲಿ ಮೀಸಲಾತಿ ಸಂಖ್ಯೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೮೮ (೩೩೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೫ ನೇ ಸಾಲಿನ ೪೨೮ ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳಲ್ಲಿ ವಿವಿಧ ವರ್ಗಗಳಿಗೆ ನಿಗದಿಪಡಿಸಿದ ಮೀಸಲಾತಿ ಸಂಖ್ಯೆ ಎಷ್ಟು ; (Vertical Reservation)

(ಆ) ಈ ಪೈಕಿ ಮೀಸಲಾತಿ ಕ್ಲೈಮ್ ಮಾಡಿ ಮೆರಿಟ್ ಆಧಾರದ ಮೇಲೆ ಸಾಮಾನ್ಯ ವರ್ಗದಲ್ಲಿ ಆಯ್ಕೆಯಾದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ವರ್ಗ–೧, ೨ಎ , ೨ಬಿ, ೩ಎ, ೩ಬಿ ಮತ್ತು ಸಾಮಾನ್ಯ ವರ್ಗದ ಅಭ್ಯರ್ಥಿಗಳ ಸಂಖ್ಯೆ ಎಷ್ಟು ; (ವರ್ಗಾವಾರು ಸಂಖ್ಯೆಯು (Vertical Reservation) ಮಾಹಿತಿ ಒದಗಿಸುವುದು)

(ಇ) ಮೆರಿಟ್ ಆಧಾರದ ಮೇಲೆ ಸಾಮಾನ್ಯ ವರ್ಗದ ಹುದ್ದೆಗಳಿಗೆ ಆಯ್ಕೆಯಾದ ಪ್ರತಿ ಮೀಸಲಾತಿ ವರ್ಗದ ಅಭ್ಯರ್ಥಿಗಳ ವರ್ಗಾವಾರು ಸಂಖ್ಯೆ ತಿಳಿಸುವುದು ; ಎಸ್.ಸಿ/ಎಸ್.ಟಿ ಪ್ರವರ್ಗ–೧, ೨ಎ, ೨ಬಿ, ೩ಎ, ೩ಬಿ, ಸಾಮಾನ್ಯ ವರ್ಗ (Vertical Reservation) ಅಭ್ಯರ್ಥಿಗಳ ಸಂಖ್ಯೆ ಎಷ್ಟು ?

## ಕಟ್ಟಡಗಳ ನಕ್ಷೆ ಮಂಜೂರಾತಿಗೆ ಕೇಂದ್ರ ಸರ್ಕಾರದ ನೀತಿಯನ್ನು ಅಳವಡಿಸುವ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೮೯ (೩೪೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಭಾರತ ಸರ್ಕಾರ Easy of doing Business Policy ಅಡಿಯಲ್ಲಿ Constructions of Building Permits ಪ್ರಕ್ರಿಯೆಯನ್ನು online (Single Windows system for plan approval) ತಂತ್ರಾಂಶದಲ್ಲಿ ಅಳವಡಿಸಲು ೨೦೧೭ರಲ್ಲೇ ಸೂಚಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಇದರ ಬಗ್ಗೆ ಈವರೆಗೆ ಬಿ.ಬಿ.ಎಂ.ಪಿ ಮತ್ತು ಬಿ.ಡಿ.ಎ ದವರು ಯಾವ ಕ್ರಮ ಜರುಗಿಸಿದ್ದಾರೆ ; ೨೦೧೭ ರಿಂದ ಇಲ್ಲಿಯವರೆಗೆ ಕಾರ್ಯರೂಪಕ್ಕೆ ತರದ ಅಧಿಕಾರಿಗಳ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ದೆಹಲಿ ಮತ್ತು ಮುಂಬೈ ನಗರಗಳಲ್ಲಿ ಮೇಲ್ಕಂಡ ಪ್ರಕ್ರಿಯೆಯನ್ನು ಎರಡು ವರ್ಷಗಳಿಂದ ಜಾರಿಗೊಳಿಸಲಾಗಿದ್ದು, ಬೆಂಗಳೂರು ನಗರದಲ್ಲಿ ಈ ಪದ್ಧತಿಯನ್ನು ಯಾವ ಕಾಲಮಿತಿಯೊಳಗೆ ಅನುಷ್ಠಾನಗೊಳಿಸಲಾಗುವುದು ?

## ಬೆಂಗಳೂರು ನಗರದಲ್ಲಿ ಕನ್ಸರ್ವೆನ್ಸಿ ರಸ್ತೆಗಳಿಗೆ ಗೇಟ್ ಅಳವಡಿಸಿರುವ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೦ (೩೩೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಮುಖ್ಯ ರಸ್ತೆಗಳ ಹಿಂಭಾಗದಲ್ಲಿ ಸಣ್ಣ ಸಣ್ಣ ರಸ್ತೆಗಳಿದ್ದು (ಹಿಂದಿನ ಕನ್ಸರ್ವೆನ್ಸಿ ರಸ್ತೆಗಳು) ಅವುಗಳಿಗೆ ಕಬ್ಬಿಣದ ಗೇಟುಗಳನ್ನು ಯಾರು ಹಾಕಿಸಲು ಅನುಮತಿ ನೀಡಲಾಗಿದೆ ; ನೀಡಿದ್ದಲ್ಲಿ ಇದಕ್ಕೆ ಕಾರಣವೇನು ;

(ಆ) ಈ ಸಣ್ಣ ರಸ್ತೆಗಳಲ್ಲಿ ಅನೇಕ ಮನೆಗಳಿದ್ದು ಜನರು ಓಡಾಡಲು ಅವಕಾಶವಿದ್ದು ರಾತ್ರಿ ವೇಳೆ ಗೇಟುಗಳನ್ನು ಮುಚ್ಚುವುದರಿಂದ ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಅನೇಕ ರಸ್ತೆಗಳನ್ನು ರಾತ್ರಿ ವೇಳೆ ಮುಂದೆ ವಾಸ ಮಾಡುವ ಮನೆ ಮಾಲೀಕರು ತಮ್ಮ ವಾಹನಗಳನ್ನು ನಿಲ್ಲಿಸಿಕೊಂಡು ಗೇಟ್

ಬೀಗ ಹಾಕಿ, ತಮ್ಮ ಸ್ವಂತ ಆಸ್ತಿಯಂತೆ ವರ್ತಿಸುತ್ತಿರುವುದು ನಿಜವೇ; ಈ ಪದ್ಧತಿಗೆ ಅವಕಾಶ ನೀಡಿರುವುದು ಯಾರು; ಇದನ್ನು ತಪ್ಪಿಸಿ ಸಾರ್ವಜನಿಕ ರಸ್ತೆಯನ್ನು ಸಾರ್ವಜನಿಕರಿಗೆ ಮುಕ್ತಗೊಳಿಸಲು ಸರ್ಕಾರ ಕ್ರಮ ವಹಿಸುವುದೇ ?

## ಕನ್ನಡ ಸಂಘ ಸಂಸ್ಥೆಗಳಿಗೆ ಅನುದಾನ ಬಿಡುಗಡೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೯೧ (೪೨೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಕನ್ನಡ ಸಂಘಸಂಸ್ಥೆಗಳಿಗೆ ನೀಡುತ್ತಿದ್ದ ಅನುದಾನವನ್ನು ಕಳೆದ ಎರಡು ವರ್ಷಗಳಿಂದ ನಿಲ್ಲಿಸಿರುವುದು ನಿಜವೆ; ನಿಜವಾದರೆ, ಅದಕ್ಕೆ ಕಾರಣಗಳೇನು ;

(ಆ) ಬೆಂಗಳೂರಿನಲ್ಲಿ ಅನೇಕ ಸಂಸ್ಥೆಗಳು ಕನ್ನಡ ಸಾಹಿತ್ಯ, ಸಂಸ್ಕೃತಿ ಮತ್ತು ಸಾಮಾಜಿಕ ಚಟುವಟಿಕೆಗಳನ್ನು ನಡೆಸುತ್ತಿದ್ದು, ಈ ರೀತಿ ಅನುದಾನ ನೀಡದಿದ್ದಲ್ಲಿ ಚಟುವಟಿಕೆಗಳು ನಿಂತು ಹೋಗಿ ಸಾರ್ವಜನಿಕರಿಗೆ ತೊಂದರೆಯಾಗುವುದಿಲ್ಲವೆ ;

(ಇ) ಸರ್ಕಾರ ಮಾಡಬೇಕಾದ ಅನೇಕ ಕೆಲಸಗಳನ್ನು ಈ ಸಂಘ ಸಂಸ್ಥೆಗಳು ಮಾಡುತ್ತಿದ್ದು, ಅದಕ್ಕೆ ಪ್ರೋತ್ಸಾಹ ನೀಡುವುದು ಸರ್ಕಾರದ ಜವಾಬ್ದಾರಿಯಲ್ಲವೆ ;

(ಈ) ಈ ವರ್ಷವಾದರೂ ಸಂಘ ಸಂಸ್ಥೆಗಳಿಗೆ ನೀಡಬೇಕಾದ ಅನುದಾನವನ್ನು ನೀಡಲು ಕ್ರಮ ಕೈಗೊಳ್ಳಲಾಗುವುದೇ ?

## FDA ಮತ್ತು SDA ಹುದ್ದೆಗಳ ನೇಮಕಾತಿ ಬಗ್ಗೆ

**ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) :–**

೨೯೨ (೩೩೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಲೋಕಸೇವಾ ಆಯೋಗವು ೨೦೧೭ ರಲ್ಲಿ ಎಫ್.ಡಿ.ಎ ಮತ್ತು ಎಸ್.ಡಿ.ಎ ಹುದ್ದೆಗಳ ನೇಮಕಾತಿಗೆ ಅಧಿಸೂಚನೆ ಹೊರಡಿಸಿ, ಫೆಬ್ರವರಿ–೨೦೧೯ ರಲ್ಲಿ ಲಿಖಿತ ಪರೀಕ್ಷೆ ನಡೆಸಿ, ಜುಲೈ–೨೦೨೦ ರಲ್ಲಿ ಅಂತಿಮ ಆಯ್ಕೆಪಟ್ಟಿ ಹೊರಡಿಸಲಾಗಿದ್ದು, ಆಯ್ಕೆಗೊಂಡ ಅಭ್ಯರ್ಥಿಗಳಿಗೆ ಇಲ್ಲಿಯವರೆವಿಗೂ ಸರ್ಕಾರ ನೇಮಕಾತಿ ಆದೇಶ ಹೊರಡಿಸದಿರಲು ಕಾರಣವೇನು ;

(ಆ) ಆಯ್ಕೆಗೊಂಡ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶವನ್ನು ನೀಡಲಾಗುವುದು ಯಾವಾಗ ?

## ಕೋಲಾರ ಜಿಲ್ಲೆಯ ಪ್ರವಾಸೋದ್ಯಮ ಇಲಾಖೆಗೆ ಮಂಜೂರಾಗಿರುವ ಹುದ್ದೆಗಳ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೩ (೩೩೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ಜಿಲ್ಲೆಯ ಪ್ರವಾಸೋದ್ಯಮ ಇಲಾಖೆಗೆ ಮಂಜೂರಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ವೃಂದಗಳವಾರು ವಿವರಗಳನ್ನು ನೀಡುವುದು)

(ಆ) ಇವುಗಳಲ್ಲಿ ಹಾಲಿ ಕಾರ್ಯ ನಿರ್ವಹಿಸುತ್ತಿರುವ ಹುದ್ದೆಗಳು ಯಾವುವು ಮತ್ತು ಖಾಲಿ ಇರುವ ಹುದ್ದೆಗಳು ಯಾವುವು; (ವೃಂದಗಳವಾರು ವಿವರಗಳನ್ನು ನೀಡುವುದು)

(ಇ) ಖಾಲಿ ಇರುವ ಹುದ್ದೆಗಳನ್ನು ತುಂಬಲು ಸರ್ಕಾರಕ್ಕಿರುವ ತೊಂದರೆಗಳೇನು ;

(ಈ) ಹುದ್ದೆಗಳು ಖಾಲಿ ಇರುವುದರಿಂದ ಸಾರ್ವಜನಿಕರ ಹಾಗೂ ಕಛೇರಿ ಕೆಲಸ ಕಾರ್ಯಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಖಾಲಿ ಇರುವ ಹುದ್ದೆಗಳನ್ನು ಯಾವ ಕಾಲಮಿತಿಯೊಳಗಾಗಿ ಭರ್ತಿ ಮಾಡಲಾಗುವುದು ; (ವಿವರಗಳನ್ನು ನೀಡುವುದು)

(ಉ) ಪ್ರವಾಸೋದ್ಯಮ ಇಲಾಖೆಯಿಂದ ಪ್ರವಾಸಿ ಟ್ಯಾಕ್ಸಿ ಯೋಜನೆಯನ್ನು ಸ್ಥಗಿತಗೊಳಿಸಲಾಗಿದೆಯೇ ; ಹಾಗಿದ್ದಲ್ಲಿ, ಯಾವ ಕಾರಣಕ್ಕಾಗಿ ಸ್ಥಗಿತಗೊಳಿಸಲಾಗಿದೆ ? (ವಿವರಗಳನ್ನು ನೀಡುವುದು)

## ಕೋಲಾರ ತಾಲ್ಲೂಕಿನ ಅಂತರಗಂಗೆ ಬೆಟ್ಟವನ್ನು ಪ್ರವಾಸಿ ತಾಣವನ್ನಾಗಿ ಸರ್ಕಾರ ಘೋಷಿಸಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೪ (೩೩೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ತಾಲ್ಲೂಕಿನ ಅಂತರಗಂಗೆ ಬೆಟ್ಟವನ್ನು ಪ್ರವಾಸಿತಾಣವೆಂದು ಸರ್ಕಾರ ಘೋಷಿಸಿರುವುದು ನಿಜವೇ; ಹಾಗಿದ್ದಲ್ಲಿ ಇಲ್ಲಿಗೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆಯೇ ;

(ಆ) ಕೋಲಾರದಿಂದ ಅಂತರಗಂಗೆ ಬೆಟ್ಟಕ್ಕೆ ರಸ್ತೆ ನಿರ್ಮಿಸಲು ಜಿಲ್ಲಾಡಳಿತವು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದೆಯೇ ; (ಪ್ರಸ್ತಾವನೆಯ ಪ್ರತಿ ನೀಡುವುದು)

(ಇ) ಕೋಲಾರದಿಂದ ಅಂತರಗಂಗೆ ಬೆಟ್ಟಕ್ಕೆ ರಸ್ತೆ ನಿರ್ಮಿಸಲು ಸರ್ಕಾರ ಅನುದಾನವನ್ನು ಬಿಡುಗಡೆ ಮಾಡಿದ್ದು ನಿಜವೇ ;

(ಈ) ಬಿಡುಗಡೆ ಮಾಡಿದ್ದ ಅನುದಾನವನ್ನು ಸರ್ಕಾರ ಹಿಂಪಡೆದಿರುವುದು ನಿಜವೇ; ಬಿಡುಗಡೆಯಾಗಿದ್ದ ಅನುದಾನವನ್ನು ಹಿಂಪಡೆಯಲು ಕಾರಣಗಳೇನು; ಅನುದಾನವನ್ನು ಹಿಂಪಡೆದಿರುವುದರಿಂದ ಇದರಿಂದಾಗಿ ಪ್ರವಾಸಿಗರಿಗೆ ಹೋಗಿ–ಬರಲು ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಿದ್ದಲ್ಲಿ, ಈ ತೊಂದರೆಯನ್ನು ನಿವಾರಿಸಲು ಸರ್ಕಾರ ಪ್ರಸಕ್ತ ಸಾಲಿನಲ್ಲಿಯೇ ಅನುದಾನವನ್ನು ಬಿಡುಗಡೆ ಮಾಡಿ ರಸ್ತೆ ನಿರ್ಮಾಣ ಕಾಮಗಾರಿಯನ್ನು ಕೈಗೆತ್ತಿಕೊಳ್ಳುವುದೇ ?

## ಪ್ರವಾಸಿ ತಾಣಗಳನ್ನಾಗಿ ಅಭಿವೃದ್ಧಿ ಪಡಿಸುವ ಕುರಿತು

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೫ (೩೩೩) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆ.ಸಿ. ವ್ಯಾಲಿ ನೀರಿನಿಂದ ಕೋಲಾರ ತಾಲ್ಲೂಕಿನ ನರಸಾಪುರ ಕೆರೆ, ಅಮ್ಮೇರಹಳ್ಳಿ ಕೆರೆ ಹಾಗೂ ಅಮಾನಿ ಕೆರೆಗಳು ರಾಷ್ಟ್ರೀಯ ಹೆದ್ದಾರಿಗೆ ಹೊಂದಿಕೊಂಡಿದ್ದು ಹಾಗೂ ಸೋಮಾಂಬುದಿ ಅಗ್ರಹಾರ ಕೆರೆಯೂ ಸಹ ಅತೀ ದೊಡ್ಡ ಕೆರೆಯಾಗಿರುವುದರಿಂದ ಇವುಗಳನ್ನು ಪ್ರವಾಸೀತಾಣಗಳನ್ನಾಗಿ ಅಭಿವೃದ್ಧಿಪಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಕೆರೆಗಳ ಅಭಿವೃದ್ಧಿಗಾಗಿ ಸರ್ಕಾರ ಕಳೆದ ೩ ವರ್ಷಗಳಲ್ಲಿ ಅನುದಾನವನ್ನೇನಾದರೂ ನೀಡಿದೆಯೇ ;

(ಇ) ಹಾಗಿಲ್ಲದಿದ್ದಲ್ಲಿ, ಈ ಕೆರೆಗಳನ್ನು ಪ್ರವಾಸೀತಾಣಗಳನ್ನಾಗಿ ಅಭಿವೃದ್ಧಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳಾವುವು ;

(ಈ) ಅನುದಾನವನ್ನು ಯಾವಾಗ ಬಿಡುಗಡೆ ಮಾಡಲಾಗುವುದು ? (ವಿವರಗಳನ್ನು ನೀಡುವುದು)

## ಎತ್ತಿನಹೊಳೆ ಯೋಜನೆಯ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೬ (೩೩೧) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಎತ್ತಿನಹೊಳೆ ಯೋಜನೆಯು ಯಾವಾಗ ಪ್ರಾರಂಭವಾಯಿತು; ಹಾಗೂ ಈ ಯೋಜನೆಗೆ ಸರ್ಕಾರ ನಿಗಧಿಪಡಿಸಿದ ಅನುದಾನವೆಷ್ಟು ;

(ಆ) ಈ ಯೋಜನೆ ಪ್ರಾರಂಭವಾದಾಗಿನಿಂದ ಇದುವರೆವಿಗೂ ವೆಚ್ಚ ಮಾಡಲಾಗಿರುವ ಮೊತ್ತವೆಷ್ಟು ; ಹಾಗೂ ಇನ್ನು ಬೇಕಾಗಿರುವ ಅನುದಾನದ ಮೊತ್ತವೆಷ್ಟು ; (ವರ್ಷವಾರು ಮತ್ತು ಕಾಮಗಾರಿವಾರು ವಿವರಗಳನ್ನು ನೀಡುವುದು)

(ಇ) ಈ ಯೋಜನೆಯ ಕಾಮಗಾರಿಯು ಪ್ರಸ್ತುತ ಯಾವ ಹಂತದಲ್ಲಿದೆ ;

(ಈ) ಈ ಯೋಜನೆಯಡಿ ಕೋಲಾರ ಜಿಲ್ಲೆಗೆ ಕಳೆದ ೩ ವರ್ಷಗಳಲ್ಲಿ ನಿಗದಿಪಡಿಸಿ ಬಿಡುಗಡೆ ಮಾಡಿ ವೆಚ್ಚ ಮಾಡಿರುವ ಅನುದಾನದ ಮೊತ್ತವೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಈ ಯೋಜನೆಯನ್ನು ಯಾವ ಕಾಲಮಿತಿಯೊಳಗಾಗಿ ಪೂರ್ಣಗೊಳಿಸಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)

## ಕೋಲಾರ ಜಿಲ್ಲೆಯಲ್ಲಿ ಸರ್ಕಾರ ಗುರುತಿಸಿರುವ ಪ್ರವಾಸ ತಾಣಗಳ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೭ (೩೩೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ಜಿಲ್ಲೆಯಲ್ಲಿ ಸರ್ಕಾರ ಗುರುತಿಸಿರುವ ಪ್ರವಾಸಿ ತಾಣಗಳು ಯಾವುವು ; (ವಿವರಗಳನ್ನು ನೀಡುವುದು) ಇವುಗಳನ್ನು ರಾಜ್ಯ ಪ್ರವಾಸೋದ್ಯಮ ಇಲಾಖೆಯು ಪ್ರವಾಸಿ ತಾಣಗಳ ಪಟ್ಟಿಯಲ್ಲಿ ಸೇರ್ಪಡೆಗೊಳಿಸಿದೆಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸರ್ಕಾರ ಗುರುತಿಸಿರುವ ಪ್ರವಾಸಿ ತಾಣಗಳ ಪೈಕಿ ಯಾವ ಯಾವ ಪ್ರವಾಸಿ ತಾಣಗಳನ್ನು ಅಭಿವೃದ್ಧಿಪಡಿಸಲಾಗಿದೆ; (ವಿವರಗಳನ್ನು ನೀಡುವುದು)

(ಇ) ಈ ಪ್ರವಾಸಿ ತಾಣಗಳ ಅಭಿವೃದ್ಧಿಗಾಗಿ ಕಳೆದ ೩ ವರ್ಷಗಳಲ್ಲಿ ನಿಗದಿಪಡಿಸಿ ಬಿಡುಗಡೆ ಮಾಡಿ ವೆಚ್ಚ ಮಾಡಿರುವ ಅನುದಾನದ ಮೊತ್ತವೆಷ್ಟು; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಕೋಲಾರ ಜಿಲ್ಲೆಯ ಅಂತರಗಂಗೆ ಬೆಟ್ಟಕ್ಕೆ ರಸ್ತೆ ನಿರ್ಮಿಸಲು ಕೋಲಾರ ಜಿಲ್ಲೆಯ ಪ್ರವಾಸೋದ್ಯಮ ಇಲಾಖೆಯಿಂದ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆಯೇ ; ಹಾಗಿದ್ದಲ್ಲಿ, ಪ್ರಸ್ತಾವನೆಯು ಪ್ರಸ್ತುತ ಯಾವ ಹಂತದಲ್ಲಿದೆ ; (ಪ್ರಸ್ತಾವನೆಯ ಪ್ರತಿಯನ್ನು ನೀಡುವುದು)

(ಉ) ಈ ರಸ್ತೆ ನಿರ್ಮಾಣ ಮಾಡುವುದರಿಂದ ಸಾರ್ವಜನಿಕರಿಗೆ ಹಾಗೂ ಪ್ರವಾಸಿಗರಿಗೆ ಅನುಕೂಲವಾಗುವುದಿಲ್ಲವೇ ; ಹಾಗಿದ್ದಲ್ಲಿ, ರಸ್ತೆ ನಿರ್ಮಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಊ) ಹಾಗಿದ್ದಲ್ಲಿ, ರಸ್ತೆ ನಿರ್ಮಾಣಕ್ಕಾಗಿ ಪ್ರಸಕ್ತ ಸಾಲಿನಲ್ಲಿಯೇ ಅನುದಾನವನ್ನು ನೀಡಿ ರಸ್ತೆ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದೇ ;

(ಋ) ಹಾಗಿದ್ದಲ್ಲಿ, ರಸ್ತೆ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು ?

## ಬೆಸ್ಕಾಂ ವತಿಯಿಂದ ಕೈಗೊಂಡಿರುವ ಕಾಮಗಾರಿಗಳ ಕುರಿತು

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೮ (೩೫೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಬೆಸ್ಕಾಂ ವತಿಯಿಂದ ಕೈಗೊಂಡಿರುವ ಕಾಮಗಾರಿಗಳು ಯಾವುವು ; ಈ ಕಾಮಗಾರಿಗಳಿಗಾಗಿ ಬಿಡುಗಡೆಯಾದ ಅನುದಾನವೆಷ್ಟು ; ಈ ಕಾಮಗಾರಿಗಳ ಟೆಂಡರ್ ಮೊತ್ತವೆಷ್ಟು ; ಈ ಕಾಮಗಾರಿಗಳನ್ನು ಪಡೆದಿರುವ ಗುತ್ತಿಗೆದಾರರ ವಿವರಗಳೇನು ; (ಆದೇಶ ಸಹಿತ ಕಾಮಗಾರಿವಾರು ವಿವರ ನೀಡುವುದು)

(ಆ) ಈ ಕಾಮಗಾರಿಗಳ ಟೆಂಡರ್ ಅನ್ನು ಕೆಲವೇ ಗುತ್ತಿಗೆದಾರರಿಗೆ ಅನುಕೂಲವಾಗುವಂತೆ ಮಾಡಲಾಗಿದ್ದು, under ground cable ಅಳವಡಿಸುವ ಕಾಮಗಾರಿಗಳಲ್ಲಿ ಭಾರಿ ಅವ್ಯವಹಾರಗಳು ನಡೆದಿರುವ ಆರೋಪಗಳು ಕೇಳಿ ಬರುತ್ತಿರುವುದು ಸರ್ಕಾರದ

ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸಂಬಂಧಪಟ್ಟವರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ? (ಪ್ರಕರಣವಾರು ಮಾಹಿತಿ ನೀಡುವುದು)

## ಎತ್ತಿನಹೊಳೆ ಯೋಜನೆಯ ಕಾಮಗಾರಿಗಳ ಕುರಿತು

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೯ (೩೫೩) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಎತ್ತಿನಹೊಳೆ ಯೋಜನೆಗಾಗಿ ಇಲ್ಲಿಯವರೆಗೆ ಬಿಡುಗಡೆಯಾಗಿರುವ ಅನುದಾನವೆಷ್ಟು ; ಖರ್ಚಾದ ಅನುದಾನವೆಷ್ಟು ; ಯಾವ ಯಾವ ಕಾಮಗಾರಿಗಳಿಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

(ಆ) ಎತ್ತಿನಹೊಳೆ ಯೋಜನೆಯಡಿ ರಾಜ್ಯದಾದ್ಯಂತ ಕೈಗೆತ್ತಿಕೊಳ್ಳಲಾಗಿರುವ ಪೈಪ್‌ಲೈನ್ ಮತ್ತು ಚಾನಲ್ ನಿರ್ಮಾಣ ಕಾಮಗಾರಿಗಳು ಯಾವುವು ; ಕಾಮಗಾರಿಗಳ ವೆಚ್ಚವೆಷ್ಟು ; ಈ ಕಾಮಗಾರಿಗಳಿಗೆ ಮಂಜೂರಾದ ಅನುದಾನವೆಷ್ಟು; ಖರ್ಚಾದ ಅನುದಾನವೆಷ್ಟು; ಈ ಕಾಮಗಾರಿಗಳನ್ನು ಯಾವ ಗ್ರಾಮಗಳಲ್ಲಿ ಕೈಗೊಳ್ಳಲಾಗಿದೆ ; ಈ ಕಾಮಗಾರಿಗಳು ಪ್ರಸ್ತುತ ಯಾವ ಯಾವ ಹಂತಗಳಲ್ಲಿವೆ ; (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

(ಇ) ಎತ್ತಿನ ಹೊಳೆ ಯೋಜನೆಯಡಿ ರಾಜ್ಯದಾದ್ಯಂತ ಕೈಗೊಂಡಿರುವ ಸಮುದಾಯ ಭವನ ನಿರ್ಮಾಣ/ರಸ್ತೆ ನಿರ್ಮಾಣ ಕಾಮಗಾರಿಗಳು ಯಾವುವು ; ಈ ಕಾಮಗಾರಿಗಳನ್ನು ಯಾವ ಗ್ರಾಮಗಳಲ್ಲಿ ಕೈಗೊಳ್ಳಲಾಗಿದೆ ; ಕಾಮಗಾರಿಗಳ ವೆಚ್ಚವೆಷ್ಟು ; ಈ

ಕಾಮಗಾರಿಗಳಿಗೆ ಮಂಜೂರಾದ ಅನುದಾನವೆಷ್ಟು ; (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

(ಈ) ಎತ್ತಿನಹೊಳೆ ಯೋಜನೆಯಡಿ ಪೈಪ್ ಲೈನ್ ಮತ್ತು ಚಾನಲ್ ನಿರ್ಮಾಣದಂತಹ ಅಗತ್ಯ ಕಾಮಗಾರಿಗಳು ಬಹಳ ಕುಂಠಿತಗೊಂಡಿದ್ದು, ಸಮುದಾಯ ಭವನ ನಿರ್ಮಾಣ/ರಸ್ತೆ ನಿರ್ಮಾಣ ಕಾಮಗಾರಿಗಳಂತಹ ಇತರೆ ಕಾಮಗಾರಿಗಳೆ ಹೆಚ್ಚಾಗಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದರ ಬಗ್ಗೆ ಸರ್ಕಾರದ ನಿಲುವೇನು ? (ವಿವರ ನೀಡುವುದು)

## ಸಣ್ಣ ಕೈಗಾರಿಕೆಗಳ ಸ್ಥಾಪನೆಗೆ ನೀಡುತ್ತಿರುವ ಸವಲತ್ತುಗಳು ಕುರಿತು

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೦ (೩೫೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಯಾವ ರೀತಿಯ ಕೈಗಾರಿಕೆಗಳನ್ನು ಸಣ್ಣ ಕೈಗಾರಿಕೆಗಳೆಂದು ಪರಿಗಣಿಸಲಾಗುವುದು ; ಅವುಗಳನ್ನು ಸ್ಥಾಪನೆ ಮಾಡಲು ಸರ್ಕಾರವು ನಿಗದಿಪಡಿಸಿರುವ ಮಾನದಂಡಗಳೇನು ; ಹಾಗೂ ಅವುಗಳನ್ನು ಪ್ರೋತ್ಸಾಹಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ;

(ಆ) ಹಾಸನ ಜಿಲ್ಲೆಯಲ್ಲಿ ಎಷ್ಟು ಸಣ್ಣ ಕೈಗಾರಿಕೆಗಳು ಕಾರ್ಯನಿರ್ವಹಿಸುತ್ತಿವೆ ; ಈ ಕೈಗಾರಿಕೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರೆಷ್ಟು ; ಈ ಕೈಗಾರಿಕೆಗಳು ನೌಕರರಿಗೆ ಒದಗಿಸುತ್ತಿರುವ ಸೌಲಭ್ಯಗಳೇನು ; ಕೈಗಾರಿಕೆಗಳ ವಿಳಾಸದೊಂದಿಗೆ ಮಾಹಿತಿ ನೀಡುವುದು ;

(ಇ) ಈ ಕೈಗಾರಿಕೆಗಳಿಗೆ ಮತ್ತು ನೌಕರರಿಗೆ ಸರ್ಕಾರದಿಂದ ನೀಡುತ್ತಿರುವ ಸೌಲಭ್ಯಗಳೇನು ; ಕಳೆದ ೩ ವರ್ಷಗಳಲ್ಲಿ ಈ ಕೈಗಾರಿಕೆಗಳಿಂದ ಸರ್ಕಾರಕ್ಕೆ ಬಂದಿರುವ ಆದಾಯವೆಷ್ಟು ? (ಕೈಗಾರಿಕೆವಾರು ಮಾಹಿತಿ ನೀಡುವುದು)

## ಸಣ್ಣ ನೀರಾವರಿ ಇಲಾಖೆ ವ್ಯಾಪ್ತಿಯ ಕೆರೆಗಳಲ್ಲಿ ಕೈಗೊಂಡಿರುವ ಕಾಮಗಾರಿಗಳ ಕುರಿತು

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೧ (೩೫೬) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆ ವ್ಯಾಪ್ತಿಯಲ್ಲಿ ಬರುವ ಕೆರೆಗಳ ಸಂಖ್ಯೆ ಎಷ್ಟು ; (ಕೆರೆಯ ಹೆಸರು, ಗ್ರಾಮ, ಹೋಬಳಿ, ತಾಲ್ಲೂಕಿನ ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಎಷ್ಟು ಕೆರೆಗಳಲ್ಲಿ ಕೆರೆ ಏರಿ ನಿರ್ಮಾಣ, ಹೂಳೆತ್ತುವ ಕಾಮಗಾರಿ ಹಾಗೂ ಇನ್ನಿತರ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; ಈ ಕಾಮಗಾರಿಗಳಿಗೆ ಮಂಜೂರಾದ ಅನುದಾನವೆಷ್ಟು ; ಖರ್ಚಾದ ಅನುದಾನವೆಷ್ಟು ; ಗುತ್ತಿಗೆದಾರರ ವಿವರಗಳೇನು ; (ಕೆರೆಯ ಹೆಸರು, ಕಾಮಗಾರಿಯ ಹೆಸರು, ಗ್ರಾಮ, ಹೋಬಳಿ, ತಾಲ್ಲೂಕಿನ ವಿವರ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ಅತಿವೃಷ್ಠಿಯಿಂದ ಕೋಡಿ ಹೊಡೆದು ಅಥವಾ ಏರಿ ಹೊಡೆದು ಹಾಳಾಗಿರುವ ಕೆರೆಗಳ ಸಂಖ್ಯೆ ಎಷ್ಟು ; ಈ ರೀತಿ ಹೊಡೆದು ಹಾಳಾಗಿರುವ

ಎಷ್ಟು ಕೆರೆಗಳ ಪುನರ್ ನಿರ್ಮಾಣ ಕಾಮಗಾರಿ ಮಾಡಲಾಗಿದೆ ; ಕಾಮಗಾರಿ ವೆಚ್ಚವೆಷ್ಟು ? (ಗುತ್ತಿಗೆದಾರರ ವಿವರ ನೀಡುವುದು) (ಕೆರೆವಾರು ಮತ್ತು ತಾಲ್ಲೂಕುವಾರು ವಿವರ ನೀಡುವುದು)

## ಕಾವೇರಿ ನೀರಾವರಿ ನಿಗಮ ನಿಯಮಿತದಿಂದ ಕೈಗೊಂಡಿರುವ ಕಾಮಗಾರಿಗಳ ಕುರಿತು

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೨ (೩೫೪) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಕಾವೇರಿ ನೀರಾವರಿ ನಿಗಮದಿಂದ ಹಾಸನ ಜಿಲ್ಲೆಯಲ್ಲಿ ಕೈಗೆತ್ತಿಕೊಳ್ಳಲು ಅನುಮೋದನೆ ನೀಡಿರುವ ಕಾಮಗಾರಿಗಳು ಯಾವುವು; ಕಾಮಗಾರಿಗಳವಾರು ಆದ ವೆಚ್ಚವೆಷ್ಟು; ಈ ಕಾಮಗಾರಿಗಳಿಗೆ ಮಂಜೂರಾದ ಅನುದಾನವೆಷ್ಟು; (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಕಾವೇರಿ ನೀರಾವರಿ ನಿಗಮದಿಂದ ಹಾಸನ ಜಿಲ್ಲೆಯಲ್ಲಿ ಕೈಗೊಂಡಿರುವ ಸಮುದಾಯ ಭವನ ನಿರ್ಮಾಣ/ರಸ್ತೆ ನಿರ್ಮಾಣ ಕಾಮಗಾರಿಗಳು ಯಾವುವು; ಕಾಮಗಾರಿಗಳಿಗಾದ ವೆಚ್ಚವೆಷ್ಟು; ಈ ಕಾಮಗಾರಿಗಳಿಗೆ ಮಂಜೂರಾದ ಅನುದಾನವೆಷ್ಟು; ಈ ಕಾಮಗಾರಿಗಳನ್ನು ಯಾವ ಗ್ರಾಮಗಳಲ್ಲಿ ಕೈಗೊಳ್ಳಲಾಗಿದೆ; (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

(ಇ) ಈ ಕಾಮಗಾರಿಗಳನ್ನು ಪಡೆದಿರುವ ಗುತ್ತಿಗೆದಾರರು/ಏಜೆನ್ಸಿಗಳ ವಿವರ ನೀಡುವುದು; ಈ ಕಾಮಗಾರಿಗಳು ಪ್ರಸ್ತುತ ಯಾವ

ಯಾವ ಹಂತಗಳಲ್ಲಿವೆ; ಈ ಕಾಮಗಾರಿಗಳಿಗಾಗಿ ಇಲ್ಲಿಯವರೆಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು? (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

## ನೂತನ ಪಿಂಚಣಿ ಯೋಜನೆ (ಎನ್.ಪಿ.ಎಸ್) ಕುರಿತು

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು):–**

೩೦೩ (೪೦೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನೂತನ ಪಿಂಚಣಿ ಯೋಜನೆ (ಎನ್.ಪಿ.ಎಸ್)ನ್ನು ರದ್ದುಗೊಳಿಸಿ, ಹಳೆಯ ಪಿಂಚಣಿ ಯೋಜನೆಯನ್ನು ಜಾರಿಗೊಳಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ;

(ಆ) ಈ ಕುರಿತಂತೆ ಸರ್ಕಾರದ ನಿಲುವೇನು? (ಸಂಪೂರ್ಣ ವಿವರ ನೀಡುವುದು)

## ರಾಜ್ಯದ ಬಾರ್ ಮತ್ತು ರೆಸ್ಟೋರೆಂಟ್‌ಗಳಲ್ಲಿ ಸ್ವಚ್ಛತೆ ಕಾಪಾಡದಿರುವ ಕುರಿತು

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನ ಸಭೆಯಿಂದ ಚುನಾಯಿತರಾದವರು):–**

೩೦೪ (೫೦೩) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಮತ್ತು ರಾಜ್ಯದ ಇತರ ಕಡೆಗಳಲ್ಲಿ ಬಾರ್ ಮತ್ತು ರೆಸ್ಟೋರೆಂಟ್‌ಗಳ ಸ್ವಚ್ಛತೆ ಮತ್ತು ಆರೋಗ್ಯಕರವಲ್ಲದ ಪರಿಸ್ಥಿತಿಗಳನ್ನು ನಿರ್ವಹಿಸದಿರುವುದನ್ನು ಸರ್ಕಾರ ಗಮನಿಸಿದೆಯೇ;

(ಆ) ಸ್ವಚ್ಛತೆ ಹಾಗೂ ಆರೋಗ್ಯಕರವಲ್ಲದ ಪರಿಸ್ಥಿತಿಗಳನ್ನು ಉಲ್ಲಂಘಿಸುವವರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಕಳೆದ ಮೂರು ವರ್ಷಗಳ ಮಾಹಿತಿ ಒದುಗಿಸುವುದು)

## ಮಾನವ ಸಂಪನ್ಮೂಲ ಒದಗಿಸುತ್ತಿರುವ ಸಂಸ್ಥೆಗಳ ಕುರಿತು

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನ ಸಭೆಯಿಂದ ಚುನಾಯಿತರಾದವರು):–**

೩೦೫ (೫೩೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದ ವಿವಿಧ ಇಲಾಖೆ/ನಿಗಮಗಳಿಗೆ ಮಾನವ ಸಂಪನ್ಮೂಲ ಒದಗಿಸುತ್ತಿರುವ ಸಂಸ್ಥೆಗಳು ಯಾವುವು;

(ಆ) ಈ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ನೀಡುತ್ತಿರುವ ಕನಿಷ್ಠ ವೇತನ ಎಷ್ಟು;

(ಇ) ಸದರಿ ಸಂಸ್ಥೆಗಳು ನಿಗದಿತವಾಗಿ ಇ.ಎಸ್.ಐ./ಪಿ.ಎಫ್. ಅನ್ನು ಸಂಬಂಧಪಟ್ಟ ಇಲಾಖೆಗಳಿಗೆ ಪಾವತಿಸುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು?

## ಕೇಂದ್ರದಿಂದ ರಾಜ್ಯಕ್ಕೆ ಬಿಡುಗಡೆಯಾಗಿರುವ ಅನುದಾನದ ಕುರಿತು

**ಶ್ರೀ ಬಿ.ಕೆ.ಹರಿಪ್ರಸಾದ್ (ವಿಧಾನ ಸಭೆಯಿಂದ ಚುನಾಯಿತರಾದವರು):–**

೩೦೬ (೪೧೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಕೇಂದ್ರದಿಂದ ಕರ್ನಾಟಕ ರಾಜ್ಯ ವಿವಿಧ ಯೋಜನೆಗಳ ಅಡಿಯಲ್ಲಿ ಬಿಡುಗಡೆಯಾದ ಅನುದಾನ ಎಷ್ಟು; (ವಿವರಗಳನ್ನು ನೀಡುವುದು)

(ಆ) ಸದರಿ ಅವಧಿಯಲ್ಲಿ ಅನುದಾನವನ್ನು ಸಮಯಕ್ಕೆ ಸರಿಯಾಗಿ ಬಿಡುಗಡೆ ಮಾಡಲಾಗಿದೆಯೇ;

(ಇ) ಇಲ್ಲದಿದ್ದಲ್ಲಿ, ಅದಕ್ಕೆ ಕಾರಣಗಳೇನು ?

## ಬೆಂಗಳೂರು ಮಹಾನಗರದ ವ್ಯಾಪ್ತಿಯಲ್ಲಿ ವಿದ್ಯುತ್ ಚಿತಾಗಾರಗಳ ಕುರಿತು

**ಶ್ರೀ ಬಿ.ಕೆ.ಹರಿಪ್ರಸಾದ್ (ವಿಧಾನ ಸಭೆಯಿಂದ ಚುನಾಯಿತರಾದವರು):-**

೩೦೭ (೪೧೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಮಹಾನಗರ ವ್ಯಾಪ್ತಿಯಲ್ಲಿ ವಿದ್ಯುತ್ ಚಿತಾಗಾರಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಹಾಲಿ ಇರುವ ವಿದ್ಯುತ್ ಚಿತಾಗಾರಗಳನ್ನು ಮೇಲ್ದರ್ಜೆಗೇರಿಸಲು ಹಾಗೂ ಹೆಚ್ಚುವರಿ ಚಿತಾಗಾರಗಳನ್ನು ನಿರ್ಮಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಬೆಂಗಳೂರು ನಗರದ ವಿವಿಧ ರಕ್ಷಣಾ ಸಂಸ್ಥೆಗಳ ಪಕ್ಕದಲ್ಲಿ ಕಿರಿದಾದ ರಸ್ತೆ ಕುರಿತು

**ಶ್ರೀ ಬಿ.ಕೆ.ಹರಿಪ್ರಸಾದ್ (ವಿಧಾನ ಸಭೆಯಿಂದ ಚುನಾಯಿತರಾದವರು):-**

೩೦೮ (೪೧೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ನಗರದ ವಿವಿಧ ರಕ್ಷಣಾ ಸಂಸ್ಥೆಗಳ ಪಕ್ಕದಲ್ಲಿರುವ ಕಿರಿದಾದ ರಸ್ತೆಗಳಲ್ಲಿ ಸಂಚಾರ ದಟ್ಟಣೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಪ್ರತ್ಯೇಕ ರಸ್ತೆ ಅಗಲೀಕರಣಕ್ಕೆ ಅವಶ್ಯವಿರುವ ಭೂಮಿಯನ್ನು ಸರ್ವೆ ನಂತರ ಸ್ವಾಧೀನಪಡಿಸಿಕೊಳ್ಳಲು ಸರ್ಕಾರವು ಕೇಂದ್ರಕ್ಕೆ ಸಮಗ್ರ ಪ್ರಸ್ತಾವನೆಯನ್ನು ಸಲ್ಲಿಸಲು ಕ್ರಮವಹಿಸುವುದೇ?

## C.S.R.F. ಅನುದಾನದ ಕಾಮಗಾರಿಗಳ ಬಗ್ಗೆ

**ಶ್ರೀ ಕಾಂತರಾಜ್ (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೯ (೪೯೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಂಪನಿಗಳ ನಾಗರೀಕ ಸಾಮಾಜಿಕ ಜವಾಬ್ದಾರಿ C.S.R.F. ಅನುದಾನ ಅಂದರೇನು; ಕಂಪನಿ ತನ್ನ ಲಾಭಾಂಶದ ಶೇಕಡ ಎಷ್ಟು ಹಣ ತೆಗೆದಿಡಬೇಕಾಗಿದೆ; (ವಿವರವಾದ ಮಾಹಿತಿ ನೀಡುವುದು)

(ಆ) (KREDL) – ಕರ್ನಾಟಕ ನವೀಕರಿಸಬಹುದಾದ ಇಂಧನ ನಿಗಮ ನಿಯಮಿತ ಮೊದಲಿನಿಂದ ಇಲ್ಲಿಯವರೆಗೆ CSR ಫಂಡ್ ಅಡಿ ಯಾವ ಯಾವ ಕಾಮಗಾರಿಗಳಿಗೆ ಎಷ್ಟು ಹಣ ಖರ್ಚು ಮಾಡಿದೆ; ಉಳಿಕೆ ಹಣ ಎಷ್ಟಿದೆ? (ವರ್ಷವಾರು, ಕಾಮಗಾರಿವಾರು ವಿವರವಾದ ಮಾಹಿತಿ ನೀಡುವುದು)

## ಕರ್ನಾಟಕ ಮತ್ತು ಮಹಾರಾಷ್ಟ್ರ ರಾಜ್ಯಗಳ ಕೃಷ್ಣಾ ಕೊಳ್ಳದಲ್ಲಿ ಬೇಸಿಗೆಯಲ್ಲಿ ಉದ್ಭವಿಸುವ ನೀರಿನ ಅಭಾವದ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೧೦ (೨೪೫) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಹಾಗೂ ಮಹಾರಾಷ್ಟ್ರ ರಾಜ್ಯಗಳ ಕೃಷ್ಣಾ ಕೊಳ್ಳದಲ್ಲಿ ಬೇಸಿಗೆ ಕಾಲದಲ್ಲಿ ಉದ್ಭವಿಸುವ ನೀರಿನ ಅಭಾವ ತಣಿಸುವ ನಿಟ್ಟಿನಲ್ಲಿ ಎರಡೂ ರಾಜ್ಯಗಳು ಸಮನ್ವಯ ಸಮಿತಿ ರಚಿಸಿಕೊಂಡು ಈ ಭಾಗದ ರೈತರಿಗೆ ನೀರೊದಗಿಸುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ರಾಜ್ಯದ ರೈತರಿಗೆ ಬರಗಾಲದಲ್ಲಿ ನೀರೊದಗಿಸುವ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಇದರ ರೂಪುರೇಷೆಗಳೇನು; ಈ ಬಗ್ಗೆ ವಿವರವಾದ ಮಾಹಿತಿಯನ್ನು ಒದಗಿಸುವುದು;

(ಇ) ಸದರಿ ಯೋಜನೆಯ ಕುರಿತು ರಾಜ್ಯ ಸರ್ಕಾರವು ಮಹಾರಾಷ್ಟ್ರ ಸರ್ಕಾರದೊಂದಿಗೆ ಒಡಂಬಡಿಕೆ ಮಾಡಿಕೊಳ್ಳಲು ಮಹಾರಾಷ್ಟ್ರ ಸರ್ಕಾರವನ್ನು ರಾಜ್ಯ ಸರ್ಕಾರ ಸಂಪರ್ಕಿಸಿದೆಯೇ; ಸದರಿ ಸಮನ್ವಯ ಸಮಿತಿ ವಿಚಾರದಲ್ಲಿ ಮಹಾರಾಷ್ಟ್ರ ಸರ್ಕಾರದ ನಿಲುವೇನು; (ವಿವರ ಒದಗಿಸುವುದು)

(ಈ) ಸದರಿ ಸಮನ್ವಯ ಸಮಿತಿಯು ಉತ್ತರ ಕರ್ನಾಟಕದ ಕೃಷ್ಣಾ ಕೊಳ್ಳದ ರೈತರಿಗೆ ಬೇಸಿಗೆ ಬರಗಾಲದಲ್ಲಿ ನೀರೊದಗಿಸುವ ವಿಚಾರ ಯಾವಾಗ ಸಾಕಾರಗೊಳ್ಳುವುದು?

## ರಾಜ್ಯದಲ್ಲಿ ಕೃಷಿ ಭೂಮಿ ಸವಳು ಭೂಮಿಯಾಗಿ ಪರಿವರ್ತನೆಯಾಗುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೧೧ (೨೪೪) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನೀರಿನ ಅತೀ ಹೆಚ್ಚು ಬಳಕೆಯಿಂದ ಹಾಗೂ ರಾಸಾಯನಿಕ ಗೊಬ್ಬರದ ಅಸಮತೋಲನ ಉಪಯೋಗದಿಂದ ಭೂಮಿಯು ಸವಳು ಜಮೀನಾಗಿ ಪರಿವರ್ತನೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬೆಳಗಾವಿ ಜಿಲ್ಲೆಯಲ್ಲಿ ಕಳೆದ ೫ ವರ್ಷಗಳ ಅವಧಿಯಲ್ಲಿ ಎಷ್ಟು ಹೆಕ್ಟೇರ್ ಜಮೀನು ಸವಳು ಭೂಮಿಯಾಗಿ ಪರಿವರ್ತನೆಗೊಂಡಿದೆ;

(ಇ) ಈ ಸವಳು ಭೂಮಿಯನ್ನು ಕೃಷಿ ಉಪಯೋಗಕ್ಕಾಗಿ ಪರಿವರ್ತನೆಗೊಳಿಸಲು ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ ಹಾಗೂ ಇದರ ರೂಪುರೇಷೆಗಳೇನು ? (ವಿವರವಾದ ಮಾಹಿತಿ ಒದಗಿಸುವುದು)

## ಬೆಳಗಾವಿ ಜಿಲ್ಲೆ ರಾಯಭಾಗ ತಾಲ್ಲೂಕಿನ ಹಳೇ ದಿಗ್ಗೇವಾಡಿ ಗ್ರಾಮಕ್ಕೆ ಪ್ರವಾಹದಿಂದ ಆಗುವ ಹಾನಿ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೧೨ (೨೪೬) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯ ರಾಯಭಾಗ ತಾಲ್ಲೂಕಿನ ಹಳೇ ದಿಗ್ಗೇವಾಡಿ ಗ್ರಾಮವು ಕೃಷ್ಣಾ ನದಿಗೆ ಅತಿ ಸಮೀಪದಲ್ಲಿದ್ದು, ಪ್ರತಿ ವರ್ಷ ಮಳೆಗಾಲದ ಸಂದರ್ಭದಲ್ಲಿ ಪ್ರವಾಹಕ್ಕೀಡಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಕಳೆದ ಮೂರು ವರ್ಷಗಳ ಅವಧಿಯಲ್ಲಿ ಈ ಪ್ರವಾಹದಿಂದ ಆದ ಆಸ್ತಿ-ಪಾಸ್ತಿಗಳ ಹಾನಿಯ ವಿವರ ಒದಗಿಸುವುದು;

(ಇ) ಪ್ರತಿ ವರ್ಷ ಪ್ರವಾಹ ಪರಿಸ್ಥಿತಿ ಎದುರಿಸುತ್ತಿರುವ ಈ ಗ್ರಾಮವನ್ನು ಶಾಶ್ವತವಾಗಿ ಸ್ಥಳಾಂತರಿಸುವ ಉದ್ದೇಶ ಸರ್ಕಾರಕ್ಕಿದೆಯೇ;

(ಈ) ಇದ್ದಲ್ಲಿ, ಈ ಯೋಜನೆಯ ರೂಪುರೇಷೆಗಳನ್ನು ಹಾಗೂ ಯಾವ ಕಾಲಮಿತಿಯಲ್ಲಿ ಇದನ್ನು ಪೂರ್ಣಗೊಳಿಸಲಾಗುವುದು? (ಸಂಪೂರ್ಣ ವಿವರ ನೀಡುವುದು)

## ರಾಜ್ಯದಲ್ಲಿ ಇತ್ತೀಚಿಗೆ ಕಡಿಮೆಯಾಗುತ್ತಿರುವ ಅಂತರ್ಜಲದ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೩೧೩ (೨೪೩) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಇತ್ತೀಚಿನ ವರ್ಷಗಳಲ್ಲಿ ಮಳೆಯ ಪ್ರಮಾಣವು ವರ್ಷದಿಂದ ವರ್ಷಕ್ಕೆ ಕಡಿಮೆಯಾಗುತ್ತಿದ್ದು, ಅಂತರ್ಜಲ ಸ್ಥಿತಿ ಗಂಭೀರವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಆ) ರಾಜ್ಯದ ಎಷ್ಟು ತಾಲ್ಲೂಕುಗಳಲ್ಲಿ ಅಂತರ್ಜಲ ಸ್ಥಿತಿ ಗಂಭೀರವೆಂದು ಗುರುತಿಸಲಾಗಿದೆ;

(ಇ) ನೀರಿನ ಕೊರತೆ ಇರುವ ತಾಲ್ಲೂಕುಗಳಲ್ಲಿ ಜಲಸಂರಕ್ಷಣೆ, ಮಳೆ ನೀರು ಕೊಯ್ಲು ಚಟುವಟಿಕೆಗಳಿಗಾಗಿ ಎಷ್ಟು ಹಣವನ್ನು ಮೀಸಲಿಡಲಾಗಿದೆ;

(ಈ) ಸದರಿ ಯೋಜನೆಯಡಿಯಲ್ಲಿ ಎಷ್ಟು ಹೆಕ್ಟೇರ್ ಪ್ರದೇಶವನ್ನು ಜಲಾನಯನ ನಿರ್ವಹಣೆಗೆ ತೆಗೆದುಕೊಳ್ಳಲಾಗಿದೆ ?

## ಸಮುದ್ರ ಸೇರಿ ಪೋಲಾಗುತ್ತಿರುವ ಕೃಷ್ಣಾ ನದಿಯ ಲಕ್ಷಾಂತರ ಕ್ಯೂಸೆಕ್ಸ್ ನೀರನ್ನು ಸದ್ಬಳಕೆ ಮಾಡಿಕೊಳ್ಳುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೩೧೪ (೩೨೫) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಭಾರತದ ಪ್ರಮುಖ ನದಿಯಾಗಿರುವ ಕೃಷ್ಣಾ ನದಿಯ ಲಕ್ಷಾಂತರ ಕ್ಯೂಸೆಕ್ಸ್ ನೀರು ಸದ್ಬಳಕೆಯಾಗದೆ ಆಂಧ್ರ ಪ್ರದೇಶ ಹಾಗೂ ಸಮುದ್ರದ ಪಾಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ರಾಜ್ಯದ ಕೃಷ್ಣಾ ನದಿಯ ಸಂಪೂರ್ಣ ಪಾಲನ್ನು ಮತ್ತು ಸಮುದ್ರ ಸೇರಿ ಪೋಲಾಗುತ್ತಿರುವ ಲಕ್ಷಾಂತರ ಕ್ಯೂಸೆಕ್ಸ್ ನೀರನ್ನು ಸದ್ಬಳಕೆ ಮಾಡಿಕೊಳ್ಳಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ಮಹಾರಾಷ್ಟ್ರದಲ್ಲಿ ಮತ್ತು ಆಂಧ್ರಪ್ರದೇಶಗಳಲ್ಲಿ ಕೃಷ್ಣಾ ನದಿಗೆ ಎಲ್ಲೆಲ್ಲಿ ಎಷ್ಟು ಜಲಾಶಯಗಳನ್ನು ನಿರ್ಮಿಸಲಾಗಿದೆ; ಆ ಜಲಾಶಯಗಳಲ್ಲಿ ಎಷ್ಟು ಪ್ರಮಾಣದ ನೀರನ್ನು ಸಂಗ್ರಹಿಸಲಾಗುತ್ತಿದೆ; ಹಾಗೂ ಎಷ್ಟು ಹೆಕ್ಟೇರ್ ಪ್ರದೇಶ ನೀರಾವರಿಗೆ ಒಳಪಟ್ಟಿದೆ; (ವಿವರ ಒದಗಿಸುವುದು)

(ಈ) ಪ್ರತಿ ವರ್ಷ ಜೂನ್‌ನಿಂದ ಸೆಪ್ಟೆಂಬರ್‌ವರೆಗೆ ಯಾವ ಯಾವ ರಾಜ್ಯಗಳಲ್ಲಿ ಎಷ್ಟು ಪ್ರಮಾಣದ ನೀರು ಹರಿಯುತ್ತದೆ; ಯಾವ ಯಾವ ರಾಜ್ಯಗಳಲ್ಲಿ ಎಷ್ಟು ಪ್ರಮಾಣದ ನೀರು ಸದ್ಬಳಕೆಯಾಗುತ್ತಿದೆ; (ವಿವರ ಒದಗಿಸುವುದು)

(ಉ) ಪ್ರತಿ ವರ್ಷ ಜೂನ್‌ನಿಂದ ಅಕ್ಟೋಬರ್‌ವರೆಗೆ ಎಷ್ಟು ಕ್ಯೂಸೆಕ್ಸ್ ನೀರು ಸಮುದ್ರ ಸೇರುತ್ತಿದೆ;

(ಊ) ಸಮುದ್ರದ ಪಾಲಾಗುತ್ತಿರುವ ಈ ಲಕ್ಷಾಂತರ ಕ್ಯೂಸೆಕ್ಸ್ ನೀರನ್ನು ಸದ್ಬಳಕೆ ಮಾಡಿಕೊಳ್ಳಲು ಸರ್ಕಾರ ಯಾವ ಯೋಜನೆಗಳನ್ನು ಹಾಕಿಕೊಂಡಿದೆ? (ವಿವರ ಒದಗಿಸುವುದು)

## ಡಿ. ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮಕ್ಕೆ ಅನುದಾನ ನೀಡದಿರುವ ಕುರಿತು

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೧೫ (೪೮೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಿ. ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮಕ್ಕೆ ಪ್ರಸಕ್ತ ಸಾಲಿನಲ್ಲಿ ಒದಗಿಸಿರುವ ಅನುದಾನವೆಷ್ಟು; ಅನುದಾನ ಕೊರತೆಯಿಂದ ಈ ಇಲಾಖೆ ಬಳಲುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಈ ಸಂಬಂಧ ಕೈಗೊಳ್ಳುವ ಕ್ರಮಗಳೇನು?

## ತುಂಗಭದ್ರ ಅಣೆಕಟ್ಟೆಯ ನೀರಿನ ಸದ್ಬಳಕೆ ಕುರಿತು

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೧೬ (೪೮೩) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಂಬಭದ್ರಾ ಅಣೆಕಟ್ಟೆಯ ನೀರಿನ ಸದ್ಬಳಕೆಗೆ ಕೊಪ್ಪಳದ ನವಲಿ ಸಮೀಪ ನಿರ್ಮಿಸಲು ಉದ್ದೇಶಿಸಿರುವ ಸಮಾನಾಂತರ ಜಲಾಶಯಕ್ಕೆ ಆಂಧ್ರಪ್ರದೇಶ ವಿರೋಧ ವ್ಯಕ್ತಪಡಿಸಿರುವುದು ನಿಜವೇ;

(ಆ) ಜಲಾಶಯ ನಿರ್ಮಾಣಕ್ಕಾಗಿ ಸರ್ಕಾರ ಈವರೆಗೆ ಒದಗಿಸಿರುವ ಅನುದಾನವೆಷ್ಟು; ಆಂಧ್ರಪ್ರದೇಶದ ವಿರೋಧವನ್ನು ಎದುರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ನೀರಾವರಿ ನಿಗಮಗಳಿಗೆ ಬಿಡುಗಡೆಯಾದ ಮೊತ್ತದ ಬಗ್ಗೆ ಮಾಹಿತಿ ಕುರಿತು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):–**

೩೧೭ (೪೭೭) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ನೀರಾವರಿ ನಿಗಮಗಳು ಯಾವುವು;

(ಆ) ಕಳೆದ ೨ ವರ್ಷಗಳಿಂದ ಸದರಿ ನಿಗಮಗಳ ಕಾಮಗಾರಿ ಸಂಬಂಧ ಬಿಡುಗಡೆಯಾಗಿರುವ ಮೊತ್ತವೆಷ್ಟು; (ನಿಗಮವಾರು ವಿವರ ನೀಡುವುದು)

(ಇ) ಕಳೆದ ೨ ವರ್ಷಗಳಿಂದ ನೀರಾವರಿ ನಿಗಮಗಳಲ್ಲಿ ಗುತ್ತಿಗೆದಾರರ ಬಾಕಿಯನ್ನು ಯಾವ ಯಾವ ಲೆಕ್ಕ ಶೀರ್ಷಿಕೆಯಡಿ, ಎಷ್ಟು ಮೊತ್ತದ ಹಣವನ್ನು ಹಂಚಿಕೆ ಮಾಡಲಾಗಿದೆ; (ವಿವರ ನೀಡುವುದು)

(ಈ) ಹಂಚಿಕೆ ಮಾಡುವಲ್ಲಿ ಅನುಸರಿಸಲಾಗಿರುವ ಮಾನದಂಡಗಳೇನು; (ವಿವರ ನೀಡುವುದು)

(ಉ) ಮಾನದಂಡಗಳನ್ನು ಅನುಸರಿಸದೆ ಹಣ ಹಂಚಿಕೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಊ) ನಿಯಮ ಪಾಲನೆ ಮಾಡದೆ ಹಣ ಹಂಚಿಕೆ ಮಾಡಿರುವ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಸರ್ಕಾರಿ ಅನುದಾನಿತ, ಅನುದಾನ ರಹಿತ ಕಾನೂನು ಕಾಲೇಜುಗಳ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):–**

೩೧೮ (೪೭೯) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾನೂನು ವಿಶ್ವವಿದ್ಯಾನಿಲಯದಲ್ಲಿ ಖಾಯಂ/ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಬೋಧಕೇತರರ ಸಂಖ್ಯೆ ಎಷ್ಟು;

(ಆ) ಸದರಿಯವರಿಗೆ ಮಾಸಿಕ ನೀಡಲಾಗುತ್ತಿರುವ ಗೌರವಧನವೆಷ್ಟು;

(ಇ) ರಾಜ್ಯದಲ್ಲಿರುವ ಸರ್ಕಾರಿ, ಅನುದಾನಿತ, ಅನುದಾನರಹಿತ ಕಾನೂನು ಕಾಲೇಜುಗಳ ಸಂಖ್ಯೆ ಎಷ್ಟು; ಹಾಗೂ ಅವುಗಳಲ್ಲಿ ಖಾಲಿ ಇರುವ ಬೋಧಕರ ಹುದ್ದೆಗಳ ಸಂಖ್ಯೆ ಎಷ್ಟು ; (ಭೋದಕರ ಮಾಹಿತಿಯನ್ನು ನೀಡುವುದು)

(ಈ) ಸದರಿ ಕಾನೂನು ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲಾಗುವುದು ?

## ಅನುದಾನಿತ ಶಾಲಾ ಕಾಲೇಜುಗಳ ಹುದ್ದೆ ಭರ್ತಿಗೆ ಆರ್ಥಿಕ ಇಲಾಖೆ ತಡೆಹಿಡಿದಿರುವ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):–**

೩೧೯ (೪೮೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅನುದಾನಿತ ಶಾಲಾ ಕಾಲೇಜುಗಳಲ್ಲಿ ೨೦೧೫ನೇ ಸಾಲಿನವರೆಗೆ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಅನುಮತಿಯಂತೆ ಶಿಕ್ಷಣ ಇಲಾಖೆಯಿಂದ ಆರ್ಥಿಕ ಇಲಾಖೆಗೆ ಅನುಮೋದನೆಗಾಗಿ ಸಲ್ಲಿಕೆಯಾಗಿರುವ ಪ್ರಸ್ತಾವನೆಗಳ ಸಂಖ್ಯೆ ಎಷ್ಟು; (ಪ್ರಾಥಮಿಕ, ಪ್ರೌಢ, ಪದವಿಪೂರ್ವ, ಪದವಿ ಕಾಲೇಜುಗಳ ವಿವರ ನೀಡುವುದು)

(ಆ) ಸದರಿ ಕಡತಗಳಿಗೆ ಆರ್ಥಿಕ ಇಲಾಖೆ ಕೋವಿಡ್–೧೯ರ ಆರ್ಥಿಕ ಮಿತವ್ಯಯದ ಅಡಿ ಅನುಮೋದನೆಗೆ ತಡೆಹಿಡಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಇದರಿಂದಾಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಅನುದಾನದ ನಿರೀಕ್ಷೆಯಲ್ಲಿರುವ ಬೋಧಕರಿಗೆ ಮತ್ತು ವಿದ್ಯಾರ್ಥಿಗಳ ಗುಣಮಟ್ಟದ ಶಿಕ್ಷಣಕ್ಕೆ ಅಡ್ಡಿ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹಾಗಿದ್ದಲ್ಲಿ, ಸದರಿ ಮಿತವ್ಯಯವನ್ನು ಸಡಿಲಿಸಿ, ಶಿಕ್ಷಣ ಇಲಾಖೆಯಿಂದ ಬರುವ ಎಲ್ಲಾ ಪ್ರಸ್ತಾವನೆಗಳಿಗೂ ಯಾವ ಕಾಲಮಿತಿಯಲ್ಲಿ ಅನುಮೋದನೆ ನೀಡಲಾಗುವುದು?

## ಅಬಕಾರಿ ನಿರೀಕ್ಷಕರು, ಉಪ ನಿರೀಕ್ಷಕರಿಗೆ ಸೌಲಭ್ಯ ಕಲ್ಪಿಸುವ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):–**

೩೨೦ (೪೮೧) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಬಕಾರಿ ನಿರೀಕ್ಷಕರ ಆತ್ಮ ರಕ್ಷಣೆಗಾಗಿ ಪಿಸ್ತೂಲುಗಳನ್ನು ನೀಡಲು ಸರ್ಕಾರ ಉದ್ದೇಶಿಸಿದೆಯೇ;

(ಆ) ಅಬಕಾರಿ ಉಪ ನಿರೀಕ್ಷಕರಿಗೆ ಇಲಾಖೆಯ ವತಿಯಿಂದ ದ್ವಿಚಕ್ರ ವಾಹನ ವಿತರಿಸಲು ಕ್ರಮ ವಹಿಸಲಾಗಿದೆಯೇ;

(ಇ) ಹಾಗಿದ್ದಲ್ಲಿ, ಈ ಸಂಬಂಧ ಸರ್ಕಾರ ಇದುವರೆವಿಗೆ ಕೈಗೊಂಡ ಕ್ರಮಗಳೇನು;

(ಈ) ಅಬಕಾರಿ ಅಕಾಡೆಮಿ ಸ್ಥಾಪಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು?

## ಪ್ರವಾಸೋದ್ಯಮ ಇಲಾಖೆಯ ಕಾಮಗಾರಿಯ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):-**

೩೨೧ (೪೭೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪ್ರವಾಸೋದ್ಯಮ ಇಲಾಖೆಯಿಂದ ಕಳೆದ ಮೂರು ವರ್ಷಗಳಿಂದ ಪ್ರವಾಸೋದ್ಯಮ ಅಭಿವೃದ್ಧಿಗಾಗಿ ಯಾವ ಯಾವ ಹೊಸ ಯೋಜನೆಗಳನ್ನು, ಯಾವ ಯಾವ ಸ್ಥಳಗಳಲ್ಲಿ ರೂಪಿಸಲಾಗಿದೆ;

(ಆ) ಸದರಿ ಯೋಜನೆಗಳ ರೂಪುರೇಷೆಗಳೇನು ; (ವಿವರ ನೀಡುವುದು)

(ಇ) ಈ ಯೋಜನೆಗಳು ಯಾವ ಹಂತದಲ್ಲಿವೆ; ಸದರಿ ಯೋಜನೆಗಳಿಗೆ ಇದುವರೆವಿಗೂ ಬಿಡುಗಡೆಯಾಗಿರುವ ಮೊತ್ತವೆಷ್ಟು;

(ಈ) ಯಾವ ಕಾಲಮಿಯುಲ್ಲಿ ಸದರಿ ಯೋಜನೆಗಳನ್ನು ಪೂರ್ಣಗೊಳಿಸಲಾಗುವುದು ?

## ಕರ್ನಾಟಕ ಲೋಕಸೇವಾ ಆಯೋಗದವರು ನಡೆಸುವ ಪರೀಕ್ಷೆಗಳ ಕುರಿತು

**ಶ್ರೀ ನಸೀರ್ ಅಹ್ಮದ್ (ವಿಧಾನ ಸಭೆಯಿಂದ ಚುನಾಯಿತರಾದವರು):-**

೩೨೨ (೨೩೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಭಾರತ ಸರ್ಕಾರದ ಮಾಹಿತಿ ತಂತ್ರಜ್ಞಾನ ಇಲಾಖೆಯು ಇ-ಸಂಗ್ರಹಣಾ ವ್ಯವಸ್ಥೆಗಳ ಗುಣಮಟ್ಟ ಅವಶ್ಯಕತೆಗಳನ್ನು ಪಾಲಿಸಲು ಹೊರಡಿಸಿರುವ ಮಾರ್ಗಸೂಚಿಗಳಲ್ಲಿ, ಒಂದು ವೇಳೆ

ಸಾರ್ವಜನಿಕ ಸಂಸ್ಥೆಯು ಇ-ಸಂಗ್ರಹಣೆ ಪ್ರಕ್ರಿಯೆಯಿಂದ ವಿನಾಯ್ತಿ ಪಡೆದರೆ, ಆಗ ಹೊರಗುತ್ತಿಗೆ ಏಜನ್ಸಿಯಿಂದ ಪರಿಶೀಲನೆ ಮತ್ತು ಲೆಕ್ಕಪರಿಶೋಧನೆ ಮಾಡಿಸಿ, ಪಾಲನೆ ದೃಢೀಕರಣ ಹೊಂದಲು ಬದ್ಧವಾಗಿರಬೇಕು ಎಂದು ಹೇಳಿರುವುದು ನಿಜವೇ;

(ಆ) ಕೆ.ಪಿ.ಎಸ್.ಸಿ.ಯು ಗೆಜೆಟೆಡ್ ಪ್ರೊಬೇಷನರ್‌ಗಳ ಮುಖ್ಯ ಪರೀಕ್ಷೆ-೨೦೧೫ರ ಡಿಜಿಟಲ್ ಮೌಲ್ಯಮಾಪನಕ್ಕೆ ಕೆ.ಟಿ.ಪಿ.ಪಿ. ಅಧಿನಿಯಮದ ೪ (ಜಿ) ಪ್ರಕರಣದ ಅಡಿಯಲ್ಲಿ ವಿನಾಯ್ತಿ ಪಡೆದಿದೆಯೇ;

(ಇ) ಹಾಗಿದ್ದಲ್ಲಿ, ಕೆ.ಪಿ.ಎಸ್.ಸಿ.ಯು "ಗೆಜೆಟೆಡ್ ಪ್ರೊಬೇಷನರ್‌ಗಳ ಮುಖ್ಯ ಪರೀಕ್ಷೆ-೨೦೧೫ ರ ಮುಖ್ಯ ಪರೀಕ್ಷೆಯ ಡಿಜಿಟಲ್ ಮೌಲ್ಯಮಾಪನದ ಸಂಪೂರ್ಣ ಪ್ರಕ್ರಿಯೆಯ ದತ್ತಾಂಶ ಏಕೀಕೃತ ಲೆಕ್ಕಪರಿಶೋಧನೆಯನ್ನು ಕೈಗೊಂಡಿದೆಯೇ?

## ಡಿ.ಜೆ.ಹಳ್ಳಿ ಮತ್ತು ಕೆ.ಜಿ.ಹಳ್ಳಿ ಗಲಭೆ ಕುರಿತು

**ಶ್ರೀ ನಸೀರ್ ಅಹ್ಮದ್ (ವಿಧಾನ ಸಭೆಯಿಂದ ಚುನಾಯಿತರಾದವರು):-**

೩೨೩ (೪೩೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಇತ್ತೀಚಿಗೆ ನಡೆದ ಡಿ.ಜೆ.ಹಳ್ಳಿ ಮತ್ತು ಕೆ.ಜಿ.ಹಳ್ಳಿಯ ಗಲಭೆಯಲ್ಲಿ ಭಾಗವಹಿಸಿದ್ದ ಎಷ್ಟು ಮಂದಿಯನ್ನು ಇಲ್ಲಿಯವರೆಗೆ ಬಂಧಿಸಲಾಗಿದೆ; ಹಾಗೂ ಯಾವ ಯಾವ ಸೆಕ್ಷನ್‌ಗಳಡಿಯಲ್ಲಿ ಬಂಧಿಸಲಾಗಿದೆ; (ಸಂಪೂರ್ಣ ವಿವರ ನೀಡುವುದು)

(ಆ) ಅವುಗಳಲ್ಲಿ ಜಾಮೀನು ಸಹಿತ ಮತ್ತು ಜಾಮೀನು ರಹಿತ ಆರೋಪಿಗಳ ಸಂಖ್ಯೆ ಎಷ್ಟು; ಆರೋಪಿಗಳಿರುವ ಬಂಧಿಖಾನೆಗಳು ಯಾವುವು; (ವಿವರ ನೀಡುವುದು)

(ಇ) ಬಿಡುಗಡೆಯಾದ ಬಂಧಿತ ಆರೋಪಿಗಳ ಸಂಖ್ಯೆ ಎಷ್ಟು; ಮತ್ತೆ ಯಾವ ಸೆಕ್ಷನ್‌ಗಳಡಿಯಲ್ಲಿ ಮರು ಬಂಧಿಸಲಾಗಿದೆ? (ವಿವರ ನೀಡುವುದು)

## ಎತ್ತಿನಹೊಳೆ ಯೋಜನೆ ಪ್ರಾರಂಭ ಕುರಿತು

**ಡಾ. ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೩೨೪ (೪೯೦) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಎತ್ತಿನಹೊಳೆ ಯೋಜನೆ ಪ್ರಾರಂಭ ಆಗಿದ್ದು ಯಾವಾಗ; ಇದರ ರೂಪುರೇಷೆಗಳೇನು;

(ಆ) ಈ ಯೋಜನೆಗೆ ಇದುವರೆಗೆ ಖರ್ಚು ಮಾಡಲಾದ ಅನುದಾನ ಎಷ್ಟು; (ಯೋಜನೆಯ ಪ್ರಗತಿಯ ವಿವರಗಳನ್ನು ನೀಡುವುದು)

(ಇ) ಈ ಯೋಜನೆಯ ಅನುಷ್ಠಾನದಲ್ಲಿ ಭೂ ಸ್ವಾಧೀನ ಪ್ರಕ್ರಿಯೆ ನಿಧಾನಗತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಈ ಯೋಜನೆಯನ್ನು ಯಾವಾಗ ಪೂರ್ಣಗೊಳಿಸಲಾಗುವುದು?

## ಕೃಷ್ಣ ಮೇಲ್ದಂಡೆ ಯೋಜನೆಯ ಭೂ–ಸ್ವಾಧೀನ ಪ್ರಕ್ರಿಯೆಯ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ):–**

೩೨೫ (೪೩೦) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷ್ಣಾ ಮೇಲ್ದಂಡೆ ಯೋಜನೆಯ ಅನುಷ್ಠಾನಕ್ಕಾಗಿ ಹೊಸದಾಗಿ ನಿರ್ಮಿಸುತ್ತಿರುವ ೨೦ ಪುನರ್ ವಸತಿ ಮತ್ತು ಪುನರ್ ನಿರ್ಮಾಣ ಕೇಂದ್ರಗಳಿಗಾಗಿ ಎಷ್ಟು ಎಕರೆ ಜಮೀನುಗಳನ್ನು ಭೂ–ಸ್ವಾಧೀನ ಪಡಿಸಿಕೊಳ್ಳಲಾಗಿದೆ; ಅವುಗಳು ಯಾವ ಹಂತದಲ್ಲಿವೆ;

(ಆ) ಉಳಿದ ಗ್ರಾಮಗಳಿಗೆ ಯಾವ ಕಾಲಮಿತಿಯಲ್ಲಿ ಭೂ–ಸ್ವಾಧೀನ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗುವುದು;

(ಇ) ಯಾವ ಯಾವ ಗ್ರಾಮಗಳು ಸದರಿ ಭೂ–ಸ್ವಾಧೀನ ವ್ಯಾಪ್ತಿಯಲ್ಲಿವೆ; (ಗ್ರಾಮವಾರು ಸಂಪೂರ್ಣ ವಿವರವನ್ನು ನೀಡುವುದು)

(ಈ) ಭೂ–ಸ್ವಾಧೀನ ಪಡಿಸಿಕೊಂಡ ಜಮೀನುಗಳಿಗೆ ಪರಿಹಾರ ಒದಗಿಸಲಾಗಿದೆಯೇ; ಇಲ್ಲವಾದಲ್ಲಿ, ಯಾವ ಕಾಲಮಿತಿಯಲ್ಲಿ ಸಂತ್ರಸ್ಥರಿಗೆ ಪರಿಹಾರ ನೀಡಲಾಗುವುದು;

(ಉ) ಭೂ–ಸ್ವಾಧೀನ ಪಡಿಸಿಕೊಂಡ ಪುನರ್ ವಸತಿ ಕೇಂದ್ರಗಳಲ್ಲಿ ಅಭಿವೃದ್ಧಿ ಕಾರ್ಯಗಳು ಪ್ರಾರಂಭವಾಗಿವೆಯೇ; ಹಾಗಿದ್ದಲ್ಲಿ, ಅವುಗಳು ಯಾವ ಹಂತದಲ್ಲಿವೆ? (ಪುನರ್ ವಸತಿ ಕೇಂದ್ರವಾರು ಸಂಪೂರ್ಣ ವಿವರ ನೀಡುವುದು)

## ಕೃಷ್ಣಾ ಮೇಲ್ದಂಡೆ ಯೋಜನೆಯ ಅನುಷ್ಠಾನಕ್ಕಾಗಿ ಕಾರ್ಯನಿರ್ವಹಿಸುತ್ತಿರುವ ಕಛೇರಿಗಳ ಮತ್ತು ಅವುಗಳಲ್ಲಿ ಖಾಲಿಯಿರುವ ಹುದ್ದೆಗಳ ನೇಮಕಾತಿ ಬಗ್ಗೆ

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ):–**

೩೨೬ (೪೩೧) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷ್ಣಾ ಮೇಲ್ದಂಡೆ ಯೋಜನೆಯ ಅನುಷ್ಠಾನಕ್ಕಾಗಿ ಕಾರ್ಯನಿರ್ವಹಿಸುತ್ತಿರುವ ಕಛೇರಿಗಳ (ಪುನರ್ ವಸತಿ ಮತ್ತು ಪುನರ್ ನಿರ್ಮಾಣ) ಸಂಖ್ಯೆ ಎಷ್ಟು;

(ಆ) ಸದರಿ ಕಛೇರಿಗಳಲ್ಲಿ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು;

(ಇ) ಅವುಗಳಲ್ಲಿ ಖಾಯಂ, ಗುತ್ತಿಗೆ ಆಧಾರದ ಮೇಲೆ ಮತ್ತು ದಿನಗೂಲಿ ಆಧಾರದ ಮೇಲೆ ಸೇವೆ ಸಲ್ಲಿಸುತ್ತಿರುವವರ ಸಂಖ್ಯೆ ಎಷ್ಟು; ಹಾಗೂ ಪ್ರಸ್ತುತ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು;

(ಈ) ಖಾಲಿಯಿರುವ ಹುದ್ದೆಗಳನ್ನು ನೇಮಕ ಮಾಡಿಕೊಳ್ಳುವಲ್ಲಿ ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು;

(ಉ) ಖಾಲಿಯಿರುವ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಿಕೊಳ್ಳಲಾಗುವುದು?

## ಕೃಷ್ಣಾ ಮೇಲ್ದಂಡೆ ಯೋಜನೆಗೆ ಒದಗಿಸಲಾದ ಅನುದಾನದ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ):–**

೩೨೭ (೪೩೨) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷ್ಣಾ ಮೇಲ್ದಂಡೆ ಯೋಜನೆಗಾಗಿ ೨೦೧೮-೧೯ ರಿಂದ ೨೦೨೦-೨೧ರ ಸಾಲಿನಲ್ಲಿ ಎಷ್ಟು ಹಣ ಒದಗಿಸಲಾಗಿದೆ;

(ಆ) ಯಾವ ಯಾವ ಕಾಮಗಾರಿಗಳಿಗೆ ಎಷ್ಟು ಹಣ ಬಳಸಲಾಗಿದೆ; (ಸಂಪೂರ್ಣ ವಿವರ ನೀಡುವುದು)

(ಇ) ಅವುಗಳಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ; ಅವುಗಳ ಪ್ರಗತಿ ಯಾವ ಹಂತದಲ್ಲಿವೆ? (ಸಂಪೂರ್ಣ ವಿವರ ನೀಡುವುದು)

## ಕೆ.ಸಿ. ವ್ಯಾಲಿ ಯೋಜನೆ ಕುರಿತು

**ಡಾ. ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):-**

೩೨೮ (೪೮೯) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೆ.ಸಿ. ವ್ಯಾಲಿ ಯೋಜನೆ ಪ್ರಾರಂಭವಾಗಿದ್ದು ಯಾವಾಗ; ಈ ಯೋಜನೆಯ ರೂಪುರೇಷೆಗಳೇನು;

(ಆ) ಮೊದಲನೇ ಹಂತದ ಯೋಜನೆಗೆ ಬಿಡುಗಡೆಯಾದ ಅನುದಾನ ಎಷ್ಟು; ಎರಡನೇ ಹಂತದ ಯೋಜನೆಯನ್ನು ರೂಪಿಸಲು ಸರ್ಕಾರ ಚಿಂತಿಸಿದೆಯೇ;

(ಇ) ಎರಡನೇ ಯೋಜನೆ ಮುಖಾಂತರ ಇನ್ನುಳಿದ ಕೆರೆಗಳಿಗೆ ನೀರನ್ನು ತುಂಬಿಸಲು ಸರ್ಕಾರ ಯೋಚಿಸಿದೆಯೇ;

(ಈ) ಈ ಯೋಜನೆಗಾಗಿ ಸರ್ಕಾರ ಮೀಸಲಿಟ್ಟ ಹಣ ಎಷ್ಟು; ಈ ಯೋಜನೆ ಯಾವಾಗ ಪ್ರಾರಂಭವಾಗುತ್ತದೆ?

## ಸಿ.ಎಲ್.–೭ ಸನ್ನದ್ದುಗಳ ಕುರಿತು

**ಡಾ. ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೩೨೯ (೪೮೮) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿರುವ ಸಿ.ಎಲ್.೭ ಸನ್ನದ್ದುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಸನ್ನದ್ದುಗಳ ಮಂಜೂರಾತಿಗೆ ಇರುವ ನಿಯಮಗಳೇನು;

(ಇ) ಈ ಸನ್ನದ್ದುಗಳ ಮಂಜೂರಾತಿಯಲ್ಲಿ ಅಕ್ರಮಗಳು ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಇದರಲ್ಲಿ ಭಾಗಿಯಾದ ಯಾವ ಯಾವ ಅಧಿಕಾರಿಗಳ ಮೇಲೆ ಇದುವರೆಗೆ ಕ್ರಮ ಕೈಗೊಳ್ಳಲಾಗಿದೆ? (ವಿವರಗಳನ್ನು ನೀಡುವುದು)

## ವಕೀಲರನ್ನು ನೇಮಿಸುವ ಕುರಿತು

**ಡಾ. ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೩೩೦ (೪೯೧) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾನೂನು ಇಲಾಖೆಯ ಅಡಿಯಲ್ಲಿ ಸರ್ಕಾರಿ ಸ್ವಾಮ್ಯದಲ್ಲಿರುವ ಬೇರೆ ಬೇರೆ ಸಂಸ್ಥೆಗಳಿಗೆ ವಕೀಲರನ್ನು ನೇಮಿಸುವ ಪ್ರಕ್ರಿಯೆಗೆ ಇರುವ ಮಾನದಂಡಗಳೇನು;

(ಆ) ಈ ಮಾನದಂಡಗಳಿಗೆ ಬದಲಾಗಿ ಅರ್ಹತಾ ಪರೀಕ್ಷೆ ಮುಖಾಂತರ ಮೇಲ್ಕಂಡ ಸಂಸ್ಥೆಗಳಿಗೆ ವಕೀಲರನ್ನು ನೇಮಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಕರ್ನಾಟಕ ಲೋಕಸೇವಾ ಆಯೋಗದಲ್ಲಿ ೨೦೧೭-೧೮ ಸಾಲಿನಲ್ಲಿ FDA ಮತ್ತು SDA ಹುದ್ದೆಗಳ ನೇಮಕಾತಿ ಕುರಿತು

**ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಹಾಗೂ**
**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೩೩೧ (೪೨೫+೪೨೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೭-೧೮ ನೇ ಸಾಲಿನಲ್ಲಿ ಕರ್ನಾಟಕ ಲೋಕಸೇವಾ ಆಯೋಗದ ವತಿಯಿಂದ ಒಟ್ಟು ಎಷ್ಟು FDA ಮತ್ತು SDA ಹುದ್ದೆಗಳನ್ನು ನೇಮಕ ಮಾಡಿಕೊಳ್ಳಲು ಅಧಿಸೂಚನೆ ಹೊರಡಿಸಲಾಗಿತ್ತು; (ವಿವರ ನೀಡುವುದು)

(ಆ) ಸದರಿ ಅಧಿಸೂಚನೆಗಳಂತೆ ನೇಮಕಾತಿ ಪ್ರಕ್ರಿಯೆಗಳು ಪ್ರಸ್ತುತ ಯಾವ ಹಂತದಲ್ಲಿವೆ;

(ಇ) ಸದರಿ ನೇಮಕಾತಿಗೆ ಸಂಬಂಧಿಸದಂತೆ, ಇತ್ತೀಚೆಗೆ ಅಭ್ಯರ್ಥಿಗಳ ಅಂತಿಮ ಆಯ್ಕೆ ಪಟ್ಟಿಯನ್ನು ಬಿಡುಗಡೆಗೊಳಿಸಿ, ಅಭ್ಯರ್ಥಿಗಳಿಗೆ ಇಲಾಖೆಗಳನ್ನು ಹಂಚಿಕೆಮಾಡಿ, ಸ್ಥಳ ನಿಯುಕ್ತಿಗೊಳಿಸಿರುವುದು ನಿಜವೇ;

(ಈ) ಹಾಗಿದ್ದಲ್ಲಿ, ಆಯ್ಕೆಯಾದ ಅಭ್ಯರ್ಥಿಗಳನ್ನು ಸ್ಥಳನಿಯುಕ್ತಿಗೊಳಿಸಿದ ನಂತರ ಕರ್ತವ್ಯಕ್ಕೆ ಹಾಜರಾಗಿ ವರದಿ ಮಾಡಿಕೊಳ್ಳದಂತೆ ತಡೆಹಿಡಿದಿರುವುದಕ್ಕೆ ಕಾರಣಗಳೇನು;

(ಉ) ಆರ್ಥಿಕ ಇಲಾಖೆಯು ಸಂಪನ್ಮೂಲ ಕ್ರೂಢೀಕರಣದ ಕಾರಣ ನೀಡಿದ್ದರೂ ಸಹ ಹಲವಾರು ಇಲಾಖೆಗಳು ನೇಮಕಾತಿಗಳನ್ನು ಮುಂದುವರೆಸಿ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಿದ್ದು, ಕೆ.ಪಿ.ಎಸ್.ಸಿ ನಡೆಸಿರುವ ೨೦೧೭ ಸಾಲಿನ FDA ಮತ್ತು SDA ಹುದ್ದೆಗಳ ನೇಮಕಾತಿ ಮಾತ್ರ ತಡೆಹಿಡಿಯಲು ಕಾರಣವೇನು;

(ಊ) ಸದರಿ ಆಯ್ಕೆಗೊಂಡ ಅಭ್ಯರ್ಥಿಗಳನ್ನು ಕರ್ತವ್ಯಕ್ಕೆ ಹಾಜರಾಗಿ ವರದಿ ಮಾಡಿಕೊಳ್ಳಲು ಸರ್ಕಾರ ಯಾವ ಕಾಲಮಿತಿಯಲ್ಲಿ ಕ್ರಮ ಕೈಗೊಳ್ಳಲಾಗುವುದು ?

## ಬೆಂಗಳೂರಿನ ಹೊಸಗುಡ್ಡದಹಳ್ಳಿಯಲ್ಲಿರುವ ಕೆಮಿಕಲ್ ಕಾರ್ಖಾನೆಯ ಬೆಂಕಿ ಅವಘಡದ ಬಗ್ಗೆ

**ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೩೨ (೪೨೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚೆಗೆ ಬೆಂಗಳೂರು ಹೊಸಗುಡ್ಡದಹಳ್ಳಿಯಲ್ಲಿರುವ ಕೆಮಿಕಲ್ ಕಾರ್ಖಾನೆಯಲ್ಲಿ ಬೆಂಕಿ ಅವಘಡವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ವಸತಿ ಪ್ರದೇಶಗಳಲ್ಲಿ ಈ ರೀತಿಯ ಕಾರ್ಖಾನೆಗಳನ್ನು ಸ್ಥಾಪನೆ ಮಾಡಲು ಇರುವ ಮಾನದಂಡಗಳೇನು;

(ಇ) ವಸತಿ ಪ್ರದೇಶದಲ್ಲಿ ಈ ರೀತಿಯ ಅಪಾಯಕಾರಿ ಕೆಮಿಕಲ್ ಕಾರ್ಖಾನೆಗಳನ್ನು ನಡೆಸುತ್ತಿರುವವರ ಬಗ್ಗೆ ಹಾಗೂ ಸಂಬಂಧಪಟ್ಟ ಅಧಿಕಾರಿ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಈ) ಸದರಿ ಬೆಂಕಿ ಅವಘಡದಲ್ಲಿ ಕಾರ್ಖಾನೆಯ ಅಕ್ಕಪಕ್ಕ ಇರುವ ಸಾರ್ವಜನಿಕ ಸ್ವತ್ತುಗಳಿಗೆ ಆಗಿರುವ ನಷ್ಟಕ್ಕೆ ಸರ್ಕಾರ ಒದಗಿಸಿದ ಪರಿಹಾರವೆಷ್ಟು;

(ಉ) ಇತ್ತೀಚಿಗೆ ಬೆಂಗಳೂರು ಹೊಸಗುಡ್ಡದಳ್ಳಿಯಲ್ಲಿರುವ ಕೆಮಿಕಲ್ ಕಾರ್ಖಾನೆಯಲ್ಲಿ ಆಗಿರುವ ಬೆಂಕಿ ಅವಘಡದ ಬಗ್ಗೆ ಪೂರ್ಣ ಮಾಹಿತಿ ಒದಗಿಸುವುದು ?

## ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದಲ್ಲಿನ ನೇಮಕಾತಿ ಪ್ರಕ್ರಿಯೆ ಬಗ್ಗೆ

**ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೩೩ (೪೨೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಮಂಡಳಿಯು ೨೦೧೯ ರ ಫೆಬ್ರವರಿ ೨೦ ರಂದು ಖಾಲಿಯಿದ್ದ AEE,AE,JE,JPA,JA ಸೇರಿದಂತೆ, ಒಟ್ಟು ೩೬೪೬ ಹುದ್ದೆಗಳಿಗೆ ಅಧಿಸೂಚನೆ ಹೊರಡಿಸಿ ೧೧/೨ ವರ್ಷಗಳು ಕಳೆದರೂ ನೇಮಕಾತಿ ಪ್ರಕ್ರಿಯೆ ನಡೆಸದಿರಲು ಕಾರಣವೇನು;

(ಆ) ಅಲ್ಲದೇ, ಹಠಾತ್ತನೇ ದಿನಾಂಕ:೨೧-ನವೆಂಬರ್-೨೦೨೦ ರಂದು ಈ ಹುದ್ದೆಗಳ ನೇಮಕಾತಿಯನ್ನು ಕೆಲವು ಆಡಳಿತಾತ್ಮಕ ಕಾರಣವನ್ನು ನೀಡಿ ರದ್ದುಗೊಳಿಸಲು ಕಾರಣವೇನು;

(ಇ) ಇನ್ನುಳಿದ ಇಲಾಖೆಗಳ ನೇಮಕಾತಿಗಳು ನಡೆಯುತ್ತಿದ್ದರೂ ಈ ಇಲಾಖೆಯ ನೇಮಕಾತಿಯನ್ನು ಮಾತ್ರ ತಡೆಹಿಡಿದು ರದ್ದುಗೊಳಿಸಲು ಕಾರಣವೇನು;

(ಈ) ಅಲ್ಲದೇ ರಾಜ್ಯದ ಲಕ್ಷಾಂತರ ಅಭ್ಯರ್ಥಿಗಳು ಈ ಇಲಾಖೆಯ ಬೇರೆ ಬೇರ ಹುದ್ದೆಗಳಿಗೆ ಪ್ರತ್ಯೇಕವಾಗಿ ರೂ.೫೦೦/-ರಂತೆ ಪರೀಕ್ಷಾ ಶುಲ್ಕವನ್ನು ಭರಿಸಿದ್ದು, ಇದನ್ನು ಸರ್ಕಾರ ಮರುಪಾವತಿ ಮಾಡುತ್ತದೆಯೇ; ಹಾಗಿದ್ದಲ್ಲಿ, ಯಾವಾಗ ಮರುಪಾವತಿ ಮಾಡಲಾಗುವುದು?

## ಪ್ರಸಕ್ತ ಸಾಲಿನಲ್ಲಿ ಮದ್ಯದಂಗಡಿ ಪರವಾನಿಗೆ ನೀಡುವ ಕುರಿತು

**ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೩೪ (೪೧೮) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೦-೨೧ ನೇ ಸಾಲಿನಲ್ಲಿ ಹೊಸದಾಗಿ ಎಷ್ಟು ಮದ್ಯದಂಗಡಿಗಳಿಗೆ ಪರವಾನಿಗೆಯನ್ನು ನೀಡಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಇದರಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ನೀಡಲಾದ ಮದ್ಯದಂಗಡಿಗಳ ಸಂಖ್ಯೆ ಎಷ್ಟು; ನೀಡಿಲ್ಲವಾದಲ್ಲಿ ಸೂಕ್ತ ಕಾರಣಗಳೇನು; (ವಿವರ ಒದಗಿಸುವುದು)

(ಇ) ನೀಡಿದ್ದಲ್ಲಿ, ಈ ಮದ್ಯದಂಗಡಿಗಳಿಂದ ಬಂದ ಆದಾಯ ಎಷ್ಟು; ಪ್ರಸಕ್ತ ಸಾಲಿನಲ್ಲಿ ಎಂ.ಎಸ್.ಐ.ಎಲ್. ಗೆ ನೀಡಲಾದ ಪರವಾನಿಗೆ ಎಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ಶಿವಾನಂದ ವೃತ್ತದ ಬಳಿ ಸೇತುವೆ ಕಾಮಗಾರಿ ಅಪೂರ್ಣಗೊಂಡಿರುವ ಬಗ್ಗೆ

**ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೩೫ (೪೧೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಿವಾನಂದ ವೃತ್ತದ ಬಳಿ ಉಕ್ಕಿನ ಸೇತುವೆ ಕಾರ್ಯವು ಅಪೂರ್ಣಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಸೇತುವೆಯನ್ನು ತುರ್ತಾಗಿ ಪೂರ್ಣಗೊಳಿಸಲು ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು;

ಇ) ಸದರಿ ಕಾಮಗಾರಿಯ ಅಂದಾಜು ವೆಚ್ಚ ಎಷ್ಟು; ಇಲ್ಲಿಯವರೆವಿಗೂ ಈ ಸೇತುವೆಗೆ ಎಷ್ಟು ಅನುದಾನ ಒದಗಿಸಲಾಗಿದೆ; ಈ ರೀತಿ ನಿಧಾನಗತಿಯ ಕಾಮಗಾರಿಗಳಿಂದ ಸರ್ಕಾರಕ್ಕೆ ಎಷ್ಟು ಆರ್ಥಿಕ ನಷ್ಟ ಉಂಟಾಗಿದೆ; (ವಿವರ ನೀಡುವುದು)

ಈ) ಈ ರೀತಿ ಬೆಂಗಳೂರಿನಲ್ಲಿ ಎಷ್ಟು ಸೇತುವೆ ಕಾಮಗಾರಿಗಳು ಅಪೂರ್ಣಗೊಂಡಿದೆ ? (ವಿವರವಾದ ವರದಿ ನೀಡುವುದು)

## ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ರೈತರ ಸಾಲ ಮನ್ನಾ ಮಾಡುವುದರ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು):-**

೩೩೬ (೧೧೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ರೈತರು ಪಡೆದಿರುವ ಸಾಲವನ್ನು ಮನ್ನಾ

ಮಾಡುವುದನ್ನು ಸರ್ಕಾರವು ಕೈಗೊಂಡ ಕ್ರಮಗಳೇನು;

(ಆ) ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ರೈತರಿಗೆ ಸಾಲ ನೀಡಲಾದ ಬ್ಯಾಂಕುಗಳ ಹೆಸರುಗಳನ್ನು ನೀಡುವುದು;

(ಇ) ರಾಜ್ಯದಲ್ಲಿ ಒಟ್ಟು ಎಷ್ಟು ರೈತರ ಸಾಲ ಮನ್ನಾ ಮಾಡಲಾಗಿದೆ; (ವಿವರ ನೀಡುವುದು) ಈವರೆಗೂ ಮನ್ನಾ ಮಾಡದಿರಲು ಕಾರಣಗಳೇನು; (ವಿವರ ನೀಡುವುದು)

(ಈ) ರಾಷ್ಟ್ರೀಕೃತ ಬ್ಯಾಂಕಿನ ಸಾಲ ಮನ್ನಾ ಮಾಡುವ ಪ್ರಕ್ರಿಯೆಯನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ?

## ಮಹಾರಾಷ್ಟ್ರ ಕೋಯಿನಾ ಅಣೆಕಟ್ಟಿನ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು):–**

೩೩೭ (೪೧೧) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಾರಾಷ್ಟ್ರದ ಕೋಯಿನಾ ಅಣೆಕಟ್ಟಿನಿಂದ ಹಾಗೂ ಇತರೆ ಯಾವ ಮೂಲಗಳಿಂದ ಕೃಷ್ಣ ನದಿಗೆ ನೀರು ಹರಿದು ಬರುತ್ತಿದೆ ಹಾಗೂ ಕಳೆದ ೩ ವರ್ಷಗಳಿಂದ ಬಿಡುಗಡೆಯಾದ ನೀರಿನ ಪ್ರಮಾಣ ಎಷ್ಟು; ಒಳ ಹರಿವಿನ ಪ್ರಮಾಣ ಎಷ್ಟು;

(ಆ) ಬಿಡುಗಡೆಯಾದ ನೀರಿನಿಂದ ಪ್ರವಾಹಕ್ಕೆ ಮುಳುಗಡೆಯಾಗಿ ಹಾನಿಗೊಳಗಾದ ಹಳ್ಳಿಗಳು ಹಾಗೂ ಭೂ ಪ್ರದೇಶಗಳೆಷ್ಟು; (ವಿವರ ನೀಡುವುದು)

(ಇ) ವಿಜಯಪುರ ಜಿಲ್ಲೆಯ ಯಾವ ಯಾವ ಪ್ರದೇಶ ಮುಳಗಡೆಯಾಗಿರುತ್ತದೆ; (ವಿವರ ನೀಡುವುದು)

(ಈ) ಕೇಂದ್ರ ಸರ್ಕಾರದಿಂದ ಬಿಡುಗಡೆಯಾ ಹಣ ಎಷ್ಟು; ಕೇಂದ್ರ ಸರ್ಕಾರದಿಂದ ಪರಿಶೀಲನೆಗೆ ಯಾವುದಾದರೂ ತಂಡ ಬಂದಿದೆಯೇ? (ವಿವರ ನೀಡುವುದು)

## ಸೋಲಾರ್ ಮತ್ತು ವಿಂಡ್ ಘಟಕಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು):–**

೩೩೮ (೪೧೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಉದ್ದ ಅಗಲಕ್ಕೂ ಸ್ಥಾಪನೆಗೊಂಡ ಸೋಲಾರ್ ಮತ್ತು ವಿಂಡ್ ಘಟಕಗಳೆಷ್ಟು; ಅವುಗಳನ್ನು ಎಲ್ಲೆಲ್ಲಿ ಹಾಗೂ ಯಾರು ಯಾರು ಸ್ಥಾಪಿಸಿರುತ್ತಾರೆ ಮತ್ತು ಎಷ್ಟು ಎಷ್ಟು ವಿದ್ಯುತ್ ಉತ್ಪಾದನೆ ಮಾಡಲಾಗುತ್ತಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಉತ್ಪಾದನೆಯಾಗುವ ಸೋಲಾರ ಮತ್ತು ವಿಂಡ್ ವಿದ್ಯುತ್ಚ್ಛಕ್ತಿಯನ್ನು ಯಾವ ಯಾವ ದರದಲ್ಲಿ ಸರ್ಕಾರ ಉದ್ದಿಮೆದಾರರಿಂದ ಖರೀದಿಸುತ್ತದೆ; (ಘಟಕವಾರು ವಿವರ ನೀಡುವುದು)

(ಇ) ವಿದ್ಯುತ್ಚ್ಛಕ್ತಿಯನ್ನು ಯಾವ ದರವನ್ನು ಗ್ರಾಹಕರಿಗೆ ಸರ್ಕಾರ ಒದಗಿಸಲಾಗುತ್ತಿದೆ ? (ವಿವರ ನೀಡುವುದು)

## ಕೆರೆಗಳ ಹೂಳು ತೆಗೆಯುವ ಬಗ್ಗೆ

**ಶ್ರೀ ಆರ್.ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೩೯ (೩೬೮) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಣ್ಣ ನೀರಾವರಿ ಇಲಾಖೆಯ ವತಿಯಿಂದ ಹೊಸದಾಗಿ ನಿರ್ಮಿಸಲ್ಪಡುತ್ತಿರುವ ಹಾಗೂ ಹೂಳು ತೆಗೆಯಲ್ಪಡುತ್ತಿರುವ ಕೆರೆಕಟ್ಟೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ೨೦೧೬-೧೭ ರಿಂದ ೨೦೧೮-೧೯ನೇ ಸಾಲಿನಲ್ಲಿ ಕೆರೆಗಳ ಹೂಳು ತೆಗೆಯಲು ಖರ್ಚಾಗಿರುವ ಅನುದಾನವೆಷ್ಟು? (ಜಿಲ್ಲಾವಾರು ವಿವರ ನೀಡುವುದು)

## ಸರಣಿ ಬ್ಯಾರೇಜ್ ಕಾಮಗಾರಿಯಲ್ಲಿ ವ್ಯಾಪಕ ಭ್ರಷ್ಟಚಾರವಾಗಿರುವ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):-**

೩೪೦ (೪೩೭) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯ ಮಾಂಜ್ರಾ ಸರಣಿ ಬ್ಯಾರೇಜ್‌ಗಳಲ್ಲಿನ ಗೇಟ್ ಸಮಸ್ಯೆಯಾಗಿ ನೀರು ನಿಲ್ಲದಿರುವುದರ ಬಗ್ಗೆ ತನಿಖೆಗೆ ಹೈಕೋರ್ಟ್ ಆದೇಶಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ; ಅದರ ಸಂಪೂರ್ಣ ವಿವರ ನೀಡುವುದು;

(ಆ) ೦೪ ಬ್ಯಾರೇಜ್‌ಗಳ ನಿರ್ಮಾಣಕ್ಕೆ ಖರ್ಚು ಮಾಡಲಾಗಿರುವ ಹಣವೆಷ್ಟು;ಮತ್ತು ಯಾವ ವರ್ಷದಲ್ಲಿ ಬ್ಯಾರೇಜ್‌ಗಳನ್ನು ನಿರ್ಮಾಣ ಮಾಡಲಾಗಿದೆ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಈ ಸರಣಿ ಬ್ಯಾರೇಜ್‌ಗಳ ನಿರ್ಮಾಣದಿಂದ ಒಟ್ಟು ಎಷ್ಟು ಎಕರೆ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸಲಾಗಿದೇ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಹಾಗಿದ್ದಲ್ಲಿ, ನೂರಾರು ಕೋಟಿ ರೂಪಾಯಿ ವೆಚ್ಚ ಮಾಡಿ ನಿರ್ಮಾಣ ಮಾಡಲಾದ ಯೋಜನೆಯಲ್ಲಿ ಅಕ್ರಮ ಮತ್ತು ಲೋಪದೋಷಗಳು ಉಂಟಾಗಲು ಕಾರಣಗಳೇನು; ಇದಕ್ಕೆ ಕಾರಣರಾದವರುಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೇ ? (ಸಂಪೂರ್ಣ ಮಾಹಿತಿ ನೀಡುವುದು)

## ಬೀದರ್ ಜಿಲ್ಲೆಯ ನೀರಾವರಿ ಕಾಮಗಾರಿಗಳ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೩೪೧ (೪೩೮) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಜಲಸಂಪನ್ಮೂಲ ಇಲಾಖೆ ವತಿಯಿಂದ SCP/TSP ಯೋಜನೆಯಡಿ ಬೀದರ್ ಜಿಲ್ಲೆಗೆ ಬಿಡುಗಡೆಯಾದ ಅನುದಾನ ಎಷ್ಟು; (ಲೇಕ್ಕ ಶೀರ್ಷಿಕೆಗಳೊಂದಿಗೆ ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಮಂಜೂರಾದ ಅನುದಾನದಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುದು ಹಾಗೂ ಅವು ಯಾವ ಹಂತದಲ್ಲಿದೆ (ವಿಧಾನ ಸಭಾಕ್ಷೇತ್ರವಾರು ವರ್ಷವಾರು, ಕಾಮಗಾರಿಗಳವಾರು ವಿವರ ನೀಡುವುದು)

(ಇ) ಪೂರ್ಣಗೊಂಡ ಕಾಮಗಾರಿಗಳು ಮತ್ತು ಬಳಕೆಯಾದ ಅನುದಾನವೆಷ್ಟು; (ಮಾಹಿತಿ ಒದಗಿಸುವುದು)

(ಈ) ಈ ಯೋಜನೆಯಡಿ ಅಪೂರ್ಣಗೊಂಡ ಕಾಮಗಾರಿಗಳು ಯಾವುವು? (ವಿಧಾನಸಭಾ ಕ್ಷೇತ್ರವಾರು ಸ್ಪಷ್ಟ ಮಾಹಿತಿ ನೀಡುವುದು)

## ವಿಶೇಷ ಪ್ಯಾಕೇಜ್‌ನಲ್ಲಿ ಮಂಜೂರಾದ ಅನುದಾನದ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):-**

೩೪೨ (೪೩೯) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಗೆ ೨೦೧೯-೨೦ ಮತ್ತು ೨೦೨೦-೨೧ನೇ ಸಾಲಿನಲ್ಲಿ ವಿಶೇಷ ಪ್ಯಾಕೇಜ್‌ನಲ್ಲಿ ಮಂಜೂರಾದ ಅನುದಾನವೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಅನುದಾನದಲ್ಲಿ ಇಲಾಖೆಯಡಿ ಕೈಗೊಂಡ ಕಾಮಗಾರಿಗಳು ಯಾವುವು ಹಾಗೂ ಸದರಿ ಕಾಮಗಾರಿಗಳು ಯಾವ ಹಂತದಲ್ಲಿವೆ;

(ಇ) ವಿಶೇಷ ಪ್ಯಾಕೇಜ್ ಅಡಿಯಲ್ಲಿ ಕೈಗೊಂಡ ಕಾಮಗಾರಿಗಳಿಗೆ ಮಂಜೂರಾದ ಅನುದಾನದಲ್ಲಿ ಬಿಡುಗಡೆಯಾದ ಮೊತ್ತವೆಷ್ಟು;

(ಈ) ಬಾಕಿಯಿರುವ ಅನುದಾನವನ್ನು ಯಾವ ಕಾಲಮಿತಿಯೊಳಗೆ ಬಿಡುಗಡೆಗೊಳಿಸಿ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)

## ಅಗ್ನಿಶಾಮಕ ಠಾಣೆಗಳನ್ನು ಸ್ಥಾಪಿಸುವ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):-**

೩೪೩ (೪೪೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಯಲ್ಲಿ ರಚನೆಯಾದ ಹೊಸ ತಾಲ್ಲೂಕುಗಳಾದ ಕಮಲನಗರ, ಚಿಟ್ಟಗುಪ್ಪಾ, ಹುಲಸೂರುಗಳಲ್ಲಿ ಅಗ್ನಿಶಾಮಕ ಠಾಣೆಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಎಷ್ಟು ಕಾಲಮಿತಿಯೊಳಗೆ ಹೊಸ ಅಗ್ನಿಶಾಮಕ ಠಾಣೆಗಳನ್ನು ಮಂಜೂರು ಮಾಡಲಾಗುವುದು ? (ಸ್ಪಷ್ಟ ಮಾಹಿತಿ ಒದಗಿಸುವುದು)

## ಬಿ.ಬಿ.ಎಂ.ಪಿ ದಾನಪತ್ರ ಮತ್ತು ವಿಭಾಗ ಪತ್ರಗಳ ಆಸ್ತಿ ವಿಭಜನೆ ಕಾನೂನು ಬಾಹಿರ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು):–**

೩೪೪ (೩೬೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಿ.ಬಿ.ಎಂ.ಪಿ ದಾನಪತ್ರ ಕ್ರಯಪತ್ರ ಮತ್ತು ವಿಭಾಗ ಪತ್ರಗಳ ಅನ್ವಯ ಆಸ್ತಿ ವಿಭಜನೆ ಕಾನೂನು ಬಾಹಿರ ಎಂದು ದಿ: ೨೦–೧೦–೨೦೧೪ರಲ್ಲಿ ಸುತ್ತೋಲೆ ಹೊರಡಿಸಿರುವುದು ನಿಜವೇ; (ಈ ಸುತ್ತೋಲೆಯ ಕುರಿತು ಸರ್ಕಾರ ಸ್ಪಷ್ಟೀಕರಣ ನೀಡುತ್ತಿದೆಯೇ)

(ಆ) ಕೇವಲ ಆಸ್ತಿ ತೆರಿಗೆ, ಶುಲ್ಕ ಮಾತ್ರ ವಸೂಲಿ ಮಾಡುವ ಮಹಾನಗರ ಪಾಲಿಕೆ ಆಸ್ತಿ ವಿಭಜನೆಯ ಕುರಿತು ಯಾವ ಆದೇಶ, ನಿಯಮಾವಳಿ ಅಳವಡಿಕೆ ಅನ್ವಯ ಈ ಸುತ್ತೋಲೆ ಹೊರಡಿಸಲಾಗಿದೆ;

(ಇ) ಬಿ.ಬಿ.ಎಂ.ಪಿ ಸುತ್ತೋಲೆ ಪ್ರಕಾರ ಖಾತಾ ನೋಂದಾವಣೆ ವಿಭಜನೆಗಳು ಯಾವ ಆಸ್ತಿಗೆ ಅನ್ವಯಿಸುತ್ತವೆ; ಪಾಲಿಕೆಯ ಸುತ್ತೋಲೆಯಿಂದ ಪಿತ್ರಾರ್ಜಿತ ಆಸ್ತಿ ಹಂಚಿಕೆಯಲ್ಲಿ ಜನಸಾಮಾನ್ಯರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಎ ಖಾತಾ ಮತ್ತು ಬಿ ಖಾತಾ ನಡುವಿನ ವ್ಯತ್ಯಾಸಗಳೇನು ; ಬಿ ಖಾತಾ ಹೆಸರಿನಲ್ಲಿ ದಂದೆ ನಡೆಯುತ್ತಿರುವುದು ಮತ್ತು ಜನರನ್ನು ಬಿ.ಬಿ.ಎಂ.ಪಿ ಖಾತೆಯ ಹೆಸರಲ್ಲಿ ಶೋಷಣೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು):–**

೩೪೫ (೩೬೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಸ್ತುತ ಪೊಲೀಸ್ ಇಲಾಖೆಯಲ್ಲಿ (ಪಿಸಿಯಿಂದ ಪಿಎಸ್ಐ ವರೆಗೆ) ಪೊಲೀಸ್ ಪೇದೆಯಿಂದ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಹುದ್ದೆವರೆಗಿನ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು;

(ಆ) ಪೊಲೀಸ್ ಇಲಾಖೆಯಲ್ಲಿ ಪ್ರಸ್ತುತ ೭೦:೩೦ ಅನುಪಾತದಲ್ಲಿ ಪಿಎಸ್ಐ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲಾಗುತ್ತಿದೆಯೇ; ಹಾಗಿದ್ದಲ್ಲಿ, ಪಿಎಸ್ಐ ದರ್ಜೆಯ ಹುದ್ದೆ ೭೦:೩೦ ರಿಂದ ೫೦:೫೦ ಅನುಪಾತಕ್ಕೆ ಪರಿಷ್ಕರಿಸಿ ಹುದ್ದೆಗಳನ್ನು ಭರ್ತಿ ಮಾಡಲು ಇರುವ ತೊಂದರೆಗಳೇನು;

(ಇ) ಬೆಂಗಳೂರು ನಗರದ ಎ.ಎಸ್.ಐ ದರ್ಜೆಯ ಅಧಿಕಾರಿಗಳ ಗ್ರೇಡೇಶನ್ ಪಟ್ಟಿಯನ್ನು ಸರ್ಕಾರ ತಯಾರಿಸಿದೆಯೇ;

(ಈ) ಬೆಂಗಳೂರು ನಗರದಲ್ಲಿ ಪ್ರಸ್ತುತ ರಾಜ್ಯದ ಉಳಿದ ಜಿಲ್ಲೆಗಳ ಮೂಲದ ಎಷ್ಟು ಪೊಲೀಸ್ ಅಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ ? (ಸಂಪೂರ್ಣ ಮಾಹಿತಿ ನೀಡುವುದು)

## ಶಾಸಕರುಗಳ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ಅನುದಾನ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು):–**

೩೪೬ (೩೬೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಾಸಕರುಗಳಿಗೆ ವಿಧಾನ ಸಭಾ ಮತ್ತು ವಿಧಾನ ಪರಿಷತ್ ಸದಸ್ಯರುಗಳಿಗೆ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಲ್ಲಿ ಪ್ರತಿ ವರ್ಷ ನೀಡುತ್ತಿರುವ ಅನುದಾನವೆಷ್ಟು;

(ಆ) ಕಳೆದ ಮೂರು ವರ್ಷಗಳಿಂದ ಮಾನ್ಯ ಸದಸ್ಯರುಗಳಿಗೆ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಗೆ ಎಷ್ಟು ಹಣ ಬಿಡುಗಡೆಯಾಗಿದೆ; ಸರ್ಕಾರ ನಿಗದಿಪಡಿಸಿರುವ ಹಣವೆಷ್ಟು;

(ಇ) ೨೦೧೯–೨೦ ಹಾಗೂ ೨೦೨೦–೨೧ನೇ ಸಾಲಿನ ಅಂತ್ಯದ ವೇಳೆ ಸಮೀಪಿಸಿದ್ದರೂ ನಿಗದಿಯಾದ ಅನುದಾನ ಬಿಡುಗಡೆಯಾಗದೇ ಇರುವುದಕ್ಕೆ ಕಾರಣವೇನು; ಈ ಕುರಿತು ಸರ್ಕಾರ ತೆಗೆದುಕೊಳ್ಳಲಿರುವ ಕ್ರಮಗಳೇನು;

(ಈ) ವಿಧಾನ ಪರಿಷತ್ ಸದಸ್ಯರುಗಳ ಹೆಚ್ಚಿನ ತಾಲ್ಲೂಕು ಮತ್ತು ಜಿಲ್ಲೆಗಳನ್ನು ಪ್ರತಿನಿಧಿಸುತ್ತಿರುವುದರಿಂದ ಇವರಿಗೆ ಅನುದಾನ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

## ವಿದ್ಯುತ್ ಬೆಲೆ ಏರಿಕೆ ಮಾಡಿರುವ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು):–**

೩೪೭ (೩೬೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಸಕ್ತ ವರ್ಷ ರಾಜ್ಯದ ಜನತೆ ಕೋವಿಡ್ ಸಂಕಷ್ಟದಿಂದ ಬಳಲುತ್ತಿರುವಾಗಲೇ ವಿದ್ಯುತ್ ಬೆಲೆ ಏರಿಕೆ ಮಾಡಿರುವುದರಿಂದ ಜನರ ಆಕ್ರೋಷಕ್ಕೆ ಕಾರಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ವಿದ್ಯುತ್ ದರ ಇಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಆ) ಬೆಸ್ಕಾಂ, ಎಸ್ಕಾಂ, ವೆಸ್ಕಾಂ, ಜೆಸ್ಕಾಂ, ಹೆಸ್ಕಾಂ, ಮುಂತಾದ ವಿದ್ಯುತ್ ಪೂರೈಕೆಯ ಕಂಪನಿಗಳು ಏಕರೂಪ ದರ ಹೆಚ್ಚಳ ಮಾಡಿವೆಯೇ; (ವಿವರ ನೀಡುವುದು)

(ಇ) ಇಂಧನ ಇಲಾಖೆಯಿಂದ ರಾಜ್ಯದ ಎಷ್ಟು ಪ್ರದೇಶಗಳಲ್ಲಿ ಈಗಾಗಲೇ ಸೋಲಾರ್ ಪ್ಲಾಂಟ್‌ಗಳು ಕಾರ್ಯನಿರ್ವಹಿಸುತ್ತಿವೆ; ಇವುಗಳಲ್ಲಿ ಖಾಸಗಿ ಸಹಭಾಗಿತ್ವದ ಸೋಲಾರ್ ಪ್ಲಾಂಟ್‌ಗಳು ಎಷ್ಟಿವೆ ಮತ್ತು ಎಲ್ಲಿವೆ; (ವಿವರ ನೀಡುವುದು)

(ಈ) ಮುಂದಿನ ದಿನಗಳಲ್ಲಿ ಹೊಸ ಸೋಲಾರ್ ಪ್ಲಾಂಟ್ ನಿರ್ಮಾಣದ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; (ಸಂಪೂರ್ಣ ವಿವರ ನೀಡುವುದು)

(ಉ) ಇಂಧನ ಇಲಾಖೆ ಪರ್ಯಾಯ ಶಕ್ತಿ ಮೂಲಗಳ ಸಂಶೋಧನೆ ಮತ್ತು ಅಭಿವೃದ್ಧಿಗೆ ಪ್ರತ್ಯೇಕ ಅನುದಾನ ಮೀಸಲಿಟ್ಟಿದೆಯೇ; ಮೀಸಲಿಟ್ಟಿದ್ದಲ್ಲಿ, ಎಷ್ಟು ಹಣ ವ್ಯಯವಾಗಿದೆ ?

## ಕೋವಿಡ್-೧೯ ನಿಂದ ರಾಜ್ಯದ ಪ್ರವಾಸೋದ್ಯಮ ಕ್ಷೀಣಿಸುತ್ತಿರುವ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು):-**

೩೪೪ (೩೬೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ದೇಶದಲ್ಲಿ ಅತ್ಯುತ್ತಮವಾದ ಪ್ರವಾಸಿ ತಾಣಗಳನ್ನು ಹೊಂದಿರುವ ಕರ್ನಾಟಕ ರಾಜ್ಯ ಕೋವಿಡ್ ಸಂಕಷ್ಟಕ್ಕೆ ತುರ್ತಾಗಿ ಪ್ರವಾಸೋದ್ಯಮ ಕ್ಷೀಣಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ರಾಜ್ಯದ ಧಾರ್ಮಿಕ ಪ್ರವಾಸೋದ್ಯಮ ಚಾರಿತ್ರಿಕ ಮತ್ತು ಅರಣ್ಯ ಪ್ರವಾಸೋದ್ಯಮ ಕರಾವಳಿ ಪ್ರವಾಸಿ ತಾಣಗಳ ಪುನರ್ ಅಭಿವೃದ್ಧಿಗೆ ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ;

(ಇ) ಪ್ರವಾಸೋದ್ಯಮವನ್ನು ಅವಲಂಬಿಸಿರುವ ಸಾವಿರಾರು ಜನರು ಕೋವಿಡ್ ಸಂಕಷ್ಟದಿಂದ ನರಳುತ್ತಿದ್ದು, ಪ್ರವಾಸೋದ್ಯಮ ಇಲಾಖೆಯಿಂದ ಅವರನ್ನು ಉತ್ತೇಜಿಸುವ ನೂತನ ಕಾರ್ಯಕ್ರಮಗಳೇನಾದರೂ ಇವೆಯೇ; (ವಿವರ ನೀಡುವುದು)

(ಈ) ರಾಜ್ಯದ ಬಹುತೇಕ ಜಿಲ್ಲೆಗಳಲ್ಲಿ ಬೆಳಕಿಗೆ ಬಾರದ ಅದ್ಭುತ ಪ್ರವಾಸಿ ತಾಣಗಳಿದ್ದು ಇವುಗಳನ್ನು ಗುರುತಿಸಿ ಅಭಿವೃದ್ಧಿಪಡಿಸಲು ಸರ್ಕಾರ ಮುಂದೆ ಇರುವ ಪ್ರಸ್ತಾವನೆ ಯಾವುದು ?

## ವಿದ್ಯುಚ್ಛಕ್ತಿ ಉತ್ಪಾದನೆ ಮತ್ತು ಖರೀದಿ ಕುರಿತು

**ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು) :-**

೩೪೯ (೪೪೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ೩ ವರ್ಷಗಳಿಂದ ರಾಜ್ಯ ಸರ್ಕಾರದ ಅಧೀನದಲ್ಲಿರುವ ಮತ್ತು ಖಾಸಗಿ ವಿದ್ಯುಚ್ಛಕ್ತಿ ಉತ್ಪಾದನೆ ಸಂಸ್ಥೆಗಳಿಂದ ಒಟ್ಟು ಎಷ್ಟು ಸಾಮರ್ಥ್ಯದ ವಿದ್ಯುತ್ ಉತ್ಪಾದನೆ ಮಾಡಲಾಗುತ್ತಿದೆ; (ವರ್ಷವಾರು. ಸಂಸ್ಥೆವಾರು ವಿವರ ನೀಡುವುದು)

(ಆ) ಸೌರ ವಿದ್ಯುಚ್ಛಕ್ತಿ ಮತ್ತು ಇತರೆ ನವೀಕರಿಸಬಹುದಾದ ಮೂಲಗಳಿಂದ/ಸಂಸ್ಥೆಗಳಿಂದ ಒಟ್ಟು ಎಷ್ಟು ಸಾಮರ್ಥ್ಯದ ವಿದ್ಯುತ್ ಉತ್ಪಾದನೆ ಮಾಡಲಾಗುತ್ತಿದೆ; ಖಾಸಗಿ ಸಂಸ್ಥೆಗಳಿಗೆ ಪ್ರತಿ ಯುನಿಟ್‌ಗೆ ಪಾವತಿಸುವ ಖರೀದಿ ವೆಚ್ಚದ ಕುರಿತು ವಿವರ ನೀಡುವುದು;

(ಇ) ಅದಾನಿ ಸಂಸ್ಥೆಗೆ ಕಾರ್ಯಗಳ ಹಸ್ತಾಂತರವಾಗುವ ಮುನ್ನ ಉಡುಪಿ ಪವರ್ ಕಾರ್ಪೋರೇಷನ್ ಲಿಮಿಟೆಡ್ (UPCL) ಸಂಸ್ಥೆಯಲ್ಲಿ ಎಷ್ಟು ಸಾಮರ್ಥ್ಯದ ವಿದ್ಯುತ್ ಉತ್ಪಾದನೆ ಮಾಡಲಾಗುತ್ತಿತ್ತು; ಹಸ್ತಾಂತರವಾದ ನಂತರ ಎಷ್ಟು ಸಾಮರ್ಥ್ಯದ ವಿದ್ಯುತ್ ಉತ್ಪಾದನೆ ಮಾಡಲಾಗುತ್ತಿದೆ; (ವಿವರ ನೀಡುವುದು ಮತ್ತು ಹಸ್ತಾಂತರ ಮಾಡುವ ಒಪ್ಪಂದದ ಪ್ರತಿಯನ್ನು ಒದಗಿಸುವುದು)

(ಈ) ಅದಾನಿ ಸಂಸ್ಥೆಯಿಂದ ಉತ್ಪಾದಿತ ವಿದ್ಯುಚ್ಛಕ್ತಿಯನ್ನು ಸರ್ಕಾರ ಖರೀದಿ ಮಾಡುತ್ತಿದೆಯೇ; ಇದ್ದಲ್ಲಿ, ಪ್ರತಿ ಯುನಿಟ್‌ಗೆ ಪಾವತಿಸುವ ಖರೀದಿ ಮೊತ್ತ ಎಷ್ಟು; (ವಿವರ ನೀಡುವುದು)

(ಉ) ಅದಾನಿ ಸಂಸ್ಥೆಯ ಅಧೀನದಲ್ಲಿರುವ ಈ ಸಂಸ್ಥೆಯಲ್ಲಿ ವಿದ್ಯುಚ್ಛಕ್ತಿ ಉತ್ಪಾದನೆಯ ಸಾಮರ್ಥ್ಯ ಹೆಚ್ಚಿಸಲು ಯಾವುದಾದರೂ ಪ್ರಯತ್ನಗಳನ್ನು ಕೈಗೊಳ್ಳಗಿದೆಯೇ; ಕೈಗೊಂಡಿದ್ದಲ್ಲಿ, ವಿವರ ನೀಡುವುದು ಮತ್ತು ಈ ವಿಸ್ತರಣೆ ಸಂಬಂಧ ಯಾವುದಾದರೂ ಕೋರ್ಟ್‌ನಲ್ಲಿ ವ್ಯಾಜ್ಯ/ವಿವಾದಗಳು/ದಾವೆಗಳು ಹೂಡಲ್ಪಟ್ಟಿದೆಯೇ ? (ಸಂಪೂರ್ಣ ವಿವರ ನೀಡುವುದು)

## ೨೦೧೫ನೇ ಸಾಲಿನ ಗೆಜೆಟೆಡ್ ಪ್ರೊಬೆಷನರಿ ಪರೀಕ್ಷೆಯ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು):-**

೩೫೦ (೪೪೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೫ನೇ ಸಾಲಿನ ಗೆಜೆಟೆಡ್ ಪ್ರೊಬೆಷನರಿ ಪರೀಕ್ಷೆಯ ಉತ್ತರ ಪತ್ರಿಕೆಗಳಲ್ಲಿ ಅಭ್ಯರ್ಥಿಗಳ ಗುರುತು ಸಿಗುವಂತೆ “ಓಂ” “ಶ್ರೀ” ಇತ್ಯಾದಿ ಚಿಹ್ನೆಗಳನ್ನು ನಮೂದಿಸಿದ ಅಭ್ಯರ್ಥಿಗಳ ಸಂಖ್ಯೆ ಎಷ್ಟು;

(ಆ) ಕರ್ನಾಟಕ ಲೋಕಸೇವಾ ಆಯೋಗದ ಸೂಚನೆಗಳ ಪ್ರಕಾರ ಈ ರೀತಿ ಚಿಹ್ನೆಗಳನ್ನು ನಮೂದಿಸಿದ ಅಭ್ಯರ್ಥಿಗಳು ಸಂದರ್ಶನಕ್ಕೆ ಹಾಜರಾಗಲು ಅನರ್ಹರಲ್ಲವೇ; ಈ ರೀತಿ ಅನರ್ಹರಾದವರ ಸಂಖ್ಯೆ ಎಷ್ಟು; ಇವರಲ್ಲಿ ಆಯ್ಕೆ ಆದವರ ಸಂಖ್ಯೆ ಎಷ್ಟು: (ಅಂತಹವರ ಹೆಸರು, ಆಯ್ಕೆಯಾದ ಹುದ್ದೆ, ವರ್ಗ ತಿಳಿಸುವುದು)

(ಇ) ಕೆ.ಎ.ಟಿ ನ್ಯಾಯಾಲಯದ ತೀರ್ಪಿನ ಮೇಲೆ ಇವರಿಗೆ ಸಂದರ್ಶನಕ್ಕೆ ಅವಕಾಶ ಮಾಡಿ ಕೊಟ್ಟಿದಲ್ಲಿ, ಕರ್ನಾಟಕ ಲೋಕಸೇವಾ ಆಯೋಗದ ನಿಯಮ/ಸೂಚನೆಗಳನ್ನು ಉಲ್ಲಂಘಿಸಿದ ಕಾರಣ

ಕೆ.ಎ.ಟಿ ತೀರ್ಪಿನ ಮೇಲೆ ರಾಜ್ಯದ ಉಚ್ಚ ನ್ಯಾಯಾಲಯದಲ್ಲಿ ಕರ್ನಾಟಕ ಲೋಕಸೇವಾ ಆಯೋಗವು ಮೇಲ್ಮನವಿ ಸಲ್ಲಿಸಿಲ್ಲದಿರುವುದಕ್ಕೆ ಕಾರಣಗಳೇನು; (ವಿವರ ನೀಡುವುದು)

(ಈ) ಇತರೆ ಪ್ರಕರಣದಲ್ಲಿ ಅಂದರೆ, ೨೦೧೫ನೇ ಸಾಲಿನ ಅಭ್ಯರ್ಥಿಗಳ ಮುಖ್ಯ ಪರೀಕ್ಷೆಯ ಉತ್ತರ ಪತ್ರಿಕೆಗಳನ್ನು ನೀಡಲು, ರಾಜ್ಯ ಮಾಹಿತಿ ಆಯೋಗ, ರಾಜ್ಯ ಉಚ್ಚ ನ್ಯಾಯಾಲಯದ ತೀರ್ಪು ನೀಡಿದ್ದರೂ ವಿಭಾಗೀಯ ಪೀಠದಲ್ಲಿ ಮೇಲ್ಮನವಿ ಸಲ್ಲಿಸಿಲ್ಲವೇಕೆ; ಈ ರೀತಿಯ ತಾರತಮ್ಯ ಮಾಡುತ್ತಿರುವುದು ಸರಿಯೇ?

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿಯಲ್ಲಿರುವ ಯೋಜನೆಗಳ ಕುರಿತು

**ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು):-**

೩೫೧ (೪೪೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೫ ವರ್ಷಗಳಿಂದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿಯಲ್ಲಿ ಸರ್ಕಾರದಿಂದ ಜಾರಿಯಲ್ಲಿರುವ ಸಾಮಾಜಿಕ ಕಲ್ಯಾಣ ಯೋಜನೆಗಳಿಗೆ ಮೀಸಲಿಟ್ಟ ಅನುದಾನವೆಷ್ಟು; (ವರ್ಷವಾರು ವಿವರ ನೀಡುವುದು)

(ಆ) ಕೇಂದ್ರ ಸರ್ಕಾರದ ಹಿಂದುಳಿದ ಮೀಸಲಾತಿ ಪಟ್ಟಿಯಲ್ಲಿರದ ಜಾತಿಗಳಿಗೆ ದೇವರಾಜು ಅರಸು ಅಭಿವೃದ್ಧಿ ನಿಗಮದಡಿಯಲ್ಲಿ ಕಾರ್ಯಕ್ರಮಗಳನ್ನು ರೂಪಿಸಲಾಗಿದೆಯೇ; (ವಿವರ ನೀಡುವುದು)

(ಇ) ರೂಪಿಸಿದ್ದಲ್ಲಿ, ಕಳೆದ ೫ ವರ್ಷಗಳಲ್ಲಿ ಸದರಿ ಜಾತಿಗಳ ಫಲಾನುಭವಿಗಳಿಗೆ ನೀಡಿದ ಸೌಲಭ್ಯಗಳೇನು? (ವಿವರ ನೀಡುವುದು)

## ೨೦೧೫ನೇ ಸಾಲಿನ ಗೆಜೆಟೆಡ್ ಪ್ರೋಬೆಷನರಿ ಪರೀಕ್ಷೆಯಲ್ಲಿ ಮೀಸಲಾತಿ ಕ್ಲೇಮು ಕುರಿತು

**ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು):-**

೩೫೨ (೪೪೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೫ನೇ ಸಾಲಿನ ಗೆಜೆಟೆಡ್ ಪ್ರೋಬೆಷನರಿ ಪರೀಕ್ಷೆಯಲ್ಲಿ ಮೀಸಲಾತಿ ಕ್ಲೇಮು ಮಾಡಿ ಸಾಮಾನ್ಯ ವರ್ಗದಲ್ಲಿ ಆಯ್ಕೆ ಮಾಡಿ, ನೇಮಕಾತಿ ಮಾಡಿದ ಸಹಾಯಕ ಆಯುಕ್ತರ (ಕೆ.ಎ.ಎಸ್. ಕಿರಿಯ ಶ್ರೇಣಿ) ಅಭ್ಯರ್ಥಿಗಳ ಸಂಖ್ಯೆ ಎಷ್ಟು; (ಹೆಸರು ಮತ್ತು ಅವರು ಕ್ಲೇಮು ಮಾಡಿದ ಮೀಸಲಾತಿ ವರ್ಗದ ವಿವರ ನೀಡವುದು)

(ಆ) ಈ ರೀತಿ ಮೀಸಲಾತಿ ಕ್ಲೇಮು ಮಾಡಿ, ಸಾಮಾನ್ಯ ವರ್ಗದಲ್ಲಿ ನೇಮಕಾತಿ ಮಾಡಿದ ಅಭ್ಯರ್ಥಿಗಳ ಜಾತಿ, ಆದಾಯ ಸಿಂಧುತ್ವ ಪ್ರಮಾಣ ಪತ್ರಗಳನ್ನು ಪಡೆದ ನಂತರವೇ ಇವರಿಗೆ ನೇಮಕಾತಿ ಮಾಡಲಾಗಿದೆಯೇ;(ವಿವರ ನೀಡುವುದು)

(ಇ) ಇಲ್ಲದಿದ್ದಲ್ಲಿ, ಪೂರ್ವ ಭಾವಿ ಪರೀಕ್ಷೆಯಲ್ಲಿ ಮುಖ್ಯ ಪರೀಕ್ಷೆಗೆ ಮೀಸಲಾತಿ ಅಡಿಯಲ್ಲಿ ಮಾತ್ರ ಅರ್ಹರಿದ್ದು, ಸಾಮಾನ್ಯ ವರ್ಗದಲ್ಲಿ ಕಡಿಮೆ ಅಂಕಗಳಿಸಿದ ಕಾರಣ ಅನರ್ಹರಿದ್ದು ಇಂತಹ ಅಭ್ಯರ್ಥಿಗಳ ಜಾತಿ ಆದಾಯ ಸಿಂಧುತ್ವ ಪ್ರಮಾಣ ಪತ್ರಗಳನ್ನು ಪಡೆಯದೇ ನೇಮಕಾತಿ ಆದೇಶ ನೀಡುವುದು ನಿಯಮ/ಕಾಯ್ದೆಗಳನ್ನು ಉಲ್ಲಂಘಿಸಿದಂತೆ ಆಗಿಲ್ಲವೇ? (ವಿವರ ನೀಡುವುದು)

## ಬಿಬಿಎಂಪಿ ವ್ಯಾಪ್ತಿಯಲ್ಲಿ ಆಸ್ತಿ ತೆರಿಗೆ ವಸೂಲಾತಿ ಕುರಿತು

**ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು):-**

೩೫೩ (೪೪೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಿಬಿಎಂಪಿ ವ್ಯಾಪ್ತಿಯಲ್ಲಿ ಕಳೆದ ೫ ವರ್ಷಗಳಿಂದ ಆಸ್ತಿ ತೆರಿಗೆ ವಸೂಲಾತಿ ಕಡಿಮೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು; (ವಿವರ ನೀಡುವುದು)

(ಆ) ಬಿಬಿಎಂಪಿ ವ್ಯಾಪ್ತಿಯಲ್ಲಿ ಆಸ್ತಿ ತೆರಿಗೆ ಬಾಕಿ ಉಳಿಸಿಕೊಂಡಿರುವ ಸುಸ್ತಿದಾರರ ಸಂಖ್ಯೆ ಮತ್ತು ಬಾಕಿ ಇರುವ ತೆರಿಗೆಯ ಒಟ್ಟು ಮೊತ್ತ ಎಷ್ಟು; ಅತಿ ಹೆಚ್ಚು ಮೊತ್ತದ ಸುಸ್ತಿದಾರರು ಮತ್ತು ಅವರ ವರ್ಷವಾರು ಬಾಕಿ ಆಸ್ತಿ ತೆರಿಗೆ ವಿವರಗಳನ್ನು ನೀಡುವುದು;

(ಇ) ಆಸ್ತಿ ತೆರಿಗೆ ಬಾಕಿ ಉಳಿಸಿಕೊಂಡಿರುವ ಈ ಸುಸ್ತಿದಾರರ ವಿರುದ್ಧ ಸರ್ಕಾರದ ಕ್ರಮವೇನು ; (ವಿವರ ನೀಡುವುದು)

(ಈ) ಆಸ್ತಿ ತೆರಿಗೆ ಬಾಕಿ ಉಳಿಸಿಕೊಂಡಿರುವ ಈ ಸುಸ್ತಿದಾರರ ಜೊತೆಯಲ್ಲಿ ಅಧಿಕಾರಿಗಳ ಒಂದು ವರ್ಗ ಶಾಮೀಲಾಗಿ ತೆರಿಗೆ ವಸೂಲಾತಿ ಕುಂಠಿತಗೊಂಡಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು; (ವಿವರ ನೀಡುವುದು)

(ಉ) ಆಸ್ತಿ ತೆರಿಗೆ ಬಾಕಿ ಉಳಿಸಿಕೊಂಡಿರುವ ಈ ಸುಸ್ತಿದಾರರಿಂದ ತೆರಿಗೆ ವಸೂಲಾತಿ ಮಾಡದ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲು ಸರ್ಕಾರ ಚಿಂತಿಸಿದೆಯೇ; (ವಿವರ ನೀಡುವುದು)

(ಊ) ಬಿಬಿಎಂಪಿ ವ್ಯಾಪ್ತಿಯಲ್ಲಿ ಆಸ್ತಿ ತೆರಿಗೆ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ? (ವಿವರ ನೀಡುವುದು)

## ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಕುರಿತು

**ಶ್ರೀ ಶಶೀಲ್ ಜಿ.ನಮೋಶಿ (ಶಿಕ್ಷಕರ ಕ್ಷೇತ್ರ):–**

೩೫೪ (೫೦೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ಪೂರ್ಣ ಪ್ರಮಾಣದ ಆಡಳಿತ ಮಂಡಳಿ ರಚಿಸಲಾಗಿದೆಯೇ; ರಚಿಸದಿದ್ದಲ್ಲಿ ಯಾವಾಗ ರಚಿಸಲಾಗುವುದು;

(ಆ) ಪೂರ್ಣ ಪ್ರಮಾಣದ ಆಡಳಿತ ಮಂಡಳಿ ರಚಿಸದಿರುವುದರಿಂದ ಮಂಡಳಿಯ ಆಡಳಿತಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಗೆ ನೀಡಿರುವ ಅನುದಾನ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೩೫೫ (೪೮೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪ನೇ ಸಾಲಿನಿಂದ ಇಲ್ಲಿಯವರೆಗೆ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಗಳಿಗೆ ನೀಡಿರುವ ಅನುದಾನ ಎಷ್ಟು; (ವರ್ಷವಾರು ಮಾಹಿತಿ ನೀಡುವುದು)

(ಆ) ೨೦೧೪ನೇ ಸಾಲಿನಿಂದ ಇಲ್ಲಿಯವರೆಗೆ ಅನುದಾನ ಬಿಡುಗಡೆಯಾಗಿ ಖರ್ಚಾದ ಅನುದಾನ ಎಷ್ಟು; (ವರ್ಷವಾರು ಮಾಹಿತಿ ನೀಡುವುದು)

(ಇ) ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯಲ್ಲಿ ನಿಗದಿತ ಅನುದಾನ ಖರ್ಚಾಗದೇ ಇರಲು ಕಾರಣಗಳೇನು; ಆಯಾ ಅನುದಾನ ಅದೇ ವರ್ಷ ಖರ್ಚಾಗಲು ಸರ್ಕಾರ ಕೈಗೊಂಡಿರುವ ಕ್ರಮವೇನು ?

## ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ಬಂದಿರುವ ಅನುದಾನ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೩೫೬ (೪೮೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ಬಂದಿರುವ ಅನುದಾನ ಎಷ್ಟು ;

(ಆ) ಈ ಅನುದಾನದಲ್ಲಿ ಯಾವ ಯಾವ ಯೋಜನೆಗಳಿಗೆ ಎಷ್ಟು ಅನುದಾನವನ್ನು ನೀಡಲಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ರೈತರ ಕೃಷಿ ಚಟುವಟಿಕೆಗೆ ಸಮರ್ಪಕ ವಿದ್ಯುತ್ ಪೂರೈಸುವ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೩೫೭ (೪೦೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ರೈತರ ಕೃಷಿ ಪಂಪ್ ಸೆಟ್‌ಗಳಿಗೆ ವಿದ್ಯುತ್ ಸಂಪರ್ಕವನ್ನು ಕಲ್ಪಿಸಲು ಸರ್ಕಾರ ಸಮಯವನ್ನು ನಿಗದಿ ಮಾಡಿದೆಯೇ; ೩ ಫೇಸ್ ವಿದ್ಯುತ್ ನೀಡಲಾಗುತ್ತಿದೆಯೇ ;

(ಆ) ರೈತರಿಗೆ ಟ್ರಾನ್ಸ್‌ಫಾರ್ಮರ್ (TC) ಗಳನ್ನು ಸಮರ್ಪಕವಾಗಿ ಹಾಗೂ ಶೀಘ್ರವಾಗಿ ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಎನ್.ಪಿ.ಎಸ್. ಪಿಂಚಣಿಯ ಸಾಧಕ–ಬಾಧಕಗಳ ಪರಿಶೀಲನೆಗೆ ರಚಿಸಿರುವ ಸಮಿತಿಯ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೩೫೮ (೪೦೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎನ್.ಪಿ.ಎಸ್. ಪಿಂಚಣಿ ವ್ಯವಸ್ಥೆಗೆ ಒಳ ಪಟ್ಟಿರುವ ಸರ್ಕಾರಿ ನೌಕರರ ಸಂಖ್ಯೆ ಎಷ್ಟು ;

(ಆ) ಎನ್.ಪಿ.ಎಸ್.ನ ಸಾಧಕ–ಬಾಧಕಗಳ ಪರಿಶೀಲನೆಗೆ ಸಮಿತಿಯನ್ನು ಯಾವಾಗ ರಚಿಸಲಾಯಿತು ;

(ಇ) ಈ ಸಮಿತಿಗೆ ಸರ್ಕಾರ ನಿಗದಿ ಪಡಿಸಿದ ಕಾಲಮಿತಿ ಎಷ್ಟು; ಹಾಗೂ ಈ ಸಮಿತಿಯ ಎಷ್ಟು ಸಭೆಗಳನ್ನು ನಡೆಸಿದೆ ;

(ಈ) ಈ ಸಮಿತಿ ಸರ್ಕಾರಕ್ಕೆ ವರದಿ ನೀಡಿದೆಯೇ; ಶೀಘ್ರವಾಗಿ ವರದಿ ಸಲ್ಲಿಸಿರುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ಎನ್.ಪಿ.ಎಸ್ ರದ್ದು ಪಡಿಸಿ ಹಳೆ ಪಿಂಚಣಿ ಯೋಜನೆ ಜಾರಿಯಾಗುವ ಬಗ್ಗೆ ಸರ್ಕಾರದ ಅಭಿಪ್ರಾಯವೇನು ?

## ಕೆರೆಗಳ ಸಂರಕ್ಷಣೆ ಮತ್ತು ಪುನಶ್ಚೇತನದ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೩೫೯ (೪೧೩) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಣ್ಣ ನೀರಾವರಿ ಇಲಾಖಾ ವ್ಯಾಪ್ತಿಗೆ ಬರುವ ಕೆರೆಗಳ ಸಂಖ್ಯೆ ಎಷ್ಟು ;

(ಆ) ಆ ಕೆರೆಗಳ ಪೈಕಿ ಒತ್ತುವರಿಯಾದ ಕೆರೆಗಳ ಸಂಖ್ಯೆ ಎಷ್ಟು ;

(ಇ) ಒತ್ತವರಿಯಾದ ಕೆರೆಗಳ ತೆರವಿಗೆ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಈ) ಕೆರೆಗಳ ಪುನಶ್ಚೇತನಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ?

## K.P.S.C ಯಿಂದ ಆಯ್ಕೆಯಾದ F.D.A ಮತ್ತು S.D.A ಅಭ್ಯರ್ಥಿಗಳಿಗೆ ನೇಮಕಾತಿ ಆದೇಶದ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೩೬೦ (೪೧೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೭ ರಲ್ಲಿ ಅಧಿಸೂಚನೆ ಹೊರಡಿಸಿ K.P.S.C ಮೂಲಕ ಆಯ್ಕೆಯಾದ F.D.A ಮತ್ತು S.D.A ಅಭ್ಯರ್ಥಿಗಳೆಷ್ಟು; (ವಿವರ ನೀಡುವುದು)

(ಆ) ಯಾವಾಗ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿದೆ ;

(ಇ) ಸದರಿ ನೇಮಕಾತಿ ಪ್ರಕ್ರಿಯೆಯನ್ನು ಮುಂದಿನ ಆರ್ಥಿಕ ವರ್ಷದ ವರೆಗೆ ತಡೆಹಿಡಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಈ ತಡೆಯನ್ನು ತೆರವುಗೊಳಿಸಿ ನೇಮಕಾತಿ ಆದೇಶವನ್ನು ಯಾವಾಗ ನೀಡಲಾಗುವುದು ?

## ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ ಕಸ ಶುಲ್ಕ ನಿಗಧಿ ಮಾಡುತ್ತಿರುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೬೧ (೩೪೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಕಸ ಶುಲ್ಕವನ್ನು ನಿಗಧಿ ಮಾಡುವ ಪ್ರಸ್ತಾವನೆ ಯಾವ ಹಂತದಲ್ಲಿದೆ ; (ಪೂರ್ಣ ಮಾಹಿತಿ ನೀಡುವುದು)

(ಆ) ಈ ಕಸ ಶುಲ್ಕವನ್ನು ಯಾವ ರೀತಿಯಲ್ಲಿ ಸಂಗ್ರಹ ಮಾಡಲಾಗುವುದು; ಒಂದು ವೇಳೆ ವಿದ್ಯುತ್ ಬಿಲ್‌ನೊಂದಿಗೆ ಜೋಡಿಸುವುದಾದರೆ ಹಲವು ಕಟ್ಟಡಗಳಲ್ಲಿ ಮನೆಗಳು ಖಾಲಿ ಇರುತ್ತವೆ ಮತ್ತು ನೀರಿನ ಮೋಟರ್ ಸಂಪರ್ಕಕ್ಕೆ ಪ್ರತ್ಯೇಕ ಮೀಟರ್ ಅಳವಡಿಸಲಾಗಿರುವ ಇಂತಹ ಕಟ್ಟಡಗಳಲ್ಲಿ ನೀರಿನ ಮೋಟರ್‌ಗಳ ಮೀಟರ್‌ಗಳನ್ನು ಕೈ ಬಿಡಲು ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ; (ವಿವರ ನೀಡುವುದು)

(ಇ) ತಿಂಗಳಿಗೆ ೨೦೦ರೂ ಗಿಂತ ಕಡಿಮೆ ವಿದ್ಯುತ್ ಬಳಸುವ ಕೆಳ ಮಧ್ಯಮ ವರ್ಗದ ಜನರಿಗೆ ೧೦೦ ರೂಗಳ ಕಸ ಶುಲ್ಕವನ್ನು ವಿಧಿಸುವುದು ದುಬಾರಿಯಾಗುವುದಿಲ್ಲವೆ; ಇದನ್ನು ಕಡಿಮೆ ಮಾಡಲು ಸರ್ಕಾರದ ಕ್ರಮಗಳೇನು ? (ವಿವರ ನೀಡುವುದು)

## ಕೊಡಗು ಜಿಲ್ಲೆಯ ಕ್ರೀಡಾಂಗಣಗಳ ಅಭಿವೃದ್ಧಿ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೬೨ (೨೩೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಡಗು ಜಿಲ್ಲೆಯಲ್ಲಿ ಕ್ರೀಡಾ ಇಲಾಖೆಯ ಅಧೀನದಲ್ಲಿರುವ ಹೊರ/ಒಳ ಕ್ರೀಡಾಂಗಣಗಳ ಸಂಖ್ಯೆ ಎಷ್ಟು ; (ಹೆಸರುಗಳೊಂದಿಗೆ ವಿವರಗಳನ್ನು ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಈ ಕ್ರೀಡಾಂಗಣಗಳ ಅಭಿವೃದ್ಧಿಗೆ ನೀಡಲಾಗಿರುವ ಅನುದಾನವೆಷ್ಟು ; (ಕಾಮಗಾರಿಗಳ ವಿವರವಾದ ಮಾಹಿತಿ ಒದಗಿಸುವುದು)

(ಇ) ಮಡಿಕೇರಿಯ ಜಿಲ್ಲಾ ಕ್ರೀಡಾಂಗಣಕ್ಕೆ ಮೂಲ ಸೌಕರ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರಿಪಡಿಸಲು ಸರ್ಕಾರದ ಕ್ರಮಗಳೇನು ? (ವಿವರ ನೀಡುವುದು)

## ಕೊಡಗು ಜಿಲ್ಲೆ ದುಬಾರೆಯಲ್ಲಿ ಕಾವೇರಿ ನದಿಗೆ ತೂಗುಸೇತುವೆ ನಿರ್ಮಾಣದ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೬೩ (೩೪೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆ, ದುಬಾರೆ ಪ್ರದೇಶದಲ್ಲಿ ಹರಿಯುವ ಕಾವೇರಿ ನದಿಗೆ ಅಡ್ಡಲಾಗಿ ತೂಗು ಸೇತುವೆಯನ್ನು ನಿರ್ಮಾಣ ಮಾಡುವ ಯೋಜನೆ ಯಾವ ಹಂತದಲ್ಲಿದೆ; ಇದರ ಕಾಮಗಾರಿಯನ್ನು ಯಾವಾಗ ಪ್ರಾರಂಭ ಮಾಡಲಾಗುವುದು ; (ಮಾಹಿತಿ ನೀಡುವುದು)

(ಆ) ದುಬಾರೆ ಫಾರೆಸ್ಟ್‌ಗೆ ಬರುವ ಪ್ರವಾಸಿಗರ ಹಿತದೃಷ್ಟಿಯಿಂದ ಸುರಕ್ಷತೆಗಾಗಿ ತೆಗೆದುಕೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ದೇವರಾಜು ಅರಸು ವಿದೇಶಿ ವ್ಯಾಸಂಗ ವೇತನ ಯೋಜನೆ ಬಗ್ಗೆ

**ಶ್ರೀ ಕೆ. ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೩೬೪ (೩೪೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) "ದೇವರಾಜ ಅರಸು ವಿದೇಶಿ ವ್ಯಾಸಂಗ ವೇತನ ಯೋಜನೆ"ಯನ್ನು ಯಾವ ವರ್ಷದಿಂದ ಜಾರಿಗೆ ತರಲಾಗಿದೆ; ಈ ಯೋಜನೆಯ ರೂಪುರೇಷೆಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಯೋಜನೆಯು ಜಾರಿಯಾದಾಗಿನಿಂದ ಇದುವರೆವಿಗೂ ಸರ್ಕಾರ ಮೀಸಲಿಟ್ಟ ಅನುದಾನವೆಷ್ಟು; ಖರ್ಚು ಮಾಡಲಾದ ಅನುದಾನವೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ಯೋಜನೆಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವಾಗ ಅನುಸರಿಸಲಾಗುವ ಮಾನದಂಡಗಳೇನು; ಆಯ್ಕೆಯಾದ ಪ್ರತಿ ವಿದ್ಯಾರ್ಥಿಗೆ ನೀಡಿರುವ ಅನುದಾನದ ಮೊತ್ತವೆಷ್ಟು ;

(ಈ) ಇತ್ತೀಚೆಗೆ "ದೇವರಾಜ ಅರಸು ವಿದೇಶಿ ವ್ಯಾಸಂಗ ವೇತನ ಯೋಜನೆ" ಅಡಿಯಲ್ಲಿ ರಾಜ್ಯ ಸರ್ಕಾರ ಸಾಕಷ್ಟು ಅನುದಾನ ಒದಗಿಸದಿರುವುದರಿಂದ ಮತ್ತು ಪ್ರತಿ ವಿದ್ಯಾರ್ಥಿಗೆ ನೀಡುವ ವೇತನದ ಮೊತ್ತವನ್ನು ಕಡಿತಗೊಳಿಸಿರುವುದರಿಂದ, ಹಿಂದುಳಿದ ವರ್ಗಕ್ಕೆ ಸೇರಿದ ಅನೇಕ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಅನ್ಯಾಯ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಅನ್ಯಾಯವನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ವಿದ್ಯುತ್ ಪ್ರಸರಣ ಮತ್ತು ಹಂಚಿಕೆ ವ್ಯವಸ್ಥೆ

**ಶ್ರೀ ಕೆ. ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೩೬೫ (೩೫೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸರ್ಕಾರದ ಆರ್ಥಿಕ ಅನುದಾನದ ಯೋಜನೆಗಳ ಅಡಿ ರಾಜ್ಯ ಸರ್ಕಾರ ವಿದ್ಯುತ್ ಪ್ರಸರಣ ಮತ್ತು ಹಂಚಿಕೆ (Transmission & Distribution) ವ್ಯವಸ್ಥೆಯನ್ನು ಬಲಗೊಳಿಸಲು ಕೈಗೊಂಡಿರುವ ಯೋಜನೆಗಳು ಮತ್ತು ಗುರಿಗಳು ಯಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಈ ಯೋಜನೆಗಳ ಅಡಿಯಲ್ಲಿ ರಾಜ್ಯ ಸರ್ಕಾರಕ್ಕೆ ಬಿಡುಗಡೆ ಆಗಿರುವ ಅನುದಾನವೆಷ್ಟು; ನಿಗದಿಪಡಿಸಿದ ಯೋಜನೆ ಮತ್ತು ಗುರಿಯಂತೆ ಪ್ರಸರಣ ಮತ್ತು ಹಂಚಿಕೆಯಲ್ಲಿ ಆಗಿರುವ ನಷ್ಟ ತಗ್ಗಿಸಲು ಸಾಧಿಸಲಾಗಿರುವ ಪ್ರಗತಿಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಒಂದು ವೇಳೆ ನಿಗದಿಪಡಿಸಿದ ಯೋಜನೆ ಮತ್ತು ಗುರಿಯನ್ನು ಸಾಧಿಸಲು ವಿಫಲವಾಗಿದ್ದಲ್ಲಿ, ಅದಕ್ಕೆ ಕಾರಣಗಳೇನು; ಈ ವೈಫಲ್ಯದಲ್ಲಿ ಭಾಗಿಯಾಗಿರುವ ಸಂಸ್ಥೆಗಳು ಯಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) Ujwal Discom Assurance Yojana (UDAY) ಅಡಿಯಲ್ಲಿ ನೀಡಲಾಗಿರುವ ಆರ್ಥಿಕ ನೆರವು ಸರಿಯಾಗಿ ಬಳಕೆಯಾಗಿದೆಯೇ; ಇಲ್ಲದಿದ್ದಲ್ಲಿ, ಇತ್ತೀಚಿನ ಕೇಂದ್ರ ಸರ್ಕಾರ Electricity Act ನ್ನು ಜಾರಿಗೆ ತರಲು ಉದ್ದೇಶಿಸಿರುವ ತಿದ್ದುಪಡಿಗಳಿಂದ ಖಾಸಗಿ Power Generator ಗಳಿಗೆ

ನೇರವಾಗಿ ಬಾಕಿ ಹಣ ಪಾವತಿ ಮಾಡುವುದರಿಂದ, DISCOM ಗಳು ಇನ್ನಷ್ಟು ಆರ್ಥಿಕವಾಗಿ ಬಲಹೀನವಾಗುವುದಲ್ಲದೆ, ರಾಜ್ಯ ಸರ್ಕಾರಗಳ ಸಾಮಾಜಿಕ ಯೋಜನೆಗಳನ್ನು ಅನುಷ್ಠಾನಗೊಳಿಸಲು ವಿಫಲವಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಬಂದಿದ್ದಲ್ಲಿ, ಸರ್ಕಾರ ಯೋಜನೆಗಳ ಅನುಷ್ಠಾನದಲ್ಲಿ ಯಶಸ್ಸು ಹೊಂದಲು ಯಾವ ಕ್ರಮಗಳನ್ನು ಕೈಗೊಳ್ಳಲಿದೆ ?

## ನೀರಾವರಿ ಯೋಜನೆಗಳಿಗೆ ಒದಗಿಸಿದ ಅನುದಾನ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೩೬೬ (೩೫೨) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ನೀರಾವರಿ ಯೋಜನೆಗಳಿಗೆ ಬಜೆಟ್‌ನಲ್ಲಿ ನಿಗದಿಪಡಿಸಿದ, ಬಿಡುಗಡೆ ಮಾಡಿದ ಮತ್ತು ವೆಚ್ಚ ಮಾಡಿರುವ ಹಣ ಎಷ್ಟು ; (ಯೋಜನೆವಾರು ಮತ್ತು ವರ್ಷವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಮಂಜೂರು ಮಾಡಿದ ಹೊಸ ನೀರಾವರಿ ಯೋಜನೆಗಳು ಯಾವುವು; ಈ ಹೊಸ ಯೋಜನೆಗಳಿಗೆ ಮಂಜೂರು ಮಾಡಿರುವ ಮತ್ತು ಬಿಡುಗಡೆ ಮಾಡಿರುವ ಹಣ ಎಷ್ಟು ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಹೊಸದಾಗಿ ಘೋಷಣೆ ಮಾಡಿರುವ ನೀರಾವರಿ ಯೋಜನೆಗಳು ಯಾವುವು; ಈ ಹೊಸ ಯೋಜನೆಗಳಿಗೆ ಮಂಜೂರು ಮಾಡಿರುವ ಮತ್ತು ಬಿಡುಗಡೆ ಮಾಡಿರುವ ಹಣ ಎಷ್ಟು ; (ವಿವರ ನೀಡುವುದು)

(ಈ) ಸದರಿ ಯೋಜನೆಗಳು ಪೂರ್ಣಗೊಳ್ಳಲು ಎಷ್ಟು ಸಮಯವನ್ನು ನಿಗದಿ ಮಾಡಲಾಗಿದೆ ಹಾಗೂ ಈ ಯೋಜನೆಗಳು ಪೂರ್ಣಗೊಳ್ಳಲು ಅಗತ್ಯವಿರುವ ಹಣ ಎಷ್ಟು ; (ವಿವರಗಳನ್ನು ನೀಡುವುದು)

(ಉ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿನ ನೀರಾವರಿ ಯೋಜನೆಗಳ ಅನುಷ್ಠಾನಕ್ಕೆ ಸರ್ಕಾರದ ಖಾತರಿಯೊಂದಿಗೆ ವಿವಿಧ ವಾಣಿಜ್ಯ ಬ್ಯಾಂಕ್‌ಗಳಿಂದ ಪಡೆದಿರುವ ಸಾಲವೆಷ್ಟು ಮತ್ತು ಈ ಸಾಲದಲ್ಲಿ ಹೆಚ್ಚುವರಿ ಆರ್ಥಿಕ ಹೊರೆ (Extra Financial Implication)ಯ ಬಿಲ್ಲುಗಳನ್ನು ತೀರುವಳಿ ಮಾಡಲು ಉಪಯೋಗಿಸಿರುವ ಹಣವೆಷ್ಟು ? (ನಿಗಮವಾರು ಸಂಪೂರ್ಣ ಮಾಹಿತಿ ಒದಗಿಸುವುದು)

## ಲಾಕ್‌ಡೌನ್‌ನಿಂದ ರಾಜ್ಯದಲ್ಲಿ GST ನಿವ್ವಳ ಸಂಗ್ರಹಣೆಯಲ್ಲಿ ಖೋತಾ ಬಗ್ಗೆ

**ಶ್ರೀ ಕೆ. ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೩೬೭ (೩೫೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೇಂದ್ರ ಸರ್ಕಾರ ವಿಧಿಸಿದ ಸಂಪೂರ್ಣ ಲಾಕ್‌ಡೌನ್‌ನಿಂದ ರಾಜ್ಯದಲ್ಲಿ GST ನಿವ್ವಳ ಸಂಗ್ರಹಣೆಯಲ್ಲಿ ಖೋತಾ ಆಗಿರುವುದು ನಿಜವೇ; ಹಾಗಿದ್ದಲ್ಲಿ, ಪೂರ್ಣ ಮಾಹಿತಿ ನೀಡುವುದು ;

(ಆ) ಈ ತೆರಿಗೆ ಸಂಗ್ರಹಣೆ ಖೋತಾವನ್ನು ನೀಗಿಸಲು ಕೇಂದ್ರ ಸರ್ಕಾರ ಸೂಚಿಸಿರುವ ಮಾರ್ಗೋಪಾಯಗಳೇನು ; (ವಿವರಗಳನ್ನು ಒದಗಿಸುವುದು)

(ಇ) ಕೇಂದ್ರ ಸರ್ಕಾರದ ಮಾರ್ಗೋಪಾಯಗಳಲ್ಲಿ ರಾಜ್ಯ ಸರ್ಕಾರ ಅನುಸರಿಸಿರುವ ಅಥವಾ ಆಯ್ಕೆ ಮಾಡಿಕೊಂಡಿರುವ ಮಾರ್ಗೋಪಾಯಗಳು ಯಾವುವು ; (ಪೂರ್ಣ ಮಾಹಿತಿ ನೀಡುವುದು)

(ಈ) ಈ ಮಾರ್ಗೋಪಾಯದ ರೀತ್ಯಾ, ರಾಜ್ಯ ಸರ್ಕಾರ ವಾಣಿಜ್ಯ ಬ್ಯಾಂಕ್‌ಗಳಿಂದ/ಭಾರತೀಯ ರಿಸರ್ವ್ ಬ್ಯಾಂಕ್‌ನಿಂದ ಪಡೆದಿರುವ ಸಾಲವೆಷ್ಟು; ಈ ಸಾಲಗಳ ಮಂಜೂರಾತಿಯಲ್ಲಿ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರ ನಿರ್ವಹಿಸಬೇಕಾಗಿರುವ ನಿಬಂಧನೆಗಳ ವಿವರ ನೀಡುವುದು ;

(ಉ) ವಾಣಿಜ್ಯ ಬ್ಯಾಂಕ್/ಭಾರತೀಯ ರಿಸರ್ವ್ ಬ್ಯಾಂಕ್‌ನಿಂದ ಪಡೆದಿರುವ ಸಾಲಗಳಲ್ಲಿ ಇಲಾಖಾವಾರು ಹಂಚಿಕೆಯಾಗಿರುವ ವಿವರ ನೀಡುವುದು; ಈ ಹಂಚಿಕೆಯಲ್ಲಿ ಕೇವಲ ನೀರಾವರಿ ಇಲಾಖೆಗೆ ಅತಿ ಹೆಚ್ಚು ಹಂಚಿಕೆಯಾಗಲು ಕಾರಣವೇನು; ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಇತರೆ ಇಲಾಖೆಗಳಾದ ಗ್ರಾಮೀಣಾಭಿವೃದ್ಧಿ, ನಗರಾಭಿವೃದ್ಧಿ, ಲೋಕೋಪಯೋಗಿ ಮತ್ತು ಸಣ್ಣ ನೀರಾವರಿ ಇಲಾಖೆಗಳನ್ನು ಕಡೆಗಣಿಸಲು ಕಾರಣವೇನು ? (ಸಂಪೂರ್ಣ ವಿವರ ನೀಡುವುದು)

## “ಆತ್ಮ ನಿರ್ಭರ ಭಾರತ ಅಭಿಯಾನ”ದ ಅಡಿಯಲ್ಲಿ ಅತಿ ಸಣ್ಣ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಪುನಶ್ಚೇತನ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೩೬೮ (೩೨೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಅತೀ ಸಣ್ಣ, ಸಣ್ಣ ಮತ್ತು ಮಧ್ಯಮ ಕೈಗಾರಿಕಾ ಘಟಕಗಳೆಷ್ಟು; ಈ ವರ್ಗದ ಕೈಗಾರಿಕೆಗಳ ಬಗ್ಗೆ ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರಗಳು ಇತ್ತೀಚೆಗೆ ನಡೆಸಿರುವ ಸಮೀಕ್ಷೆ/ಗಣತಿ ಪ್ರಕಾರ ಈ ವಲಯದಲ್ಲಿ ಒದಗಿಸಿರುವ ಹುದ್ದೆಗಳೆಷ್ಟು ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ವಿವರ ನೀಡುವುದು)

(ಆ) ಕೋವಿಡ್ ಸೋಂಕು–೧೯ ಹರಡುವಿಕೆ ಹಿನ್ನೆಲೆಯಲ್ಲಿ, ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ವಿಧಿಸಿದ ನಿಯಮಗಳ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಬಾಧಿತವಾದ ಒಟ್ಟು ಅತೀ ಸಣ್ಣ, ಸಣ್ಣ ಮತ್ತು ಮಧ್ಯಮ ಕೈಗಾರಿಕಾ ಘಟಕಗಳ ಸಂಖ್ಯೆ ಎಷ್ಟು; ಈ ಬಗ್ಗೆ ರಾಜ್ಯ ಸರ್ಕಾರ ಅಧಿಕೃತವಾಗಿ ಸಮೀಕ್ಷೆ ನಡೆಸಿದೆಯೇ ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಇ) ಕೇಂದ್ರ ಸರ್ಕಾರ ಘೋಷಿಸಿರುವ "ಆತ್ಮ ನಿರ್ಭರ ಭಾರತ ಅಭಿಯಾನ"ದ ಅಡಿಯಲ್ಲಿ ಅತೀ ಸಣ್ಣ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳನ್ನು ಪುನಶ್ಚೇತನಗೊಳಿಸಲು ಮತ್ತು ಉದ್ಯಮಗಳಿಗೆ ಆರ್ಥಿಕ ನೆರವು ನೀಡುವ ಯೋಜನೆಯಲ್ಲಿ, ವ್ಯಾಪಾರ–ವಹಿವಾಟು, ಸಾಲ, ಸರ್ಕಾರದಿಂದ ಶೇರು ತುಂಬುವುದು ಮತ್ತು ಸಾಲ ಖಾತ್ರಿ ಆರ್ಥಿಕ ನೆರವು ಅಡಿಯಲ್ಲಿ ರಾಜ್ಯಕ್ಕೆ ದೊರೆತಿರುವ ಆರ್ಥಿಕ ನೆರವು ಎಷ್ಟು; ಆರ್ಥಿಕ ನೆರವನ್ನು ಯಾವ ಯಾವ ಇಲಾಖೆಯ ಮುಖೇನ ಕೈಗಾರಿಕೆಗಳಿಗೆ ಒದಗಿಸಲಾಗಿದೆ ?

## ಕೇಂದ್ರದಿಂದ ರಾಜ್ಯಕ್ಕೆ ಬರಬೇಕಾದ ಜಿ.ಎಸ್.ಟಿ. ಕುರಿತು

**ಶ್ರೀ ಆರ್.ಬಿ. ತಿಮ್ಮಾಪುರ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೬೯ (೫೦೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಲ್ಲಿ ಕೇಂದ್ರದಿಂದ ರಾಜ್ಯಕ್ಕೆ ಬರಬೇಕಾದ ಜಿ.ಎಸ್.ಟಿ ಮೊತ್ತ ಸಕಾಲದಲ್ಲಿ ಬಂದಿದೆಯೇ ; (ಮಾಹಿತಿ ಒದಗಿಸುವುದು)

(ಆ) ಕೊರೋನಾ ಸಂದರ್ಭದಲ್ಲಿ ಕೇಂದ್ರದಿಂದ ರಾಜ್ಯಕ್ಕೆ ಬರಬೇಕಾದ ಜಿ.ಎಸ್.ಟಿ ತೆರಿಗೆ ಹಣ ಸಕಾಲದಲ್ಲಿ ಬಾರದ ಕಾರಣ ರಾಜ್ಯಕ್ಕೆ ಆದ ಹಾನಿಯ ಪ್ರಮಾಣವೆಷ್ಟು ;

(ಇ) ಇದರಿಂದ ಉಂಟಾದ ಹಾನಿಯ ಪರಿಹಾರಕ್ಕೆ ರಾಜ್ಯ ಸರ್ಕಾರ ಕೇಂದ್ರದೊಂದಿಗೆ ನಡೆಸಿರುವ ಪತ್ರ ವ್ಯವಹಾರಗಳೇನು ?

## ೨೦೧೯-೨೦ನೇ ಸಾಲಿನ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಅನುದಾನ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೭೦ (೪೭೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಮಾನ್ಯ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ೨೦೧೯-೨೦ನೇ ಸಾಲಿಗೆ ಸರ್ಕಾರ ಸೂಚಿಸಿರುವಂತೆ ರೂ.೨.೦೦ ಕೋಟಿ ರೂಪಾಯಿ ಮೊತ್ತದ ಕಾಮಗಾರಿಗಳ ಕ್ರಿಯಾಯೋಜನೆಯನ್ನು ಈಗಾಗಲೇ ಸಲ್ಲಿಸಿರುವ ಮಾನ್ಯ ಎಲ್ಲಾ ಶಾಸಕರುಗಳು ಸೂಚಿಸಿರುವ ಎಲ್ಲಾ ಕಾಮಗಾರಿಗಳಿಗೆ ಒಟ್ಟು ರೂ.೨.೦೦ ಕೋಟಿ ರೂಪಾಯಿ ಅನುದಾನವನ್ನು ನೀಡಲಾಗಿದೆಯೇ ;

(ಆ) ಇದುವರೆಗೂ ರೂ.೨.೦೦ ಕೋಟಿ ರೂಪಾಯಿ ಮೊತ್ತದ ಕಾಮಗಾರಿಗಳ ಕ್ರಿಯಾಯೋಜನೆಯನ್ನು ಸಲ್ಲಿಸಿ, ಈಗಾಗಲೇ

ಮಾನ್ಯ ಶಾಸಕರುಗಳು ಸೂಚಿಸಿರುವ ಹಲವಾರು ಕಾಮಗಾರಿಗಳಿಗೆ ಇದುವರೆಗೂ ಅನುದಾನ ಒದಗಿಸದಿರಲು ಕಾರಣಗಳೇನು ;

(ಇ) ೨೦೧೯-೨೦ನೇ ಸಾಲಿಗೆ ಮಾನ್ಯ ಶಾಸಕರು ನೀಡಿರುವ ರೂ.೨.೦೦ ಕೋಟಿ ರೂಪಾಯಿ ಮೊತ್ತದ ಅನುದಾನವನ್ನು ಯಾವಾಗ ನೀಡಲಾಗುವುದು ;

(ಈ) ಯಾವ ಕಾಲಮಿತಿಯೊಳಗೆ ಸದರಿ ಅನುದಾನವನ್ನು ಬಿಡುಗಡೆ ಮಾಡಲಾಗುವುದು ?

## "ಕೊಡಗು ಜಾನಪದ ಲೋಕ" ನಿರ್ಮಾಣ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೭೧ (೪೭೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಡಗಿನ ಸಂಸ್ಕೃತಿಯನ್ನು ಬಿಂಬಿಸುವ "ಕೊಡಗು ಜಾನಪದ ಲೋಕ" ನಿರ್ಮಾಣದ ಬಗ್ಗೆ ಸಾಕಷ್ಟು ಬೇಡಿಕೆ ಇದ್ದು, "ಕೊಡಗು ಜಾನಪದ ಲೋಕ" ನಿರ್ಮಾಣಕ್ಕೆ ಸರ್ಕಾರ ಕ್ರಮ ವಹಿಸುವುದೇ ;

(ಆ) ಹಾಗಿದ್ದಲ್ಲಿ, "ಕೊಡಗು ಜಾನಪದ ಲೋಕ" ನಿರ್ಮಾಣ ಯೋಜನೆಯನ್ನು ಮುಂದಿನ ಬಜೆಟ್‌ನಲ್ಲಿ ಘೋಷಿಸಲಾಗುವುದೇ ?

## ಜನರಲ್ ತಿಮ್ಮಯ್ಯ ಜಿಲ್ಲಾ ಕ್ರೀಡಾಂಗಣದ ನಿರ್ವಹಣೆ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೭೨ (೪೭೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಡಗು ಜಿಲ್ಲೆಯ ಮಡಿಕೇರಿ ನಗರದಲ್ಲಿರುವ ಜನರಲ್ ತಿಮ್ಮಯ್ಯ ಜಿಲ್ಲಾ ಕ್ರೀಡಾಂಗಣವನ್ನು ಸೂಕ್ತ ನಿರ್ವಹಣೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಕ್ರೀಡಾಂಗಣದ, ಒಳಾಂಗಣ ಹಾಗೂ ಹೊರಾಂಗಣದ ಸುಸಜ್ಜಿತ ನಿರ್ವಹಣೆಗೆ ಸರ್ಕಾರ ನೀಡುತ್ತಿರುವ ಅನುದಾನ ಎಷ್ಟು ; (ವಿವರ ನೀಡುವುದು)

(ಇ) ಪ್ರಸಕ್ತ ಆರ್ಥಿಕ ವರ್ಷದಿಂದ ಸರ್ಕಾರ ಇನ್ನೂ ಹೆಚ್ಚು ಅನುದಾನ ನೀಡಿ, ಸೂಕ್ತ ನಿರ್ವಹಣೆ ಮಾಡಲು ಕ್ರಮ ಕೈಗೊಳ್ಳುವುದೇ ?

## "ಕೊಡವರ ಅಭಿವೃದ್ಧಿ ನಿಗಮ" ಸ್ಥಾಪನೆ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೭೩ (೪೭೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡವರ ಅಭಿವೃದ್ಧಿ ನಿಗಮ ಸ್ಥಾಪನೆ ಬಗ್ಗೆ ಸಾಕಷ್ಟು ಒತ್ತಾಯ ಇದ್ದು, ಸದರಿ ನಿಗಮ ಸ್ಥಾಪನೆಗೆ ಸರ್ಕಾರ ಇದುವರೆವಿಗೂ ಕ್ರಮವಹಿಸದಿರಲು ಕಾರಣವೇನು ;

(ಆ) ಹಾಗಿದ್ದಲ್ಲಿ, "ಕೊಡವರ ಅಭಿವೃದ್ಧಿ ನಿಗಮ" ವನ್ನು ಪ್ರಸಕ್ತ ಆರ್ಥಿಕ ವರ್ಷದಲ್ಲೇ ಸ್ಥಾಪನೆ ಮಾಡಲು ಸರ್ಕಾರ ಕ್ರಮ ವಹಿಸುವುದೇ ?

## ಬೀದರ್ ಜಿಲ್ಲೆಯಲ್ಲಿ ಸಮರ್ಪಕ ವಿದ್ಯುತ್ ನೀಡುವ ಕುರಿತು

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೭೪ (೪೫೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರೈತರ ಬೆಳೆಗಳಿಗೆ ಸಮರ್ಪಕವಾಗಿ ವಿದ್ಯುತ್ ದೊರೆಯುತ್ತಿಲ್ಲವಾದ್ದರಿಂದ ಬೆಳೆಗಳು ನಾಶವಾಗುತ್ತಿದ್ದು ಹೆಚ್ಚಿನ ವಿದ್ಯುತ್ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ೨೦೧೬ ರಿಂದ ೨೦೨೦ರವರೆಗೆ ಬೀದರ್ ಜಿಲ್ಲೆಯಲ್ಲಿ ಬಾವಿ/ ಕೊಳವೆ ಬಾವಿಗಳ ಸಂಪರ್ಕಕ್ಕೆ ಅರ್ಜಿ ಸಲ್ಲಿಸಿರುವ ರೈತರ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು) ಬಂದಿರುವ ಅರ್ಜಿಗಳ ಪೈಕಿ ಎಷ್ಟು ರೈತರಿಗೆ ಸಂಪರ್ಕ ನೀಡಲಾಗಿದೆ; ವಿಳಂಬಕ್ಕೆ ಕಾರಣವೇನು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಬೀದರ್ ಜಿಲ್ಲೆಯಲ್ಲಿ ಎಷ್ಟು ಕಡೆಗಳಲ್ಲಿ ಸೋಲಾರ್ ಘಟಕಗಳಿಗೆ ಅನುಮತಿ ನೀಡಲಾಗಿದೆ; ಸೋಲಾರ್ ಘಟಕದಿಂದ ಇಲಾಖೆ ಪಡೆಯುತ್ತಿರುವ ವಿದ್ಯುತ್ ಎಷ್ಟು; ಇದಕ್ಕಾಗಿ ವಾರ್ಷಿಕ ಅನುದಾನ ಎಷ್ಟು ಖರ್ಚಾಗುತ್ತಿದೆ ? (ಮಾಹಿತಿ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಅನುದಾನ ಬಿಡುಗಡೆ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೭೫ (೪೫೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯಲ್ಲಿ ೨೦೧೫ ರಿಂದ ೨೦೨೦ರವರೆಗೆ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಸದುಪಯೋಗ ಪಡೆದುಕೊಂಡವರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಜಿಲ್ಲೆಯಲ್ಲಿ ಗಂಗಾ ಕಲ್ಯಾಣಕ್ಕಾಗಿ ಖರ್ಚು ಮಾಡಿದ ಅನುದಾನವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಜಿಲ್ಲೆಯಲ್ಲಿರುವ ವಸತಿ ನಿಲಯ/ಶಾಲೆಗಳೆಷ್ಟು; ಮಕ್ಕಳ ಸಂಖ್ಯೆಯೆಷ್ಟು; ಖರ್ಚಾಗುತ್ತಿರುವ ವಾರ್ಷಿಕ ಅನುದಾನ ಎಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಬೀದರ್ ಜಿಲ್ಲೆಯಲ್ಲಿನ ಪ್ರವಾಸಿ ಸ್ಥಳಗಳ ಅಭಿವೃದ್ಧಿ ಕುರಿತು

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೭೬ (೪೫೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿರುವ ಪ್ರವಾಸಿ ಸ್ಥಳಗಳು ಯಾವುವು; ಕಳೆದ ೫ ವರ್ಷಗಳಲ್ಲಿ ಈ ಪ್ರವಾಸಿ ತಾಣಗಳಲ್ಲಿ ಕೈಗೊಂಡಿರುವ ಅಭಿವೃದ್ಧಿ ಕಾರ್ಯಕ್ರಮಗಳು ಹಾಗೂ ಕಾಮಗಾರಿಗಳು ಯಾವುವು; ಅದಕ್ಕಾಗಿ ಖರ್ಚು ಮಾಡಿರುವ ಅನುದಾನವೆಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಬೀದರ್ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಮಿಷನ್ ೨೦೨೦ ಯೋಜನೆಯನ್ನು ರೂಪಿಸಲಾಗಿದೆಯೇ; ರೂಪಿಸಿದಲ್ಲಿ, ಹೊಸದಾಗಿ ಗುರುತಿಸಿರುವ ಪ್ರವಾಸಿ ಸ್ಥಳಗಳು ಯಾವುದು; ಅದಕ್ಕಾಗಿ ಮಂಜೂರಾಗಿರುವ ಅನುದಾನ ಎಷ್ಟು ?

## ಬೀದರ್ ಜಿಲ್ಲಾ ಮುದ್ರಾಂಕ ಶುಲ್ಕ ಸಂಗ್ರಹವಾದ ಅಧಿಬಾರ ಶುಲ್ಕದ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೭೭ (೪೫೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೭–೧೮ ಹಾಗೂ ೨೦೧೮–೧೯ನೇ ಸಾಲಿನ ಬೀದರ್ ಜಿಲ್ಲಾ ಮುದ್ರಾಂಕ ಸಂಗ್ರಹವಾದ ಅಧಿಬಾರ ಶುಲ್ಕದ ಮೊತ್ತವನ್ನು ನಿಧಿ–೩ರಲ್ಲಿ ಜಮಾ ಮಾಡಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಬೀದರ್ ಜಿಲ್ಲೆಯ ೫ ತಾಲ್ಲೂಕು ಪಂಚಾಯತಿ ವ್ಯಾಪ್ತಿಯಲ್ಲಿ ಕೈಗೊಳ್ಳಲಾಗಿರುವ ವಿವಿಧ ಕಾಮಗಾರಿಗಳ ಬಿಲ್ಲುಗಳ ಪಾವತಿ ಮಾಡುವ ಸಂಬಂಧ ಸಂಗ್ರಹಿಸಲಾದ ಅಧಿಭಾರ ಮೊತ್ತವಾದ ಸುಮಾರು ೩.೪೮ ಕೋಟಿ ರೂ.ಗಳನ್ನು ಖಜಾನೆ–೨ ರಿಂದ ತಾಲ್ಲೂಕು ಪಂಚಾಯತಿ ನಿಧಿ–೩ಕ್ಕೆ ಜಮಾ ಮಾಡುವಂತೆ ಬೀದರ್ ಜಿಲ್ಲಾ ಪಂಚಾಯತಿಯಿಂದ ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಿರುವ ಬಗ್ಗೆ ಕೈಗೊಂಡಿರುವ ಕ್ರಮಗಳೇನು; ಹಾಗೂ ಯಾವ ಕಾಲಮಿತಿಯಲ್ಲಿ ಕ್ರಮ ಕೈಗೊಳ್ಳಲು ಉದ್ದೇಶಿಸಿದೆ ? (ವಿವರಗಳೊಂದಿಗೆ ಮಾಹಿತಿ ನೀಡುವುದು)

## ಇ–ವೇಸ್ಟ್/ಇ–ತ್ಯಾಜ್ಯದಿಂದ ಆಗುವ ದುಷ್ಪರಿಣಾಮದ ಬಗ್ಗೆ

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :–**

೩೭೮ (೩೪೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿ ಇ-ತ್ಯಾಜ್ಯ ಸಂಗ್ರಹಣೆ, ವಿಲೇವಾರಿ ಮತ್ತು ಸಂಸ್ಕರಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಇ-ತ್ಯಾಜ್ಯದ ಪರದೆಗಳು, ಬ್ಯಾಟರಿ ಸೆಲ್‌ಗಳಲ್ಲಿನ ವಿಷಕಾರಕ ಅಂಶಗಳಿಂದ ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರಿರುವ ಅಂಶಗಳ ನಿವಾರಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಬಡ ವಿದ್ಯಾರ್ಥಿಗಳಿಗೆ ಟ್ಯಾಬ್, ಲ್ಯಾಪ್‌ಟಾಪ್‌ಗಳ ವಿತರಣೆ ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :-**

೩೭೯ (೩೪೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದ ಪ್ರತಿ ವಾರ್ಡ್‌ನ ಬಡ ವಿದ್ಯಾರ್ಥಿಗಳಿಗೆ ಟ್ಯಾಬ್, ಲ್ಯಾಪ್‌ಟಾಪ್‌ಗಳನ್ನು ವಿತರಿಸಲು ಬೆಂಗಳೂರು ಮಹಾನಗರ ಪಾಲಿಕೆಯು ತೀರ್ಮಾನಿಸಿದೆಯೇ ;

(ಆ) ಹಾಗಿದ್ದಲ್ಲಿ, ಯಾವ ಯಾವ ವಾರ್ಡ್‌ಗಳಲ್ಲಿ ಎಷ್ಟು ಪ್ರಮಾಣಗಳಲ್ಲಿ ಲ್ಯಾಪ್‌ಟಾಪ್‌ಗಳನ್ನು ವಿತರಿಸಲಾಗುವುದು ; ಅದಕ್ಕಾಗಿ ಅಳವಡಿಸಿಕೊಂಡಿರುವ ಮಾನದಂಡಗಳೇನು ?

## ಕರ್ನಾಟಕ ಲೋಕ ಸೇವಾ ಆಯೋಗವು ನಡೆಸುವ ೨೦೧೪ನೇ ಸಾಲಿನ ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳ ಆಯ್ಕೆ ಬಗ್ಗೆ

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :-**

೩೮೦ (೨೩೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಲೋಕಸೇವಾ ಆಯೋಗವು ೨೦೧೪ನೇ ಸಾಲಿನ ಗೆಜೆಟೆಡ್ ಪ್ರೋಬೇಷನರಿ ಹುದ್ದೆಗಳ ಆಯ್ಕೆಯ ಪ್ರಕ್ರಿಯೆಯಲ್ಲಿ ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟಿಸಿದ ನಂತರ ಆಯ್ಕೆಯಾದ ಮತ್ತು ಆಯ್ಕೆಯಾಗದ ಎಲ್ಲಾ ಆಭ್ಯರ್ಥಿಗಳ ಮುಖ್ಯ ಪರೀಕ್ಷೆಯ ವಿಷಯವಾರು ಅಂಕಗಳನ್ನು ಒಂದು ವಾರದೊಳಗಾಗಿ ಕೆ.ಪಿ.ಎಸ್.ಸಿ. ಯು ಅಭ್ಯರ್ಥಿಗಳ ಇ-ಮೇಲ್ ಐಡಿಗಳಿಗೆ ಪಾಸ್‌ವಾರ್ಡ್ ಪ್ರೋಟೆಕ್ಷನ್‌ನೊಂದಿಗೆ ನೀಡಿರುವುದು ನಿಜವೇ;

(ಆ) ಹಾಗಿದ್ದಲ್ಲಿ, ೨೦೧೫ನೇ ಸಾಲಿನ ಗೆಜೆಟೆಡ್ ಪ್ರೋಬೇಷನರಿ ಪರೀಕ್ಷೆಗೆ ಸಂಬಂಧಿಸಿದಂತೆ ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟಿಸಿದ ಒಂದು ವಾರದ ನಂತರ ಕೇವಲ ಸಂದರ್ಶನಕ್ಕೆ ಆಯ್ಕೆಯಾದ ಆಭ್ಯರ್ಥಿಗಳಿಗೆ ಮಾತ್ರ ವಿಷಯವಾರು ಅಂಕಗಳನ್ನು ನೀಡದೇ, ಅವರು ಗಳಿಸಿದ ಒಟ್ಟು ಅಂಕಗಳನ್ನು ಮಾತ್ರ ನೀಡಲು ಕಾರಣಗಳೇನು ;

(ಇ) ವಿಷಯವಾರು ಅಂಕಗಳನ್ನು ೬೭ ದಿನಗಳ ಸಮಯದ ನಂತರ ಅಭ್ಯರ್ಥಿಗಳಿಗೆ ಯಾವುದೇ ಪಾಸ್‌ವಾರ್ಡ್ ಪ್ರೊಟೆಕ್ಷನ್ ಇಲ್ಲದೆ ಇ-ಮೇಲ್ ಮೂಲಕ ನೀಡಲಾಗಿದೆಯೇ ;

(ಈ) ವಿಷಯವಾರು ಅಂಕಗಳನ್ನು ನೀಡಲು ಇಷ್ಟು ಸುದೀರ್ಘ ಸಮಯ ತೆಗೆದುಕೊಳ್ಳಲು ಕಾರಣಗಳೇನು ?

## ಸರ್ಕಾರಿ ನೌಕರರ ಮೇಲಿನ ಆರೋಪ/ವಿಚಾರಣೆಗಳ ಬಗ್ಗೆ

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :-**

೩೮೧ (೨೩೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ನೌಕರರು ತಮ್ಮ ಸೇವಾವಧಿಯಲ್ಲಿ ಭ್ರಷ್ಟಾಚಾರದ ಆರೋಪದ ಮೇಲೆ ಅಮಾನತ್ತುಗೊಂಡ ಸಂದರ್ಭದಲ್ಲಿ, ಅವರ ಮೇಲಿನ ಆರೋಪಗಳ ಬಗ್ಗೆ ಲೋಕಾಯುಕ್ತ, ಎ.ಸಿ.ಬಿ. ಹಾಗೂ ಇಲಾಖಾ ವಿಚಾರಣಾ ಸಮಿತಿಗಳು ನಿಗದಿತ ಕಾಲಾವಧಿಯೊಳಗೆ ಪ್ರಕರಣಗಳನ್ನು ಮುಕ್ತಾಯಗೊಳಿಸಲು ಕ್ರಮ ಕೈಗೊಳ್ಳುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ನೂರಾರು ಪ್ರಕರಣಗಳಲ್ಲಿ ನಿವೃತ್ತಿ ನಂತರವೂ ವಿಚಾರಣೆ ಮುಕ್ತಾಯಗೊಳ್ಳದಿರುವುದರಿಂದ, ನೌಕರರ ನಿವೃತ್ತಿ ನಂತರದ ಉಪಲಬ್ಧಗಳು ಲಭ್ಯವಾಗದಿರುವುದರಿಂದ ಆ ಕುಟುಂಬಗಳು ತೊಂದರೆಯಲ್ಲಿರುವುದನ್ನು ಸರ್ಕಾರ ಮನಗಂಡಿದೆಯೇ ;

(ಇ) ಇಂತಹ ಪ್ರಕರಣಗಳ ವಿಚಾರಣೆಗಳನ್ನು ಕನಿಷ್ಠ ೫ ವರ್ಷಗಳಲ್ಲಿ ಮುಕ್ತಾಯಗೊಳಿಸಬೇಕೆನ್ನುವ ಬಗ್ಗೆ ಸರ್ಕಾರ ವಿಧೇಯಕವನ್ನು ತರಲು ಚಿಂತಿಸುತ್ತದೆಯೇ ?

## ಪೊಲೀಸ್ ದೂರು ಪ್ರಾಧಿಕಾರ ರಚನೆಯ ಬಗ್ಗೆ

**ಡಾ॥ ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ) :–**

೩೮೨ (೩೪೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಪೊಲೀಸ್ ದೂರು ಪ್ರಾಧಿಕಾರಗಳನ್ನು ರಚನೆ ಮಾಡಲಾಗಿದೆ; ಇಲ್ಲಿಯವರೆಗೆ ಈ ದೂರು ಪ್ರಾಧಿಕಾರಗಳಿಗೆ ಬಂದ ದೂರುಗಳ ಸಂಖ್ಯೆ ಎಷ್ಟು; ಎಷ್ಟು ದೂರುಗಳಿಗೆ ಪರಿಹಾರ ಕಲ್ಪಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಪೊಲೀಸ್ ದೂರು ಪ್ರಾಧಿಕಾರಕ್ಕೆ ಸದಸ್ಯರಗಳನ್ನು ಭರ್ತಿ ಮಾಡಲಾಗಿದೆಯೇ ; ಎಷ್ಟು ಹುದ್ದೆಗಳು ಪ್ರಸ್ತುತ ಖಾಲಿ ಇವೆ ; (ವಿವರ ನೀಡುವುದು)

(ಇ) ಪೊಲೀಸ್ ದೂರು ಪ್ರಾಧಿಕಾರಕ್ಕೆ ಅಧಿಕಾರೇತರ ಸದಸ್ಯರನ್ನು ನೇಮಕ ಮಾಡಲು ಅವಕಾಶ ಇದೆಯೇ; ಹಾಗಾದ್ದಲ್ಲಿ, ಪತ್ರಿಕೋದ್ಯಮ, ನ್ಯಾಯಾಂಗ ಕ್ಷೇತ್ರದಲ್ಲಿ ಸೇವೆ ಸಲ್ಲಿಸದವರನ್ನು ಏಕೆ ಸದಸ್ಯರನ್ನಾಗಿ ನೇಮಕ ಮಾಡಲು ಕ್ರಮ ಕೈಗೊಂಡಿರುವುದಿಲ್ಲ;

(ಈ) ಕಳೆದ ಮೂರು ವರ್ಷಗಳಿಂದ ರಾಜ್ಯದಲ್ಲಿ ದಾಖಲಾದ ವಿವಿಧ ಅಪರಾಧ ಪ್ರಕರಣಗಳ ಸಂಖ್ಯೆ ಎಷ್ಟು ; (ಪ್ರಕರಣವಾರು ಮಾಹಿತಿ ನೀಡುವುದು)

(ಉ) ರಾಜ್ಯದಲ್ಲಿ ಅಪರಾಧ ಪ್ರಕರಣಗಳು ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅವುಗಳನ್ನು ತಡೆಗಟ್ಟಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ?

## ಯಶವಂತಪುರ ರೈಲ್ವೆ ನಿಲ್ದಾಣ ತಲುಪುವ ಮಾರ್ಗಗಳ ಅವ್ಯವಸ್ಥೆ ಬಗ್ಗೆ

**ಶ್ರೀ ಕೆ. ಗೋವಿಂದ ರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೮೩ (೩೫೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದ ಯಶವಂತಪುರ ರೈಲ್ವೆ ನಿಲ್ದಾಣಕ್ಕೆ ಬರುವ ಮತ್ತು ಇಲ್ಲಿಂದ ಪ್ರಯಾಣಿಸುವ ಪ್ರಯಾಣೀಕರ ಅಂದಾಜು ಸರ್ಕಾರಕ್ಕಿದೆಯೇ ; (ವಿವರ ಒದಗಿಸುವುದು)

(ಆ) ಯಶವಂತಪುರ ರೈಲ್ವೆ ನಿಲ್ದಾಣ ತಲುಪಲು ಮತ್ತು ನಿಲ್ದಾಣದಿಂದ ನಗರದ ಇತರೆಡೆಗೆ ಸಾಗಲು ಇರುವ ಮಾರ್ಗಗಳು ಕಿರಿದಾಗಿದ್ದು, ಬೀದಿ ಬದಿ ವ್ಯಾಪಾರಿಗಳು, ಅಂಗಡಿಗಳು, ರಸ್ತೆಯನ್ನು ಆಕ್ರಮಿಸಿಕೊಂಡಿರುವ ಅಂಶವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ ; ಹಾಗಿದ್ದಲ್ಲಿ, ಸುಗಮ ವಾಹನ ಸಂಚಾರಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು ;

(ಇ) ಯಶವಂತಪುರ ರೈಲ್ವೆ ನಿಲ್ದಾಣವನ್ನು ಮೇಲ್ದರ್ಜೆಗೇರಿಸಲು ಮತ್ತು ರಸ್ತೆಗಳ ಅಭಿವೃದ್ಧಿಗಾಗಿ ಈಗಾಗಲೇ ಕೇಂದ್ರ ಸರ್ಕಾರ ಅನುದಾನ ಒದಗಿಸಿರುವುದು ನಿಜವೇ ; ಹಾಗಿದ್ದಲ್ಲಿ, ಈ ಅಭಿವೃದ್ಧಿ ಕುರಿತು ಆಗಿರುವ ಪ್ರಗತಿ ಏನು ; (ವಿವರ ಒದಗಿಸುವುದು)

(ಈ) ಯಶವಂತಪುರ ರೈಲ್ವೆ ನಿಲ್ದಾಣ ತಲುಪಲು ಇರುವ ನ್ಯೂನತೆ ಸರಿಪಡಿಸುವ ನಿಟ್ಟಿನಲ್ಲಿ ಸರ್ಕಾರ ವಿಶೇಷ ಯೋಜನೆ ರೂಪಿಸಿದೆಯೇ ; ಹಾಗಿದ್ದಲ್ಲಿ, ವಿವರ ಒದಗಿಸುವುದು ?

## ಸಾರಿಗೆ ಸೆಸ್ ವಿಧಿಸುವ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೮೪ (೩೩೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಸಾರಿಗೆ ಸೆಸ್ ವಿಧಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದಲ್ಲಿ, ವಿಧಿಸಲಾಗುವ ಸಾರಿಗೆ ಸೆಸ್‌ನ ಪ್ರಮಾಣವೆಷ್ಟು ;

(ಇ) ಈ ಯೋಜನೆಯನ್ನು ಎಂದಿನಿಂದ ಜಾರಿಗೊಳಿಸಲಾಗುವುದು ?

## ಕೆ.ಎಸ್.ಆರ್.ಪಿ ಪರೀಕ್ಷೆಯಲ್ಲಿ ನಕಲಿ ಅಭ್ಯರ್ಥಿಗಳು ಪರೀಕ್ಷೆ ಬರೆದಿರುವ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೮೫ (೨೧೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆ.ಎಸ್.ಆರ್.ಪಿ. ಪರೀಕ್ಷೆಯಲ್ಲಿ ಕೆಲವು ಪೊಲೀಸ್ ಇಲಾಖೆಯ ಸಿಬ್ಬಂದಿಗಳು ಹಾಗೂ ಇತರರು ನಕಲಿ ಅಭ್ಯರ್ಥಿಗಳಾಗಿ ಪರೀಕ್ಷೆ ಬರೆದಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ನಕಲಿ ಅಭ್ಯರ್ಥಿಗಳ ವೇಷದಲ್ಲಿ ಪರೀಕ್ಷೆ ಬರೆದು ಬಂಧಿತರಾದ ಪೊಲೀಸ್ ಸಿಬ್ಬಂದಿಗಳ ಹಾಗೂ ಇತರರ ವಿವರವನ್ನು ನೀಡುವುದು ;

(ಇ) ನಕಲಿ ಜಾಲ ಭೇದಿಸಲು ಸರ್ಕಾರವು ಕೈಗೊಂಡ ಕ್ರಮಗಳಾವುವು ? (ವಿವರಗಳನ್ನು ಒದಗಿಸುವುದು)

## ರಾಜ್ಯದಲ್ಲಿರುವ ವಿವಿಧ ಸಮುದಾಯ ಅಭಿವೃದ್ಧಿ ಪ್ರಾಧಿಕಾರಗಳ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೮೬ (೩೪೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯಾದ್ಯಂತ ವಿವಿಧ ಸಮುದಾಯದವರ ಅಭಿವೃದ್ಧಿಯ ಹಿತದೃಷ್ಟಿಯಿಂದ ಸ್ಥಾಪಿಸಲಾಗಿರುವ ಒಟ್ಟು ಪ್ರಾಧಿಕಾರಗಳು/ ನಿಗಮಗಳು ಎಷ್ಟು ;

(ಆ) ಕಳೆದ ೦೫ ವರ್ಷಗಳಿಂದ ವಿವಿಧ ಸಮುದಾಯದವರ ಅಭಿವೃದ್ಧಿ ಹಿತದೃಷ್ಟಿಯಿಂದ ಸ್ಥಾಪಿಸಲಾಗಿರುವ ಪ್ರಾಧಿಕಾರಗಳು/ನಿಗಮಗಳಿಗೆ ಸರ್ಕಾರ ಒದಗಿಸಿದ ಅನುದಾನವೆಷ್ಟು ?

## ಕೋವಿಡ್–೧೯ ರ ಸಮಯದಲ್ಲಿ ಆಟೋ ಚಾಲಕರು ಮತ್ತು ಇತರರಿಗೆ ಸಹಾಯಧನ ನೀಡುವ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೮೭ (೩೪೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋವಿಡ್–೧೯ ಸಾಂಕ್ರಾಮಿಕ ರೋಗ ಹರಡಿ, ಲಾಕ್‌ಡೌನ್ ಘೋಷಣೆಗೊಂಡ ಸಮಯದಲ್ಲಿ, ದುಡಿಮೆಯಿಲ್ಲದೇ ಸಂಕಷ್ಟಕ್ಕೆ ಸಿಲುಕಿದ್ದ, ಟ್ಯಾಕ್ಸಿ ಚಾಲಕರು, ಆಟೋ ಚಾಲಕರು, ಕ್ಷೌರಿಕರು ಹಾಗೂ ಇನ್ನು ಮುಂತಾದ ಶ್ರಮಿಕ ವರ್ಗದವರಿಗೆ ರಾಜ್ಯ ಸರ್ಕಾರದಿಂದ ಸಹಾಯಧನವನ್ನು ಘೋಷಣೆ ಮಾಡಲಾಗಿದ್ದು, ಸದರಿ ಘೋಷಣೆಯ ಪ್ರಕಾರ ಗದಗ, ಧಾರವಾಡ ಮತ್ತು ಹಾವೇರಿ ಜಿಲ್ಲೆಗಳಲ್ಲಿ ಒಟ್ಟು ಎಷ್ಟು ಟ್ಯಾಕ್ಸಿ ಚಾಲಕರು, ಆಟೋ ಚಾಲಕರು, ಕ್ಷೌರಿಕರು ಹಾಗೂ ಇನ್ನುಳಿದ ಘೋಷಿತ ಶ್ರಮಿಕ ವರ್ಗದವರು ನೊಂದಾಯಿತರಾಗಿದ್ದಾರೆ ಅಲ್ಲದೇ ಎಷ್ಟು ಘೋಷಿತ ಶ್ರಮಿಕ ವರ್ಗದವರಿಗೆ ಸಹಾಯಧನವನ್ನು ನೀಡಲಾಗಿದೆ;

(ಆ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಯಲ್ಲಿ ಒಟ್ಟು ಎಷ್ಟು ಟ್ಯಾಕ್ಸಿ ಚಾಲಕರು, ಆಟೋ ಚಾಲಕರು, ಕ್ಷೌರಿಕರು ಹಾಗೂ ಇನ್ನುಳಿದ ಘೋಷಿತ ಶ್ರಮಿಕ ವರ್ಗದವರಿಗೆ ಸಹಾಯಧನ ನೀಡುವುದು ಬಾಕಿಯಿದೆ; ಬಾಕಿ ಉಳಿಯಲು ಕಾರಣಗಳೇನು ;

(ಇ) ಎಲ್ಲ ನೋಂದಾಯಿತ ಟ್ಯಾಕ್ಸಿ ಚಾಲಕರು, ಆಟೋ ಚಾಲಕರು, ಕ್ಷೌರಿಕರು ಹಾಗೂ ಇನ್ನುಳಿದ ಘೋಷಿತ ಶ್ರಮಿಕ ವರ್ಗದವರಿಗೆ ಸಹಾಯಧನವನ್ನು ಬಿಡುಗಡೆಗೊಳಿಸಲಾಗುವುದು ಯಾವಾಗ ?

## ೨೦೧೯-೨೦ನೇ ಸಾಲಿನ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಅನುದಾನದ ಕುರಿತು

**ಶ್ರೀ ಕೆ.ವಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೮೮ (೪೫೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೯-೨೦ನೇ ಸಾಲಿನಲ್ಲಿ ಮೈಸೂರು ಜಿಲ್ಲೆಯಲ್ಲಿ, ಮಾನ್ಯ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿಯಲ್ಲಿ ಶಾಸಕರು ನೀಡಿರುವ ಕ್ರಿಯಾ ಯೋಜನೆ ಪಟ್ಟಿಯಲ್ಲಿರುವ ಎಲ್ಲಾ ಕಾಮಗಾರಿಗಳಿಗೆ ಸರ್ಕಾರ ಈಗಾಗಲೇ ಸೂಚಿಸಿರುವಂತೆ ಕಾರ್ಯಾದೇಶ ನೀಡಿ ಅನುದಾನ ಬಿಡುಗಡೆಗೊಳಿಸಲಾಗಿದೆಯೇ;

(ಆ) ಮೈಸೂರು ಜಿಲ್ಲೆಯನ್ನು ನೋಡಲ್ ಜಿಲ್ಲೆಯಾಗಿ ಆಯ್ಕೆ ಮಾಡಿಕೊಂಡಿರುವ ಪ್ರತಿಯೊಬ್ಬ ಶಾಸಕರು ೨೦೧೯-೨೦ನೇ ಸಾಲಿಗೆ ಎಷ್ಟು ಮೊತ್ತದ ಕಾಮಗಾರಿಗಳಿಗಾಗಿ ಪತ್ರ ನೀಡಿರುತ್ತಾರೆ ; (ಪ್ರತಿಯೊಬ್ಬ ಶಾಸಕರ ಕ್ರಿಯಾ ಯೋಜನೆಯ ಮೊತ್ತ ಪ್ರತ್ಯೇಕವಾಗಿ ನೀಡುವುದು)

(ಇ) ೨೦೧೯-೨೦ನೇ ಸಾಲಿನಲ್ಲಿ ಪ್ರತಿಯೊಬ್ಬ ಶಾಸಕರು ಸೂಚಿಸಿರುವ ಕಾಮಗಾರಿಗಳಿಗೆ ಇದುವರೆಗೆ ಎಷ್ಟು ಮೊತ್ತವನ್ನು ಬಿಡುಗಡೆ ಮಾಡಲಾಗಿದೆ ? (ಪ್ರತಿಯೊಬ್ಬ ಶಾಸಕರಿಗೆ ಇದುವರೆಗೆ ನೀಡಿರುವ ಅನುದಾನದ ಮೊತ್ತವನ್ನು ಪ್ರತ್ಯೇಕವಾಗಿ ನೀಡುವುದು)

# ೨೦೧೯-೨೦ನೇ ಸಾಲಿನ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಅನುದಾನ ಬಿಡುಗಡೆ ಕುರಿತು

**ಶ್ರೀ ಕೆ.ವಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೮೯ (೪೫೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೈಸೂರು ಜಿಲ್ಲೆಯಲ್ಲಿ ೨೦೧೯-೨೦ನೇ ಸಾಲಿನಲ್ಲಿ ಪಿ.ಡಿ. ಖಾತೆಯಲ್ಲಿರುವ ಅನುದಾನವನ್ನು ಶಾಸಕರಿಗೆ ೨.೦೦ ಕೋಟಿಯವರೆಗೂ ಬಿಡುಗಡೆ ಮಾಡುವಂತೆ ಸೂಚಿಸಿ ಸರ್ಕಾರದಿಂದ ಪತ್ರ ಬರೆಯಲಾಗಿದೆಯೇ ;

(ಆ) ಹಾಗಿದ್ದಲ್ಲಿ, ಇಲ್ಲಿಯವರೆಗೂ ಎಷ್ಟು ಶಾಸಕರು ನೀಡಿದ ೨.೦೦ ಕೋಟಿಯವರೆಗಿನ ಕಾಮಗಾರಿಗಳಿಗೆ ಅನುದಾನ ಬಿಡುಗಡೆ ಮಾಡಲಾಗಿದೆ ;

(ಇ) ಅನುದಾನ ಬಿಡುಗಡೆ ಮಾಡದಿದ್ದಲ್ಲಿ, ಕಾರಣಗಳೇನು ;

(ಈ) ಅನುದಾನ ಕೊರತೆಯಿದ್ದಲ್ಲಿ, ಸರ್ಕಾರ ಸೂಚಿಸಿರುವಂತೆ ಅನುದಾನ ಬಿಡುಗಡೆ ಮಾಡುವಂತೆ ಕೋರಿ ಸರ್ಕಾರಕ್ಕೆ ಪತ್ರ ಬರೆಯಲಾಗಿದೆಯೇ; ಬರೆದಿದ್ದಲ್ಲಿ, ಸದರಿ ಪತ್ರಕ್ಕೆ ಸರ್ಕಾರದಿಂದ ಬಂದ ಉತ್ತರವೇನು ;

(ಉ) ಪ್ರಸ್ತುತ ಪಿ.ಡಿ. ಖಾತೆಯಲ್ಲಿರುವ ಅನುದಾನವೆಷ್ಟು; ಪ್ರತಿ ಶಾಸಕರಿಗೆ ೨.೦೦ ಕೋಟಿಗಳ ಅನುದಾನ ಬಿಡುಗಡೆ ಮಾಡಲು ಕೊರತೆಯಿರುವ ಅನುದಾನದ ಮೊತ್ತವೆಷ್ಟು ?

## ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯಿಂದ ಕೋವಿಡ್ ನಿಯಂತ್ರಣಕ್ಕಾಗಿ ಖರೀದಿಸಿದ ಯಂತ್ರಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೯೦ (೪೦೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯಿಂದ ಕೋವಿಡ್ ನಿಯಂತ್ರಣಕ್ಕಾಗಿ ಸರ್ಕಾರಿ ಆಸ್ಪತ್ರೆಗಳಿಗೆ ಖರೀದಿಸಲಾದ ವೈದ್ಯಕೀಯ ಯಂತ್ರೋಪಕರಣಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಕಾರ್ಯಗಳನ್ನು ಬಲವರ್ಧನೆಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ? (ವಿವರ ನೀಡುವುದು)

## ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಗೆ ಬಿಡುಗಡೆಯಾದ ಅನುದಾನ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೯೧ (೩೭೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಗೆ ಪ್ರಸಕ್ತವಾಗಿ ಘೋಷಿಸಲಾದ ಅನುದಾನ ಎಷ್ಟು; ಕಳೆದ ವರ್ಷಕ್ಕೆ ಹೋಲಿಸಿದರೆ ಎಷ್ಟು ಮೊತ್ತ ಕಡಿಮೆಯಾಗಿದೆ; ಇಲ್ಲಿಯವರೆಗೆ ಎಷ್ಟು ಅನುದಾನ ಬಿಡುಗಡೆಯಾಗಿದೆ ; (ವಿವರ ನೀಡುವುದು)

(ಆ) ಬಿಡುಗಡೆಯಾದ ಅನುದಾನದಲ್ಲಿ ರೂಪಿಸಲಾದ ಕ್ರಿಯಾ ಯೋಜನೆ ಏನು ; ಪೂರ್ಣ ಪ್ರಮಾಣದಲ್ಲಿ ಮಂಡಳಿ ರಚನೆಯಾಗುವುದು ಯಾವಾಗ ; (ವಿವರ ನೀಡುವುದು)

(ಇ) ಮಂಡಳಿಯಡಿ ಪ್ರತ್ಯೇಕ ಇಂಜಿನಿಯರಿಂಗ್ ವಿಭಾಗ ರಚನೆಯ ಪ್ರಸ್ತಾಪ ಸರ್ಕಾರದ ಮುಂದಿದೆಯೇ ? (ವಿವರ ನೀಡುವುದು)

## ಮಹಾರಾಷ್ಟ್ರದ ಡ್ಯಾಂಗಳಿಂದ ಭೀಮಾ ನದಿಗೆ ಭಾರಿ ಪ್ರಮಾಣದಲ್ಲಿ ನೀರು ಹರಿಸಿರುವುದರ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೯೨ (೩೬೯) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಾರಾಷ್ಟ್ರದ ಡ್ಯಾಂಗಳಿಂದ ಭೀಮಾ ನದಿಗೆ ಭಾರೀ ಪ್ರಮಾಣದಲ್ಲಿ ನೀರು ಹರಿಸಿರುವುದರಿಂದ ಕರ್ನಾಟಕ ನದಿ ತೀರದ ಗ್ರಾಮಗಳು ತತ್ತರಿಸಿ ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಮಹಾರಾಷ್ಟ್ರದ ಡ್ಯಾಂಗಳಿಂದ ನೀರು ಬಿಡುವ ಮೊದಲು ಕರ್ನಾಟಕಕ್ಕೆ ಮಾಹಿತಿ ನೀಡಲಾಗಿದೆಯೇ; ನೀಡಿದ್ದಲ್ಲಿ, ಅದರ ಸಂಪೂರ್ಣ ವಿವರ ನೀಡುವುದು ;

(ಇ) ಏಕಾಏಕಿ ಮಹಾರಾಷ್ಟ್ರದ ಡ್ಯಾಂಗಳಿಂದ ನೀರು ಬಿಡುವ ಮೊದಲು ಅಗತ್ಯ ಮಾಹಿತಿ ನೀಡುವ ಹಿನ್ನೆಲೆಯಲ್ಲಿ ಎರಡೂ ರಾಜ್ಯಗಳ ನಡುವೆ ಸಮನ್ವಯ ಸಮಿತಿ ರಚನೆ ಮಾಡುವ ಅಗತ್ಯತೆ ಕುರಿತು ಸರ್ಕಾರ ಮಹಾರಾಷ್ಟ್ರದೊಂದಿಗೆ ಚರ್ಚೆ ನಡೆಸಲು ಉದ್ದೇಶಿಸಿದೆಯೇ ? (ಉದ್ದೇಶಿಸಿದ್ದಲ್ಲಿ, ವಿವರ ನೀಡುವುದು)

# ಬಹು ಮಹಡಿ ಕಟ್ಟಡಗಳಿಗೆ ವಾಸಯೋಗ್ಯ ಪ್ರಮಾಣ ಪತ್ರ ನೀಡುವ ಬಗ್ಗೆ

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೯೩ (೩೩೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹಾನಗರದಲ್ಲಿ ಬಹು ಮಹಡಿ ಕಟ್ಟಡಗಳಿಗೆ ವಾಸ ಯೋಗ್ಯ ಪ್ರಮಾಣ ಪತ್ರ ನೀಡುವ ಸಮಯದಲ್ಲಿ ಅಗ್ನಿ ಶಾಮಕ ದಳದಿಂದ ನಿರಾಪೇಕ್ಷಣಾ ಪತ್ರವನ್ನು ಪಡೆಯುವುದನ್ನು ಕಡ್ಡಾಯಗೊಳಿಸಲಾಗಿದೆಯೇ ;

(ಆ) ವಾಸ ಯೋಗ್ಯ ಪ್ರಮಾಣ ಪತ್ರ ಪಡೆದ ಬಳಿಕ ಅಗ್ನಿ ಶಾಮಕ ವಾಹನವು ಓಡಾಡಲು ನಿಗದಿಪಡಿಸಿದ ಜಾಗದಲ್ಲಿ ಬಹುಮಹಡಿ ಕಟ್ಟಡಗಳು, ಪಾರ್ಕ್, ಜಿಮ್ ಮುಂತಾದ ಶಾಶ್ವತ ಕಾಮಗಾರಿಗಳ ಮೂಲಕ ಸೌಲಭ್ಯಗಳನ್ನು ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಅಕ್ರಮ ನಿರ್ಮಾಣಗಳನ್ನು ತೆರವುಗೊಳಿಸಲು ಅಥವಾ ಈಗಾಗಲೇ ನೀಡಿರುವ ವಾಸಯೋಗ್ಯ ಪ್ರಮಾಣ ಪತ್ರವನ್ನು ಹಿಂಪಡೆಯಲು ಸರ್ಕಾರ ಕ್ರಮ ಕೈಗೊಂಡಿದೆಯೇ;

(ಇ) ಇದುವರೆಗೆ ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಎಷ್ಟು ಬಹು ಮಹಡಿ ಕಟ್ಟಡಗಳ ವಾಸಯೋಗ್ಯ ಪ್ರಮಾಣ ಪತ್ರವನ್ನು ರದ್ದುಗೊಳಿಸಲಾಗಿದೆ; ಎಷ್ಟು ಬಹುಮಹಡಿ ಕಟ್ಟಡಗಳನ್ನು ವಾಸಯೋಗ್ಯ ಪ್ರಮಾಣಪತ್ರ ನೀಡಿದ ಬಳಿಕ ಪರಿಶೀಲನೆ ನಡೆಸಲಾಗಿದೆ ; (ವಿವರ ನೀಡುವುದು)

(ಈ) ಬೆಂಗಳೂರು ನಗರದಲ್ಲಿ ಅಧಿಕಾರಿಗಳು ಲಂಚ ಪಡೆದು ವಾಸಯೋಗ್ಯ ಪ್ರಮಾಣಪತ್ರ (o.c) ನೀಡುತ್ತಿರುವುದು ಸರ್ಕಾರದ

ಗಮನಕ್ಕೆ ಬಂದಿದೆಯೇ; ಈ ಕುರಿತು ಎಷ್ಟು ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆ ?

## ನ್ಯಾಯ ವಿಜ್ಞಾನ ಪ್ರಯೋಗಾಲಯದ ನೇಮಕಾತಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೯೪ (೨೪೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿ.ಎ.ಜಿ ವರದಿಯಲ್ಲಿ ನ್ಯಾಯ ವಿಜ್ಞಾನ ಪ್ರಯೋಗಾಲಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸೈಬರ್ ವಿಭಾಗದ ವರದಿ ನೀಡುವ ಅಧಿಕಾರಿಗಳು ಅರ್ಹ ವಿದ್ಯಾಭ್ಯಾಸವನ್ನು ಹೊಂದಿಲ್ಲ ಎಂಬುದಾಗಿ ವರದಿ ನೀಡಿದ್ದು, ಸದರಿ ಸಿಬ್ಬಂದಿಗಳು ಅರ್ಹ ವಿದ್ಯಾಭ್ಯಾಸವನ್ನು ಪೂರ್ಣಗೊಳಿಸಿರುತ್ತಾರೆಯೇ ;

(ಆ) ಸದರಿ ಸಿಬ್ಬಂದಿಗಳು ಅರ್ಹ ಪೂರಕ ವಿದ್ಯಾಭ್ಯಾಸವನ್ನು ಯಾವಾಗ ಪೂರ್ಣಗೊಳಿಸಿರುತ್ತಾರೆ; ಸದರಿ ಸಿಬ್ಬಂದಿಗಳು ಸೈಬರ್ ವಿಭಾಗದ ವರದಿ ನೀಡುವ ಶಾಖೆಯಲ್ಲಿ ಎಂದಿನಿಂದ ಕರ್ತವ್ಯ ನಿರ್ವಹಿಸುತ್ತಿದ್ದಾರೆ ? (ಹೆಸರಿನೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

## ಖಾಸಗಿ ವ್ಯಕ್ತಿಗಳ ವಾಹನ ಪ್ರವೇಶವನ್ನು ನಿರ್ಬಂಧಿಸುವ ಬಗ್ಗೆ

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೯೫ (೨೩೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಖಾಸಗಿ ವ್ಯಕ್ತಿಗಳಿಗೆ ವಿಧಾನ ಸೌಧ ಪ್ರವೇಶಿಸಲು ಅನುವಾಗುವಂತೆ ವಾಹನ ಪಾಸುಗಳನ್ನು ನೀಡಲು ಯಾರು ಶಿಫಾರಸ್ಸು

ಮಾಡಿರುತ್ತಾರೆ; ದಿನಾಂಕ:೨೪.೦೯.೨೦೨೦ ರ ಪ್ರಶ್ನೆ ಸಂಖ್ಯೆ ೬೫೨ ಕ್ಕೆ ನೀಡಿದ ಉತ್ತರದಲ್ಲಿ ತಿಳಿಸಿದಂತೆ ೨೯೬ ಖಾಸಗಿ ವ್ಯಕ್ತಿಗಳಿಗೆ ಪಾಸು ನೀಡಲು ಶಿಫಾರಸ್ಸು ಮಾಡಿದವರ ಹೆಸರು ಮತ್ತು ದೂರವಾಣಿ ಸಂಖ್ಯೆಯೊಂದಿಗೆ ಮಾಹಿತಿ ನೀಡುವುದು; ಯಾವ ಕಾರಣಗಳಿಗೆ ಖಾಸಗಿ ವ್ಯಕ್ತಿಗಳಿಗೆ ವಾಹನ ಪಾಸುಗಳನ್ನು ನೀಡಲಾಗಿದೆ ;

(ಆ) ಖಾಸಗಿ ವ್ಯಕ್ತಿಗಳಿಗೆ ಎಷ್ಟು ಅವಧಿಯ ಪಾಸು ನೀಡಲಾಗುತ್ತದೆ; ಅದಕ್ಕೆ ಕಾರಣಗಳೇನು; ಖಾಸಗಿ ವ್ಯಕ್ತಿಗಳು ತಮ್ಮ ವಾಹನದಲ್ಲಿ ದಿನ ಪ್ರತಿ ವಿಧಾನ ಸೌಧಕ್ಕೆ ಬರುತ್ತಾರೆಯೇ; ಸೀಮಿತ ಅವಧಿಯ ಪಾಸುಗಳನ್ನು ನೀಡುವ ಬಗ್ಗೆ ಸರ್ಕಾರದ ನಿಲುವೇನು ;

(ಇ) ಖಾಸಗಿ ವ್ಯಕ್ತಿಗಳು ರಾಜ್ಯದ ಶಕ್ತಿ ಕೇಂದ್ರಕ್ಕೆ ತಮ್ಮ ಸ್ವಂತ ವಾಹನದಲ್ಲಿ ಪ್ರವೇಶಿಸಿ ನಿಲುಗಡೆಗೊಳಿಸುತ್ತಿದ್ದು ಇದು ವಿಧಾನ ಸೌಧ ಮತ್ತು ಮುಖ್ಯಮಂತ್ರಿ ಹಾಗೂ ಸಚಿವರುಗಳ ಭದ್ರತೆಗೆ ಧಕ್ಕೆಯುಂಟು ಮಾಡಿದಂತಾಗಲಿಲ್ಲವೆ; ಈ ರೀತಿಯಾಗಿ ಖಾಸಗಿ ವ್ಯಕ್ತಿಗಳಿಗೆ ವಾಹನ ಪಾಸು ನೀಡುವ ಸಮಯದಲ್ಲಿ ಪೋಲೀಸ್ ವೆರಿಫಿಕೇಶನ್ ಮಾಡಲಾಗುತ್ತಿದೆಯೇ; ಈ ಕುರಿತು ಸರ್ಕಾರದ ನಿಲುವೇನು ;

(ಈ) ಈ ರೀತಿಯಾಗಿ ಖಾಸಗಿ ವ್ಯಕ್ತಿಗಳಿಗೆ ವಾಹನ ಪಾಸುಗಳನ್ನು ಪಡೆದುಕೊಂಡಿರುವ ವ್ಯಕ್ತಿಗಳಿಂದ ಮುಖ್ಯಮಂತ್ರಿ ಹಾಗೂ ಮಂತ್ರಿಗಳ ಭದ್ರತೆಗೆ ಧಕ್ಕೆಯುಂಟಾದಲ್ಲಿ ಪಾಸು ನೀಡಿದ ಶಾಖೆಯ ಶಾಖಾಧೀಕ್ಷಕರು, ಉಪ ಕಾರ್ಯದರ್ಶಿಯವರ ಮೇಲೆ ಸರ್ಕಾರ ಕ್ರಮ ಕೈಗೊಳ್ಳುವುದೇ; ಈ ಕುರಿತು ಸರಕಾರದ ನಿಲುವೇನು ?

# I.M.A ಹಗರಣದಲ್ಲಿ ಭಾಗಿಯಾದ IAS, IPS ಅಧಿಕಾರಿಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೯೬ (೨೪೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಐ.ಎಂ.ಎ ಹಗರಣದಲ್ಲಿ ಇದುವರೆಗೆ ಎಷ್ಟು ಐ.ಎ.ಎಸ್. ಮತ್ತು ಐ.ಪಿ.ಎಸ್. ಅಧಿಕಾರಿಗಳ ವಿರುದ್ಧ ಪ್ರಕರಣ ದಾಖಲಾಗಿದೆ ;

(ಆ) ಕ್ರಿಮಿನಲ್ ಮೊಕದ್ದಮೆ, ದಾಖಲಾದ ಐ.ಎ.ಎಸ್ ಮತ್ತು ಐ.ಪಿ.ಎಸ್. ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕೈಗೊಳ್ಳುವ ಕ್ರಮಗಳೇನು ; ಸದರಿ ಅಧಿಕಾರಿಗಳನ್ನು ಅಮಾನತ್ತುಗೊಳಿಸಲಾಗಿದೆಯೇ ; ಇಲ್ಲದಿದ್ದಲ್ಲಿ, ಯಾವ ನಿಯಮದ ಅನ್ವಯ ಸದರಿ ಅಧಿಕಾರಿಗಳಿಗೆ ಕರ್ತವ್ಯ ನಿರ್ವಹಿಸಲು ಅನುಮತಿ ನೀಡಲಾಗಿದೆ ;

(ಇ) ಕ್ರಿಮಿನಲ್ ಪ್ರಕರಣ ದಾಖಲಾದ ಸರಕಾರಿ ನೌಕರರನ್ನು ಅಮಾನತ್ತು ಮಾಡಿ ಇಲಾಖಾ ವಿಚಾರಣೆಗೆ ಆದೇಶ ನೀಡಲಾಗುವುದೇ; ಈ ಕುರಿತು ಇರುವ ನಿಯಮಗಳೇನು ;

(ಈ) ಕ್ರಿಮಿನಲ್ ಮೊಕದ್ದಮೆ ದಾಖಲಾದ ಐ.ಎ.ಎಸ್ ಮತ್ತು ಐ.ಪಿ.ಎಸ್ ಅಧಿಕಾರಿಗಳ ಮೇಲೆ ನ್ಯಾಯಾಲಯದಲ್ಲಿ ಪ್ರಕರಣ ನಡೆಯುತ್ತಿದ್ದರೂ ಯಾವ ನಿಯಮದ ಅನ್ವಯ ಮುಂಬಡ್ತಿ ನೀಡಲಾಗುತ್ತದೆ ?

## ಧ್ವನಿ ವರ್ಧಕದ ಮೂಲಕ ಪ್ರಾರ್ಥನೆ ಸಲ್ಲಿಸಲು ಅನುಮತಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೯೭ (೨೪೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ಮಸೀದಿಯಲ್ಲಿ ೫ ಬಾರಿ ಧ್ವನಿವರ್ಧಕದ ಮೂಲಕ ಜೋರಾಗಿ ಪ್ರಾರ್ಥನೆ ಸಲ್ಲಿಸುವುದರಿಂದ ಮಕ್ಕಳಿಗೆ, ರೋಗಿಗಳಿಗೆ ಹಾಗೂ ವೃದ್ಧರಿಗೆ ತೊಂದರೆ ಉಂಟಾಗುತ್ತಿರುವ ಕುರಿತು ಎಷ್ಟು ದೂರುಗಳು ದಾಖಲಾಗಿವೆ; ಈ ಕುರಿತು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಆ) ಧ್ವನಿವರ್ಧಕವನ್ನು ಜೋರಾಗಿ ಬಳಸಬಾರದೆಂದು ಮಾನ್ಯ ನ್ಯಾಯಾಲಯಗಳು ಹೊರಡಿಸಿರುವ ಆದೇಶವನ್ನು ಪಾಲಿಸಲಾಗುತ್ತಿದೆಯೇ; ಧ್ವನಿವರ್ಧಕವನ್ನು ಬಳಸುವ ಕುರಿತು ಪೊಲೀಸ್ ಇಲಾಖೆಯಲ್ಲಿ ಇರುವ ನಿಯಮಗಳೇನು ;

(ಇ) ಧ್ವನಿವರ್ಧಕಗಳನ್ನು ಬಳಸಲು ಅನುಮತಿ ನೀಡುವ ಅಧಿಕಾರಿ ಯಾರು; ಯಾವ ಯಾವ ಸಂದರ್ಭಗಳಲ್ಲಿ ಧ್ವನಿವರ್ಧಕಗಳನ್ನು ಬಳಸಲು ಅನುಮತಿ ನೀಡಲಾಗುತ್ತದೆ; ಖಾಯಂ ಆಗಿ ಧ್ವನಿವರ್ಧಕವನ್ನು ಅಳವಡಿಸಿ ದೊಡ್ಡ ಶಬ್ದದೊಂದಿಗೆ ಪ್ರಾರ್ಥನೆ ಸಲ್ಲಿಸಲು ಅನುಮತಿ ನೀಡಲಾಗಿದೆಯೇ; ಖಾಯಂ ಆಗಿ ಧ್ವನಿವರ್ಧಕಗಳನ್ನು ಅಳವಡಿಸಲು ನಿಯಮದಲ್ಲಿ ಅವಕಾಶ ಇದೆಯೇ ;

(ಈ) ಖಾಯಂ ಆಗಿ ಅಳವಡಿಸಿರುವ ಧ್ವನಿವರ್ಧಕಗಳನ್ನು ತೆರವುಗೊಳಿಸುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

**ಅನುಕಂಪದ ಆಧಾರದ ನೇಮಕಾತಿಯ ಮಾನದಂಡಗಳ ಕುರಿತು**

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೯೮ (೪೫೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೦೫ ವರ್ಷಗಳಲ್ಲಿ ಕಲಬುರಗಿ ಜಿಲ್ಲೆಯಲ್ಲಿ ಕಂದಾಯ ಇಲಾಖೆಯಲ್ಲಿ ಅನುಕಂಪದ ಆಧಾರದ ನೇಮಕಾತಿಗಾಗಿ ಸ್ವೀಕೃತವಾದ ಅರ್ಜಿಗಳೆಷ್ಟು ;

(ಆ) ಅದರಲ್ಲಿ ನೇಮಕಾತಿ ಮಾಡಿದ, ತಿರಸ್ಕರಿಸಿದ ಮತ್ತು ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು ;

(ಇ) ಅನುಕಂಪ ಆಧಾರದ ನೇಮಕಾತಿಗಾಗಿ ಅನುಸರಿಸುವ ಮಾನದಂಡಗಳೇನು ;

(ಈ) ಅನುಕಂಪದ ಆಧಾರದ ನೇಮಕಾತಿಗಾಗಿ ವಿಳಂಬ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು ?

**ಕನ್ನಡ ಶಾಸ್ತ್ರೀಯ ಭಾಷೆ ಅಧ್ಯಯನ ಕೇಂದ್ರದ ಅನುದಾನ**

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೯೯ (೩೬೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು

ದಯವಿಟ್ಟು ತಿಳಿಸುವರೆ :-

(ಅ) ಮೈಸೂರು ಮಾನಸ ಗಂಗೋತ್ರಿಯಲ್ಲಿ ಸ್ಥಾಪಿತವಾಗಿರುವ ಕನ್ನಡ ಶಾಸ್ತ್ರೀಯ ಭಾಷೆ ಉನ್ನತ ಅಧ್ಯಯನ ಕೇಂದ್ರಕ್ಕೆ ಅಗತ್ಯವಾಗಿರುವ ಪೂರ್ಣ ಪ್ರಮಾಣ ಸಿಬ್ಬಂದಿಯನ್ನು ಒದಗಿಸುವ ಮೂಲಕ ಕೇಂದ್ರವು ತ್ವರಿತವಾಗಿ ಕಾರ್ಯ ಪ್ರವೃತ್ತರಾಗಲು ಕ್ರಮ ಜರುಗಿಸಲಾಗುವುದೇ; ಈ ಕೇಂದ್ರದ ಮೂಲಕ ಶಾಸ್ತ್ರೀಯ ಭಾಷೆ ಅಧ್ಯಯನದ ನಿಟ್ಟಿನಲ್ಲಿ ಯಾವ ಯಾವ ಯೋಜನೆಗಳನ್ನು ರೂಪಿಸಲಾಗಿದೆ; ಈ ಯೋಜನೆಗಳನ್ನು ಕೇಂದ್ರ ಸರ್ಕಾರಕ್ಕೆ ಕಳುಹಿಸಿ ಸೂಕ್ತ ಅನುದಾನ ಪಡೆಯಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ ;

(ಆ) ಕನ್ನಡ ಶಾಸ್ತ್ರೀಯ ಭಾಷೆ ಎಂದು ಘೋಷಿತವಾದ ಮೇಲೆ, ಶಾಸ್ತ್ರೀಯ ಭಾಷೆಯ ಆಧ್ಯಯನಕ್ಕೆ ಇದುವರೆಗೆ ಕೇಂದ್ರದಿಂದ ದೊರೆತಿರುವ ಅನುದಾನ/ನೆರವು ಎಷ್ಟು ;

(ಇ) ವಿಶ್ವವಿದ್ಯಾನಿಲಯಗಳ ಮೂಲಕ ಕನ್ನಡ ಶಾಸ್ತ್ರೀಯ ಭಾಷೆ ಅಧ್ಯಯನದ ನಿಟ್ಟಿನಲ್ಲಿ ಯಾವ ಯಾವ ಯೋಜನೆಗಳನ್ನು ರೂಪಿಸಿ ಜಾರಿಗೊಳಿಸಲಾಗಿದೆ ? (ವಿವರ ಒದಗಿಸುವುದು)

## ತಲಕಾಡನ್ನು ಪ್ರವಾಸೋದ್ಯಮ ಪಟ್ಟಿಗೆ ಸೇರಿಸಿ ಅಭಿವೃದ್ಧಿಪಡಿಸುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೦೦ (೩೫೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತಲಕಾಡನ್ನು ಪ್ರವಾಸೋದ್ಯಮ ಇಲಾಖೆ ಗುರುತಿಸಿರುವ ಐತಿಹಾಸಿಕ ಪ್ರವಾಸೋದ್ಯಮ ಸ್ಥಳಗಳ ಪ್ರವಾಸೋದ್ಯಮ ಪಟ್ಟಿಗೆ ಸೇರಿಸುವಂತೆ ಮನವಿ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ತಲಕಾಡು, ಮುಡುಕುತೊರೆ, ಮಾಧವಮಂತ್ರಿ ಅಣೆಕಟ್ಟು, ಇವುಗಳನ್ನು ಪ್ರವಾಸೋದ್ಯಮ ಪಟ್ಟಿಗೆ ಸೇರಿಸಿ ಅಭಿವೃದ್ಧಿಪಡಿಸಲು ಹಾಗೂ ಮಾಧವ ಮಂತ್ರಿ ಅಣೆಕಟ್ಟಿನಲ್ಲಿ ದೋಣಿವಿಹಾರ ಕೇಂದ್ರ ಆರಂಭಿಸಲು ಸರ್ಕಾರದಿಂದ ಕ್ರಮ ಜರುಗಿಸಲಾಗುವುದೇ ;

(ಇ) ಮುಡುಕುತೊರೆ ಮಲ್ಲಿಕಾರ್ಜುನ ದೇವಾಲಯದ ಪುನರ್ ನಿರ್ಮಾಣ ಕಾರ್ಯದಲ್ಲಿ ಅಲ್ಲಿರುವ ಪ್ರಾಚೀನ ವರ್ಣಚಿತ್ರಗಳಿಗೆ/ ಶಿಲ್ಪಿಗಳಿಗೆ ಧಕ್ಕೆ ಆಗದಂತೆ ಎಚ್ಚರಿಕೆ ವಹಿಸಿ ಕಾಮಗಾರಿ ನಿರ್ವಹಿಸಲು ಕ್ರಮ ವಹಿಸಲಾಗುವುದೇ ?

## ಬಯಲು ಸೀಮೆ ಅಭಿವೃದ್ಧಿ ಮಂಡಳಿಗೆ ಬಿಡುಗಡೆಯಾದ ಅನುದಾನದ ಕುರಿತು

**ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೦೧ (೩೨೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಮೂರು ೦೩ ವರ್ಷಗಳಲ್ಲಿ ಬಯಲು ಸೀಮೆ ಅಭಿವೃದ್ಧಿ ಮಂಡಳಿಗೆ ಬಿಡುಗಡೆಯಾದ ಅನುದಾನ ಎಷ್ಟು ; (ವರ್ಷವಾರು ಮತ್ತು ಶಾಸಕರ ಕ್ಷೇತ್ರವಾರು ಮಾಹಿತಿ ನೀಡುವುದು)

(ಆ) ಕಳೆದ ಮೂರು ೦೩ ವರ್ಷಗಳಲ್ಲಿ ಬಯಲು ಸೀಮೆ ಅಭಿವೃದ್ಧಿ ಮಂಡಳಿಯಿಂದ ವಿಜಯಪುರ–ಬಾಗಲಕೋಟೆ ಕ್ಷೇತ್ರಗಳಲ್ಲಿ ಕೈಗೊಳ್ಳಲಾದ ಕಾಮಗಾರಿಗಳಾವುವು;(ವರ್ಷವಾರು ಮತ್ತು ಶಾಸಕರ ಕ್ಷೇತ್ರವಾರು ಮಾಹಿತಿಯನ್ನು ನೀಡುವುದು)

(ಇ) ವಿಜಯಪುರ–ಬಾಗಲಕೋಟೆ ಜಿಲ್ಲೆಗಳಲ್ಲಿ ಮಾನ್ಯ ಶಾಸಕರುಗಳ ಕ್ಷೇತ್ರಗಳಿಗೆ ಕಳೆದ ೦೩ ವರ್ಷಗಳಲ್ಲಿ ಬಿಡುಗಡೆಯಾದ ಅನುದಾನವೆಷ್ಟು ? (ಮಾನ್ಯ ಶಾಸಕರ ಹೆಸರು ಸಹಿತ ಕೈಗೊಂಡ ಕಾಮಗಾರಿಗಳ ವಿವರಗಳನ್ನು ನೀಡುವುದು)

## ಬಯಲು ಸೀಮೆ ಅಭಿವೃದ್ಧಿ ಮಂಡಳಿಗೆ ಬಿಡುಗಡೆಯಾದ ಅನುದಾನದ ಕುರಿತು

**ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೦೨ (೨೨೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಬಯಲು ಸೀಮೆ ಅಭಿವೃದ್ಧಿ ಮಂಡಳಿಗೆ ಬಿಡುಗಡೆಯಾದ ಅನುದಾನ ಎಷ್ಟು ; (ವರ್ಷವಾರು ಮತ್ತು ಶಾಸಕರ ಕ್ಷೇತ್ರವಾರು ಮಾಹಿತಿ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಬಯಲು ಸೀಮೆ ಅಭಿವೃದ್ಧಿ ಮಂಡಳಿಯಿಂದ ವಿಜಯಪುರ–ಬಾಗಲಕೋಟೆ ಕ್ಷೇತ್ರಗಳಲ್ಲಿ ಕೈಗೊಳ್ಳಲಾದ ಕಾಮಗಾರಿಗಳಾವುವು ; (ಮಾಹಿತಿಯನ್ನು ವರ್ಷವಾರು ಮತ್ತು ಶಾಸಕರ ಕ್ಷೇತ್ರವಾರು ನೀಡುವುದು)

(ಇ) ವಿಜಯಪುರ–ಬಾಗಲಕೋಟ ಜಿಲ್ಲೆಗಳಲ್ಲಿಯ ಮಾನ್ಯ ಶಾಸಕರುಗಳ ಕ್ಷೇತ್ರಗಳಿಗೆ ಕಳೆದ ೩ ವರ್ಷಗಳಲ್ಲಿ ಬಿಡುಗಡೆಯಾದ ಅನುದಾನ ಎಷ್ಟು ? (ವಿವರವನ್ನು ಮಾನ್ಯ ಶಾಸಕರ ಹೆಸರು ಸಹಿತ ಹಾಗೂ ಕೈಗೊಂಡ ಕಾಮಗಾರಿಗಳ ವಿವರಗಳನ್ನು ನೀಡುವುದು)

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು.

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 090/400 ಪ್ರತಿಗಳು/07–12–2020